ಅನುಬಂಧ – 1

ಕರ್ನಾಟಕ ವಿಧಾನ ಸಭೆ

ಹದಿಮೂರನೇ ವಿಧಾನಸಭೆ

ಎರಡನೇ ಅಧಿವೇಶನ

ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ವಿಧೇಯಕ, 2009

(2009 ರ ವಿಧಾನಸಭೆಯ ವಿಧೇಯಕ ಸಂಖ್ಯೆ 7)

ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 ನ್ನು ಮತ್ತಷ್ಟು ತಿದ್ದುಪಡಿ ಮಾಡುವುದಕ್ಕಾಗಿ ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976 (1977ರ ಕರ್ನಾಟಕ ಅಧಿನಿಯಮ 14) ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ :-

1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ :- (1) ಈ ಅಧಿನಿಯಮವನ್ನು ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ಅಧಿನಿಯಮ, 2009 ಎಂದು ಕರೆಯತಕ್ಕದ್ದು.

(2) ಇದು ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ಅಧ್ಯಾದೇಶ 2008 (2008 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 1) ಜಾರಿಗೆ ಬಂದ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

2. 3 ನೇ ಪ್ರಕರಣದ ತಿದ್ದುಪಡಿ :- ಕರ್ನಾಟಕ ಪೌರನಿಗಮಗಳ ಅಧಿನಿಯಮ, 1976 (1976 ರ ಕರ್ನಾಟಕ ಅಧಿನಿಯಮ 14) (ಇಲ್ಲಿ ಇನ್ನು ಮುಂದೆ ಮೂಲ ಅಧಿನಿಯಮವೆಂದು ಉಲ್ಲೇಖಿಸಲಾಗಿದೆ.) 3 ನೇ ಪ್ರಕರಣದಲ್ಲಿ (2) ನೇ ಉಪ ಪ್ರಕರಣದ ತರುವಾಯ ಈ ಮುಂದಿನದನ್ನು ಸೇರಿಸತಕ್ಕದ್ದು, ಎಂದರೆ :-

"ಪರಂತು, "ಬೆಂಗಳೂರು ನಗರ ಪಾಲಿಕೆ"ಯನ್ನು "ಬೃಹತ್ ಬೆಂಗಳೂರು ಮಹಾ ನಗರಪಾಲಿಕೆ" ಎಂದು ಕರೆಯತಕ್ಕದ್ದು"

3. 108 ಎ ಹೊಸ ಪ್ರಕರಣದ ಸೇರ್ಪಡೆ :- ಮೂಲ ಅಧಿನಿಯಮದ 108 ಎ ಪ್ರಕರಣದ ತರುವಾಯ, ಈ ಮುಂದಿನ ಹೊಸ ಪ್ರಕರಣವನ್ನು ಸೇರಿಸತಕ್ಕದ್ದು, ಎಂದರೆ :-

108ಎ. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಂಬಂಧದಲ್ಲಿ ಆಸ್ತಿ ತೆರಿಗೆಯ ವಿಧಿಸುವಿಕೆ ಮತ್ತು ಲೆಕ್ಕಾಚಾರ :- (1) ಈ ಅಧಿನಿಯಮದಲ್ಲಿ ಇದಕ್ಕೆ ವಿರುದ್ಧವಾಗಿ ಏನೇ ಇದ್ದರೂ, ಈ ಅಧಿನಿಯಮದಡಿಯಲ್ಲಿ ಉಪಬಂಧಿಸಲಾದಂಥ ವಿನಾಯಿತಿಗಳಿಗೆ ಮತ್ತು ನಿಯಮಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪ್ರದೇಶದ ನಗರದೊಳಗೆ ಇರುವ ಎಲ್ಲಾ ಕಟ್ಟಡಗಳಿಗೆ ಅಥವಾ ಖಾಲಿ ಜಾಗಗಳಿಗೆ ಅಥವಾ ಅವೆರಡಕ್ಕೂ ಪ್ರತಿವರ್ಷವೂ ಈ ಮುಂದಿನ ರೀತಿಯಲ್ಲಿ ಆಸ್ತಿ ತೆರಿಗೆಯನ್ನು ವಿಧಿಸತಕ್ಕದ್ದು.

(2) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು, 106 ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದಂತೆ ನಿರ್ಣಯವನ್ನು ಹೊರಡಿಸಿ, ಕಟ್ಟಡದ, ಖಾಲಿಜಾಗದ ಅಥವಾ ಅವೆರಡರ ತೆರಿಗೆ ವಿಧಿಸಬಹುದಾದ ವಾರ್ಷಿಕ ಮೌಲ್ಯದ ಶೇಕಡ 20 ಕ್ಕೆ ಕಡಿಮೆಯಿಲ್ಲದ ಮತ್ತು ಶೇಕಡ 25 ನ್ನು ಮೀರದ ಶೇಕಡಾವಾರು ದರದಲ್ಲಿ ಆಸ್ತಿ ತೆರಿಗೆಯನ್ನು ವಿಧಿಸತಕ್ಕದ್ದು. ಒಂದು ಕಟ್ಟಡಕ್ಕೆ, ಖಾಲಿಜಾಗಕ್ಕೆ ಅಥವಾ ಅವೆರಡಕ್ಕೂ ತೆರಿಗೆ ವಿಧಿಸಬಹುದಾದ ವಾರ್ಷಿಕ ಮೌಲ್ಯವನ್ನು, ಲೆಕ್ಕಾಚಾರ ಮಾಡಲು ಮೊದಲು ಕಟ್ಟಡದ, ಖಾಲಿ ಜಾಗದ ಅಥವಾ ಅವೆರಡರ ಒಟ್ಟು ನಿರ್ಮಿತ ಪ್ರದೇಶವನ್ನು ಸಂವಾದಿಯಾದ "ಘಟಕ ಪ್ರದೇಶ ಮೌಲ್ಯ" ದಿಂದ ಗುಣಾಕಾರ ಮಾಡಿ ಬಂದ ಗುಣಲಬ್ಧವನ್ನು ಹತ್ತು ತಿಂಗಳುಗಳಿಗೆ ಲೆಕ್ಕ ಹಾಕತಕ್ಕದ್ದು ಮತ್ತು ಕಟ್ಟಡಕ್ಕೆ ಆಗಿರುವ ವಯಸ್ಸಿನ ಆಧಾರದ ಮೇಲೆ ನಿಯಮಿಸಬಹುದಾದಂಥ ದರದಲ್ಲಿ ಸವಕಳಿಯನ್ನು ಅದರಿಂದ ಕಳೆಯತಕ್ಕದ್ದು.

ವಿವರಣೆ :- ಈ ಪ್ರಕರಣದ ಉದ್ದೇಶಕ್ಕಾಗಿ "ಘಟಕ ಪ್ರದೇಶ ಮೌಲ್ಯ" ಎಂದರೆ, ಸಮೂಹ ಮೌಲ್ಯ ನಿರ್ಣಯ ವಿಧಾನ ಅಥವಾ ಸ್ಥಿರಾಸ್ತಿ ಮಾರುಕಟ್ಟೆ ಮಾಹಿತಿ ಅಥವಾ ಇತರ ನಂಬಲರ್ಹ ಮೂಲ ಅಥವಾ ಈ ಮೂಲಗಳ ಸಂಯೋಜನೆಯ ಮೂಲಕ, ಕಟ್ಟಡ ನಿರ್ಮಾಣದ ರೀತಿ, ಖಾಲಿ ಜಾಗ ಅಥವಾ ಕಟ್ಟಡವನ್ನು ಉಪಯೋಗಿಸಿರುವ ಸ್ವರೂಪ, ಖಾಲಿ ಜಾಗದ ವಿಸ್ತೀರ್ಣ, ಕಟ್ಟಡ ನಿರ್ಮಿತ ಪ್ರದೇಶ, ಕಟ್ಟಡದ ವಯಸ್ಸು, ವಸತಿಯೇತರ ಕಟ್ಟಡದಲ್ಲಿ ವಾಹನಗಳ ನಿಲುಗಡೆ ಚಾರ್ಜು ಮಾಡಿ ನಿಲುಗಡೆ ಅವಕಾಶ ಕಲ್ಪಿಸಿರುವ ಪ್ರದೇಶ ಮತ್ತು ನಿಯಮಿಸಬಹುದಾದಂಥ ಇತರ ಮಾನದಂಡಗಳನ್ನು

ಗಮನದಲ್ಲಿಟ್ಟುಕೊಂಡು ತಾನು ಪರ್ಯಾಪ್ತ ಮತ್ತು ಸಮಂಜಸವೆಂದು ಪರಿಗಣಿಸಿ ಅಥವಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು ನಿರ್ಧರಿಸಿದ ಸರಾಸರಿ ಮಾರುಕಟ್ಟೆ ದರದ ಆಧಾರದ ಮೇಲೆ ಪ್ರತಿ ತಿಂಗಳಿಗೆ ಪ್ರತಿ ಚದರಡಿಯಿಂದ ನಿರೀಕ್ಷಿಸಲಾದ ಆದಾಯದ ಸರಾಸರಿ ದರ. ವಲಯಗಳಾಗಿ ವರ್ಗೀಕರಿಸಿದ ವಿವಿಧ ಪ್ರದೇಶಕ್ಕೆ ಅಥವಾ ಬೀದಿಗೆ, ಖಾಲಿ ಜಾಗವನ್ನು ಅಥವಾ ಕಟ್ಟಡವನ್ನು ಬಳಸಿದ ವಿಭಿನ್ನ ಸ್ವರೂಪಕ್ಕೆ ವಿವಿಧ ವರ್ಗದ ಕಟ್ಟಡಗಳು ಮತ್ತು ಖಾಲಿ ಜಾಗಗಳಿಗೆ ಪ್ರತ್ಯೇಕ ದರಗಳನ್ನು ನಿಗದಿಪಡಿಸಬಹುದು:

ಪರಂತು, " ಘಟಕ ಪ್ರದೇಶ ಮೌಲ್ಯ" ವನ್ನು ಕುರಿತು ಅದರಿಂದ ಬಾಧಿತರಾಗಬಹುದಾದ ವ್ಯಕ್ತಿಗಳ ಮಾಹಿತಿಗಾಗಿ ಈ ಬಗ್ಗೆ ಯಾವುದೇ ಮನವಿಯನ್ನು ಸಲ್ಲಿಸುವುದಕ್ಕೆ ಅಥವಾ ಸಲಹೆಗಳನ್ನು ನೀಡುವುದಕ್ಕೆ ಒಂದು ಅವಕಾಶವನ್ನು ಒದಗಿಸುವುದಕ್ಕಾಗಿ, ಅದನ್ನು ಈ ಹಿಂದೆಯೇ ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಿಸಿದ್ದ ಹೊರತು, ಅಂಥ ಯಾವ ಘಟಕ ಪ್ರದೇಶ ಮೌಲ್ಯವೂ ಜಾರಿಗೆ ಬರತಕ್ಕದ್ದಲ್ಲ:

ಮತ್ತೂ ಪರಂತು, ಒಂದು ಕಟ್ಟಡಕ್ಕೆ ಹೊಂದಿಕೊಂಡಿರುವ ಮತ್ತು ಅಂಥ ಕಟ್ಟಡವನ್ನು ಕಟ್ಟಿರುವ ಪ್ರದೇಶದ ಮೂರರಷ್ಟನ್ನು ಮೀರದ ವಿಸ್ತೀರ್ಣದ, ಭೂಮಿಗೆ, ಆಸ್ತಿ ತೆರಿಗೆಯಿಂದ ವಿನಾಯಿತಿ ನೀಡತಕ್ಕದ್ದು :

ಅಷ್ಟೇ ಅಲ್ಲದೆ, ಅಧಿಸೂಚಿಸಬಹುದಾದಂಥ ಷರತ್ತುಗಳು ಮತ್ತು ಅಂಥ ಸನ್ನಿವೇಶಗಳಿಗೊಳಪಟ್ಟು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರು,-

(ಎ) ಕರ್ನಾಟಕ ಕೊಳಚೆ ಪ್ರದೇಶ ನಿರ್ಮೂಲನಾ ಮಂಡಳಿಯಿಂದ ಅಥವಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಂದ ಕೊಳಚೆ ಪ್ರದೇಶವೆಂದು ಘೋಷಿಸಲ್ಪಟ್ಟಿರುವ ಒಂದು ಪ್ರದೇಶದಲ್ಲಿರುವ 200 ಚದರಡಿಗಿಂತಲೂ ಕಡಿಮೆ ವಿಸ್ತೀರ್ಣದ ಕಟ್ಟಡ ನಿರ್ಮಿತ ಪ್ರದೇಶದ ; ಮತ್ತು

(ಬಿ) ನಿವಾಸೇತರ ಕಟ್ಟಡದಲ್ಲಿ ವಾಹನ ನಿಲುಗಡೆ ಪ್ರದೇಶವಾಗಿ ಉಪಯೋಗಿಸುತ್ತಿದ್ದು ಅದರ ಮಾಲೀಕ ಅಥವಾ ಅಧಿಭೋಗದಾರನು ಅದರ ಉಪಯೋಗಕ್ಕಾಗಿ ಚಾರ್ಜು ಮಾಡಿರುವ ಪ್ರದೇಶದ,

(ಸಿ) ಅವರು ಸೂಕ್ತವೆಂದು ಭಾವಿಸಬಹುದಾದಂಥ ಯಾವುವೇ ಇತರ ವರ್ಗಗಳ ಕಟ್ಟಡ ಅಥವಾ ನಿರ್ಮಿತಿಯ, ಸಂಬಂಧದಲ್ಲಿ ವಲಯ ವರ್ಗೀಕರಣವನ್ನು

ಗಣನೆಗೆ ತೆಗೆದುಕೊಳ್ಳದೆ, (2) ನೇ ಉಪ ಪ್ರಕರಣದ ಅಡಿಯಲ್ಲಿನ ತೆರಿಗೆಗೆ ಬದಲಾಗಿ ಒಂದು ಇಡಿಗಂಟು ಮೊತ್ತವನ್ನು ವಾರ್ಷಿಕ ತೆರಿಗೆಯನ್ನಾಗಿ ನಿಗದಿಪಡಿಸಬಹುದು.

(3) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಸರ್ಕಾರಿ ಭೂಮಿಯಲ್ಲಿ ಯಾವುದೇ ಸ್ಥಳೀಯ ನಿಕಾಯದ ಭೂಮಿಯಲ್ಲಿ ಯಾವುದೇ ಶಾಸನಬದ್ಧ ನಿಕಾಯದ ಭೂಮಿಯಲ್ಲಿ ಅಥವಾ ಸರ್ಕಾರದ ಒಡೆತನದಲ್ಲಿರುವ ಅಥವಾ ನಿಯಂತ್ರಣದಲ್ಲಿರುವ ಒಂದು ಸಂಸ್ಥೆಗೆ ಸೇರಿರುವ ಭೂಮಿಯಲ್ಲಿ ಕಾನೂನು ಬಾಹಿರವಾಗಿ ನಿರ್ಮಿಸಿದ ಕಟ್ಟಡವನ್ನು ಹೊರತುಪಡಿಸಿ, ಕಟ್ಟಡದ ಬೈಲಾ ಉಪಬಂಧಗಳನ್ನು ಉಲ್ಲಂಘಿಸಿ ಕಟ್ಟಿರುವ ಕಟ್ಟಡದ ಅಥವಾ ಅನಧಿಕೃತ ಲೇಔಟ್‌ನಲ್ಲಿ ಅಥವಾ ರೆವಿನ್ಯೂ ಭೂಮಿಯಲ್ಲಿ ಕಟ್ಟಿರುವ ಕಟ್ಟಡ ಅಥವಾ ಅಧಿಭೋಗ ಪ್ರಮಾಣ ಪತ್ರ ಅಥವಾ ಮುಕ್ತಾಯ ಪ್ರಮಾಣಪತ್ರವನ್ನು ಪಡೆದುಕೊಳ್ಳದೇ ವಾಸ ಮಾಡುತ್ತಿರುವ ಕಟ್ಟಡವೂ ಸೇರಿದಂತೆ, ಎಲ್ಲಾ ಕಟ್ಟಡಗಳು, ಖಾಲಿ ಜಾಗಗಳಿಗೆ ಅಥವಾ ಅವೆರಡಕ್ಕೂ ಆಸ್ತಿ ತೆರಿಗೆಯನ್ನು ವಿಧಿಸಬಹುದು ಮತ್ತು ವಸೂಲು ಮಾಡಬಹುದು. ಅಂಥ ಕಟ್ಟಡಗಳಿಂದ ವಸೂಲು ಮಾಡಿದ ಆಸ್ತಿ ತೆರಿಗೆಯ ಲೆಕ್ಕವನ್ನು ಒಂದು ಪ್ರತ್ಯೇಕ ರಿಜಿಸ್ಟರ್‌ನಲ್ಲಿ ಇಟ್ಟುಕೊಂಡು ಬರತಕ್ಕದ್ದು :

ಪರಂತು, ಈ ಪ್ರಕರಣದಡಿಯಲ್ಲಿ ಅಂಥ ಕಟ್ಟಡಗಳ ಸಂಬಂಧದಲ್ಲಿ ಆಸ್ತಿ ತೆರಿಗೆಯನ್ನು ವಿಧಿಸಿ ವಸೂಲು ಮಾಡುವುದು, ಮಾಡಿದ ಯಾವುದೇ ಉಲ್ಲಂಘನೆಯನ್ನು ಸಕ್ರಮಗೊಳಿಸಲು ಯಾವುದೇ ಹಕ್ಕನ್ನಾಗಲಿ, ಅಂಥ ಕಟ್ಟಡಕ್ಕೆ ಹಕ್ಕುಸ್ವಾಮ್ಯ, ಒಡೆತನ ಅಥವಾ ಕಾನೂನಿನ ಸ್ಥಾನಮಾನವನ್ನಾಗಲಿ ದೊರಕಿಸಿ ಕೊಡುವುದಿಲ್ಲ. ಅಂಥ ಕಟ್ಟಡಗಳು ಕಾನೂನಿನ ಉಲ್ಲಂಘನೆಗಾಗಿ ಈ ಅಧಿನಿಯಮದ ಅಥವಾ ಯಾವುದೇ ಇತರ ಕಾನೂನಿನ ಉಪಬಂಧಗಳನ್ವಯ ಯಾವುದೇ ಕ್ರಮಕ್ಕೆ ಗುರಿಯಾಗಲು ಯಾವಾಗಲೂ ಬದ್ಧರಾಗಿರತಕ್ಕದ್ದು.

(4) ನಿವಾಸದ ಉದ್ದೇಶಕ್ಕಾಗಿ ಉಪಯೋಗಿಸುತ್ತಿರುವ ಸ್ವಂತ ವಾಸದ ಕಟ್ಟಡದ ಮೇಲೆ ಮತ್ತು ನಗರ ಪಾಲಿಕೆಯ ಶಿಫಾರಸ್ಸಿನ ಮೇಲೆ ರಾಜ್ಯ ಸರ್ಕಾರವು ಅಧಿಸೂಚಿಸಬಹುದಾದಂಥ ನಿವಾಸೇತರ ಉದ್ದೇಶಕ್ಕಾಗಿ ಸ್ವಂತಕ್ಕೆ ಬಳಸುತ್ತಿರುವ ಕಟ್ಟಡದ ವರ್ಗದ ಸಂಬಂಧದಲ್ಲಿ ಸಂದಾಯ ಮಾಡತಕ್ಕ ಆಸ್ತಿ ತೆರಿಗೆಯನ್ನು ಶೇಕಡಾ ಐವತ್ತರಷ್ಟು ಕಡಿಮೆ ಮಾಡತಕ್ಕದ್ದು.

(5) 107, 110, 111, 112, 112ಬಿ, 112ಡಿ ಮತ್ತು 113 ನೇ ಪ್ರಕರಣಗಳಲ್ಲಿ ಇರುವ ಉಪಬಂಧಗಳು ಈ ಪ್ರಕರಣದ ಉಪಬಂಧಗಳಿಗೆ ಅವು ಅಸಂಗತವಾಗದೇ ಇರುವಷ್ಟರ ಮಟ್ಟಿಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಯಥೋಚಿತ ಬದಲಾವಣೆಗಳೊಂದಿಗೆ ಅನ್ವಯವಾಗತಕ್ಕದ್ದು:

ಪರಂತು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯು ಕರನಿರ್ಧರಣೆ ಮಾಡಿದ ಆಸ್ತಿಗಳ ಸಂಬಂಧದಲ್ಲಿ ರಾಜ್ಯ ಸರ್ಕಾರವು ಪ್ರತ್ಯೇಕ ಕಾರ್ಯವಿಧಾನ, ನಮೂನೆ ಅಥವಾ ರಿಜಿಸ್ಟರ್‌ನ್ನು ನಿಯಮಿಸಬಹುದು. ಕರನಿರ್ಧರಣೆ ಮಾಡಲಾದ ಬೇರೆ ಬೇರೆ ವರ್ಗದ ಆಸ್ತಿಗೆ ಬೇರೆ ಬೇರೆ ರಿಜಿಸ್ಟರ್‌ಗಳನ್ನು ನಿಯಮಿಸಬಹುದು.

(6) ಆಸ್ತಿ ತೆರಿಗೆಯನ್ನು ಪಾವತಿಸಲು ಮುಖ್ಯವಾಗಿ ಹೊಣೆಗಾರನಾದ ವ್ಯಕ್ತಿಯು, ತೆರಿಗೆಯನ್ನು ಎರಡು ಸಮನಾದ ಕಂತುಗಳಲ್ಲಿ ಸಂದಾಯ ಮಾಡತಕ್ಕದ್ದು. ಮೊದಲನೆಯ ಕಂತನ್ನು ಪ್ರತಿ ಆರ್ಥಿಕ ವರ್ಷದ ಮೇ 30 ರೊಳಗೆ ಮತ್ತು ಎರಡನೆಯದನ್ನು ನವೆಂಬರ್ 29 ರೊಳಗೆ ಸಂದಾಯ ಮಾಡತಕ್ಕದ್ದು. ಹೀಗಿದ್ದರೂ ಆಸ್ತಿ ತೆರಿಗೆಯನ್ನು ಸಂದಾಯ ಮಾಡಲು ಮುಖ್ಯವಾಗಿ ಹೊಣೆಗಾರನಾದ ಮಾಲೀಕ ಅಥವಾ ಅಧಿಭೋಗದಾರ ಅಥವಾ ವ್ಯಕ್ತಿಯು ಒಂದೇ ಕಂತಿನಲ್ಲಿ ಸಂದಾಯ ಮಾಡುವುದನ್ನೂ ಆಯ್ಕೆ ಮಾಡಿಕೊಳ್ಳಬಹುದು.

ಪರಂತು, 2008-09 ನೇ ವರ್ಷಕ್ಕೆ ಮತ್ತು ನಂತರದ ವರ್ಷಗಳಿಗೆ ಸಂಬಂಧಪಟ್ಟಂತೆ ಮೊದಲನೆಯ ಕಂತನ್ನು ಕರ್ನಾಟಕ ಪೌರನಿಗಮಗಳ (ತಿದ್ದುಪಡಿ) ಅಧಿನಿಯಮ, 2009 ರ ಪ್ರಾರಂಭದ ದಿನಾಂಕದಿಂದ ಅರವತ್ತು ದಿನಗಳೊಳಗಾಗಿ ಸಂದಾಯ ಮಾಡತಕ್ಕದ್ದು ಮತ್ತು ಎರಡನೆಯ ಕಂತನ್ನು ಅದರ ನಂತರದ ಮೂವತ್ತು ದಿನಗಳೊಳಗಾಗಿ ಪಾವತಿಸತಕ್ಕದ್ದು :

ಮತ್ತೂ ಪರಂತು, ತೆರಿಗೆಯನ್ನು ಪಾವತಿಸಲು ಹೊಣೆಗಾರನಾದ ಮಾಲೀಕ ಅಥವಾ ಅಧಿಭೋಗದಾರನು 2008-09 ನೇ ವರ್ಷದ್ದೂ ಸೇರಿದಂತೆ ಇಡೀ ವರ್ಷಕ್ಕೆ ತೆರಿಗೆಯನ್ನು ಪ್ರತಿ ವರ್ಷದ ಪ್ರಾರಂಭದ ದಿನಾಂಕದಿಂದ ಒಂದು ತಿಂಗಳೊಳಗೆ ವಿವರ ಪತ್ರವನ್ನು ಸಲ್ಲಿಸಿ ತೆರಿಗೆಯನ್ನು ಪಾವತಿಸಿದರೆ, ಆತನು ಸಂದಾಯ ಮಾಡತಕ್ಕ ತೆರಿಗೆಯ ಮೇಲೆ ಶೇಕಡಾ ಐದರ ರಿಯಾಯಿತಿ ನೀಡತಕ್ಕದ್ದು:

ಅಷ್ಟೇ ಅಲ್ಲದೆ ರಾಜ್ಯ ಸರ್ಕಾರವು ಪೌರನಿಗಮದ ಶಿಫಾರಸ್ಸಿನ ಮೇಲೆ ಅಧಿಸೂಚನೆಯ ಮೂಲಕ, 2008-09 ಹಾಗೂ 2009-2010 ನೇ ಹಣಕಾಸಿನ

ಸಾಲಿಗೆ ಸಂಬಂಧಿಸಿದಂತೆ ದಂಡವಿಲ್ಲದೆ ಸ್ವತ್ತು ತೆರಿಗೆಯನ್ನು ಸಂದಾಯ ಮಾಡಲು ಮತ್ತು ಶೇಕಡ 5 ರ ರಿಯಾಯಿತಿ ಸೌಲಭ್ಯವನ್ನು ಪಡೆಯಲು ಕಾಲಪರಿಮಿತಿಯನ್ನು ವಿಸ್ತರಣೆ ಮಾಡಬಹುದು.

ಅದೂ ಅಲ್ಲದೆ, ನಿಯಮಿಸಬಹುದಾದ ರೀತಿಯಲ್ಲಿ ಅನಿಶ್ಚಿತ ಆಯ್ಕೆ ಮಾಡಿ ಪರಿಶೀಲಿಸುವುದಕ್ಕೆ ಒಳಪಟ್ಟು, 2008-09 ಅವಧಿಗಾಗಿ ಮೊದಲ ಬಾರಿ ದಾಖಲು ಮಾಡಿದ ತೆರಿಗೆ ವಿವರ ಪತ್ರವು ಪ್ರತಿ ಬ್ಲಾಕ್ ವರ್ಷಕ್ಕಾಗಿ ಅನ್ವಯಿಸುವ ತೆರಿಗೆ ಸಂದಾಯಕ್ಕೆ ಆಧಾರವಾಗತಕ್ಕದ್ದು.

(7) ಯಾವೊಬ್ಬ ಮಾಲೀಕ ಅಥವಾ ಅಧಿಭೋಗದಾರನು (8) ನೇ ಉಪ ಪ್ರಕರಣದ ಅಡಿಯಲ್ಲಿ ಯಾವುದೇ ವಿವರ ಪತ್ರವನ್ನು ಸಲ್ಲಿಸುವ ಮೊದಲು ಆತನು ಸತ್ಯವಾದುದು ಮತ್ತು ಪೂರ್ಣವಾದುದು ಎಂದು ಘೋಷಿಸಿ ಸಲ್ಲಿಸಿದ ವಿವರ ಪತ್ರದ ಆಧಾರದ ಮೇಲೆ ಲೆಕ್ಕ ಹಾಕಿದ ಆ ವರ್ಷಕ್ಕೆ ಸಂದಾಯ ಮಾಡಬೇಕಾದ ಅರ್ಧ ವರ್ಷಕ್ಕೆ ಸ್ವತ್ತು ತೆರಿಗೆಯನ್ನು ಅಥವಾ ಪೂರ್ಣ ವರ್ಷಕ್ಕೆ ಲೆಕ್ಕ ಹಾಕಿದ ತೆರಿಗೆಯ ಮೊಬಲಗನ್ನು ಮುಂಗಡವಾಗಿ ಸಂದಾಯ ಮಾಡತಕ್ಕದ್ದು.

(8) 112 ಎ ಪ್ರಕರಣದ (1)ನೇ ಉಪ ಪ್ರಕರಣದಲ್ಲಿ ಏನೇ ಇದ್ದರೂ, ರಾಜ್ಯ ಸರ್ಕಾರವು ಈ ಪ್ರಕರಣದ ಅಡಿಯಲ್ಲಿ ಸ್ವತ್ತು ತೆರಿಗೆಯನ್ನು ಸಂದಾಯ ಮಾಡಲು ಹೊಣೆಗಾರನಾದ ಪ್ರತಿಯೊಬ್ಬ ಮಾಲೀಕ ಅಥವಾ ಅಧೀಭೋಗದಾರನು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯುಕ್ತರಿಗೆ ಅಥವಾ ಈ ಸಂಬಂಧದಲ್ಲಿ ಅವರುಉ ಅಧಿಕೃತಗೊಳಿಸಿದ ಅಧಿಕಾರಿಗೆ ಅಥವಾ ಏಜೆನ್ಸಿಗೆ ಪ್ರತಿ ವರ್ಷವು ಸಲ್ಲಿಸತಕ್ಕ ವಿವರಪತ್ರದ ನಮೂನೆ ಮತ್ತು ವಿಧಾನವನ್ನು ನಿಯಮಿಸಬಹುದು.

(9) ಯಾವುದೇ ಕಟ್ಟಡ ಅಥವಾ ಖಾಲಿ ಭೂಮಿಯ ಅಥವಾ ಅವೆರಡರ ಮಾಲಿಕ ಅಥವಾ ಅಧಿಭೋಗದಾರನು ವಿವರ ಪತ್ರವನ್ನು ಸಲ್ಲಿಸುವುದಕ್ಕೆ ಅಥವಾ ಈ ಪ್ರಕರಣದ ಅಡಿಯಲ್ಲಿ ಸ್ವತ್ತು ತೆರಿಗೆಯ ನಿರ್ಧರಣೆಗೆ ಅನುಕೂಲ ಮಾಡಿಕೊಡುವ ಉದ್ದೇಶದಿಂದ ಆಯುಕ್ತರು ಘಟಕ ಪ್ರದೇಶ ಮೌಲ್ಯವನ್ನು ಮತ್ತು ಅದರ ಮೇಲೆ ಸಂದಾಯಮಾಡತಕ್ಕ ತೆರಿಗೆಯನ್ನು ನಿರ್ಧರಿಸಲು ಮಾರ್ಗಸೂಚಿಗಳನ್ನು ಕಾಲಕಾಲಕ್ಕೆ ಹೊರಡಿಸತಕ್ಕದ್ದು.

(10) ನಿಯಮಿಸಲಾದ ವಿಧಾನದಲ್ಲಿ ಸಲ್ಲಿಸಲಾದ ವಿವರ ಪತ್ರಗಳನ್ನು ಅನಿಶ್ಚಿತವಾಗಿ ಆಯ್ಕೆ ಮಾಡಿ ಪರಿಶೀಲನೆ ಮಾಡಲು ಆಯುಕ್ತರು ಅಥವಾ ಅಧಿಕೃತ

ಅಧಿಕಾರಿಯು ಕೈಗೆತ್ತಿಕೊಳ್ಳಬಹುದಾದ ಅಥವಾ ಅಧೀನ ಅಧಿಕಾರಿಯನ್ನು ಅಧಿಕೃತಗೊಳಿಸಬಹುದಾದ ವಿವರ ಪತ್ರಗಳ ಸಂದರ್ಭಗಳನ್ನು ಹೊರತಪಡಿಸಿ, ಮಾಲೀಕ ಅಥವಾ ಅಧಿಭೋಗದಾರನು ಸಲ್ಲಿಸಿದ ಪ್ರತಿಯೊಂದು ವಿವರ ಪತ್ರವನ್ನು ಕರ ನಿರ್ಧರಣೆ ಮಾಡಲಾಗಿದೆ ಎಂದು ಭಾವಿಸತಕ್ಕದ್ದು.

ಪರಂತು, ಆಯುಕ್ತರು ಸ್ವಪ್ರೇರಣೆಯಿಂದ ಆಗಲಿ ಅಥವಾ ಅನ್ಯಥಾ, ಮಾಲೀಕ ಅಥವಾ ಅಧಿಭೋಗದಾರನು ತೆರಿಗೆ ತಪ್ಪಿಸಿಕೊಳ್ಳುತ್ತಿದ್ದಾನೆಂದು ನಂಬಲು ಕಾರಣ ಹೊಂದಿದ್ದಾಗ ಅಂಥ ಕಟ್ಟಡವನ್ನು ತಪಾಸಣೆ ಮಾಡಿಸಬಹುದು ಮತ್ತು ತೆರಿಗೆಯನ್ನು ನಿರ್ಧರಿಸಬಹುದು.

(11) ಯಾವುದೇ ಕಟ್ಟಡ ಅಥವಾ ಭೂಮಿಗಳ ಅಥವಾ ಅವೆರಡರ ಸಂಬಂಧದಲ್ಲಿ ಸಲ್ಲಿಸಿದ ವಿವರ ಪತ್ರಗಳನ್ನು ಅನಿಶ್ಚಿತವಾಗಿ ಆಯ್ದು ಪರಿಶೀಲಿಸುವ ಅಥವಾ (8) ನೇ ಉಪ ಪ್ರಕರಣದ ಅಡಿಯಲ್ಲಿ ಅಗತ್ಯಪಡಿಸಲಾದಂತೆ ವಿವರ ಪತ್ರವನ್ನು ಸಲ್ಲಿಸದಿರುವ ಪ್ರಕರಣಗಳಲ್ಲಿ ಪರಿಶೀಲಿಸುವ ಉದ್ದೇಶಕ್ಕಾಗಿ ಆಯುಕ್ತರು ಅಥವಾ ಈ ಸಂಬಂಧದಲ್ಲಿ ಅವರು ಅಧಿಕೃತಗೊಳಿಸಿದ ಯಾವೊಬ್ಬ ವ್ಯಕ್ತಿಯು, ಮಾಲೀಕ ಅಥವಾ ಅಧಿಭೋಗದಾರನಿಗೆ ಸೂಚನೆಯನ್ನು ನೀಡಿದ ತರುವಾಯ, ಯಾವುದೇ ಭೂಮಿ ಅಥವಾ ಕಟ್ಟಡವನ್ನು ಪ್ರವೇಶಿಸಬಹುದು, ಪರೀಕ್ಷಿಸಬಹುದು, ಸಮೀಕ್ಷಿಸಬಹುದು ಅಥವಾ ಅಳತೆ ಮಾಡಬಹುದು ಮತ್ತು ಮಾಲೀಕ ಅಥವಾ ಅಧಿಭೋಗದಾರನು ಅಗತ್ಯಪಡಿಸಿದ ಅವಶ್ಯ ಮಾಹಿತಿಯನ್ನು ಒದಗಿಸಲು ಬದ್ಧನಾಗಿರತಕ್ಕದ್ದು. ಹಾಗೂ ಅಂಥ ಪರಿಶೀಲನೆ ಮತ್ತು ಸಂಗ್ರಹಿಸಿದ ಮಾಹಿತಿಯ ಆಧಾರದ ಮೇಲೆ ಅವರು (5) ನೇ ಉಪಪ್ರಕರಣಕ್ಕೆ ಒಳಪಟ್ಟು ಸ್ವತ್ತಿನ ತೆರಿಗೆ ನಿರ್ಧರಣೆ ಮಾಡತಕ್ಕದ್ದು. ಹಾಗೂ ಸಂಬಂಧಪಟ್ಟ ಮಾಲೀಕ ಅಥವಾ ಅಧಿಭೋಗದಾರನಿಗೆ ಆದೇಶದ ಒಂದು ಪ್ರತಿಯನ್ನು ಕಳುಹಿಸತಕ್ಕದ್ದು. ಯಾವುದೇ ಕಟ್ಟಡ ಅಥವಾ ಖಾಲಿ ಭೂಮಿಯ ಒಳಕ್ಕೆ ಅಥವಾ ಅದರ ಮೇಲೆ ಪ್ರವೇಶವನ್ನು ಸೂರ್ಯೋದಯದಿಂದ ಸೂರ್ಯಾಸ್ತದ ಒಳಗೆ ಮಾಡತಕ್ಕದ್ದು :

(12) ಆವರಣವನ್ನು ಪರಿಶೀಲಿಸಲು ಅಧಿಕೃತ ಅಧಿಕಾರಿಯು ಪ್ರವೇಶಿಸುವುದಕ್ಕೆ ಅವಕಾಶ ನೀಡಲು ಅಧಿಭೋಗದಾರನು ನಿರಾಕರಿಸಿದರೆ ಅಧಿಕಾರಿಯು ಅವನಿಗೆ ಸಮಂಜಸ ಅವಕಾಶವನ್ನು ನೀಡಿದ ತರುವಾಯ ಹಾಗೆ ನಿರಾಕರಿಸಿದ್ದನ್ನು ದಾಖಲಿಸತಕ್ಕದ್ದು ಮತ್ತು ತನ್ನ ಉತ್ತಮ ವಿವೇಚನೆಯ ಪ್ರಕಾರ ಸ್ವತ್ತಿನ ಕರ ನಿರ್ಧರಣೆ ಮಾಡತಕ್ಕದ್ದು :

ಪರಂತು, ವಾಸಕ್ಕಾಗಿ ಬಳಸುತ್ತಿರುವ ಕಟ್ಟಡಗಳ ಸಂದರ್ಭದಲ್ಲಿ ಅಲ್ಲಿ ವಾಸಿಸುತ್ತಿರುವವರ ಸಾಮಾಜಿಕ ಮತ್ತು ಧಾರ್ಮಿಕ ಪದ್ಧತಿಗಳಿಗೆ ತಕ್ಕ ಗೌರವವನ್ನು ನೀಡತಕ್ಕದ್ದು ಮತ್ತು ಹಾಗೆ ವಾಸಿಸುತ್ತಿರುವವರು ಮಹಿಳೆ ಆಗಿದ್ದಲ್ಲಿ ಆಕೆಯು ಆ ಸ್ಥಳದಿಂದ ನಿರ್ಗಮಿಸಲು ಇಚ್ಛಿಸಿದರೆ ಹಾಗೆ ನಿರ್ಗಮಿಸಬಹುದೆಂದು ತಿಳಿಸಿ ಆಕೆ ಹಾಗೆ ನಿರ್ಗಮಿಸಲು ಸಮಂಜಸ ಅವಕಾಶ ನೀಡಿದ ತರುವಾಯ ಮಾತ್ರವೇ ಪ್ರವೇಶಿಸತಕ್ಕದ್ದು.

(13) ಅನಿಶ್ಚಿತ ಆಯ್ಕೆ ಮಾಡಿ ಪರಿಶೀಲಿಸಿದಾಗ ಕರ ನಿರ್ಧರಣೆ ಆಗಿದೆ ಎಂದು ಭಾವಿಸಲಾದ ಯಾವುದೇ ಸಲ್ಲಿಸಿದ ವಿವರ ಪತ್ರವು ಸರಿಯಿಲ್ಲವೆಂದು ಅಥವಾ ಅದರಲ್ಲಿ ಕಡಿಮೆ ಕರ ನಿರ್ಧರಿಸಲಾಗಿದೆಯೆಂದು ತತ್ಪರಿಣಾಮವಾಗಿ ತೆರಿಗೆಯಿಂದ ತಪ್ಪಿಸಿಕೊಳ್ಳಲಾಗಿದೆಯೆಂದು ಅಧಿಕೃತ ಅಧಿಕಾರಿಯು ನಂಬಲು ಕಾರಣಗಳಿದ್ದಲ್ಲಿ,-

(ಎ) ದಾಖಲೆ ಲಭ್ಯವಿರುವ ಮಾಹಿತಿಯ ಆಧಾರದ ಮೇಲೆ ವಾಸ್ತವಿಕ ಪರಿಶೀಲನೆಯ ನಂತರ ಈ ಪ್ರಕರಣದ ಅಡಿಯಲ್ಲಿ ಉಪಬಂಧಿಸಲಾದ ವಿಧಾನದಲ್ಲಿ ಆ ಸ್ಥತ್ತಿನ ಮರು ಕರ ನಿರ್ಧರಣೆ ಮಾಡಲು ತೊಡಗಬಹುದು.

(ಬಿ) ಮರು ಕರ ನಿರ್ಧರಣೆ ಮಾಡಿದ ತೆರಿಗೆಯು ವಿವರಪತ್ರದೊಡನೆ ಸಲ್ಲಿಸಲಾದ ಶೇಕಡಾ 5 ಕ್ಕಿಂತಲೂ ಹೆಚ್ಚಾಗಿದ್ದಲ್ಲಿ ತಪ್ಪಿಸಿಕೊಂಡ ತೆರಿಗೆಯನ್ನು ಹಾಗೆ ತಪ್ಪಿಸಿಕೊಂಡ ತೆರಿಗೆಯನ್ನು ಹಾಗೆ ತಪ್ಪಿಸಕೊಂಡ ತೆರಿಗೆಯ ಎರಡರಷ್ಟಕ್ಕೆ ಸಮನಾದ ಮೊಬಲಗಿಗಿಂತ ಕಡಿಮೆಯಿಲ್ಲದ ದಂಡದೊಡನೆ ಹಾಗೂ ಸಂದಾಯ ಮಾಡಿದ ಹಾಗೂ ಸಂದಾಯ ಮಾಡಬೇಕಾಗಿದ್ದ ತೆರಿಗೆಗಳ ವ್ಯತ್ಯಾಸದ ಮೊಬಲಗಿನ ಮೇಲೆ ವಾರ್ಷಿಕ ಶೇಕಡ 24 ರಂತೆ ಲೆಕ್ಕಹಾಕಲಾದ ಬಡ್ಡಿಯೊಡನೆ ಸಂದಾಯಿಸತಕ್ಕದ್ದು;

(ಸಿ) ಆಯುಕ್ತರು ಅಥವಾ ಅಧಿಕೃತ ಅಧಿಕಾರಿಯು ಈ ಪ್ರಕರಣದ ಅಡಿಯಲ್ಲಿ ಹೇಳಲಾದ ರೀತಿಯ ಪರಿಶೀಲನೆ ಅಥವಾ ಮರುನಿರ್ಧರಣೆಯನ್ನು ಮಾಡಿದ ತರುವಾಯ ಮರು ಕರ ನಿರ್ಧರಣೆಯ ಸೂಚನೆಯನ್ನು ಸ್ವೀಕರಿಸಿದ ಮೂವತ್ತು ದಿನಗಳೊಳಗೆ ಲಿಖಿತದಲ್ಲಿ ಅದರ ವಿರುದ್ಧ ಕಾರಣ ತೋರಿಸಲು ತೆರಿಗೆದಾರನಿಗೆ ಒಂದು ಅವಕಾಶವನ್ನು ನೀಡಿದ ತರುವಾಯ ಈ ತೆರಿಗೆಯನ್ನು ಸಂದಾಯ ಮಾಡುವಂತೆ ತಗಾದೆ ಮಾಡಿ ಸೂಚನೆಯನ್ನು ನೀಡತಕ್ಕದ್ದು.

(ಡಿ) ಮಾಲೀಕ ಅಥವಾ ಅಧೀಭೋಗದಾರನು ನಿರ್ಧರಿಸಿದ ಸ್ವತ್ತು ತೆರಿಗೆಯನ್ನು ಮತ್ತು ವಿಧಿಸಿದ ದಂಡವನ್ನು ಒಪ್ಪಿಕೊಳ್ಳಬಹುದು ಅಥವಾ ಈ ಉಪ ಪ್ರಕರಣದ

ಅಡಿಯಲ್ಲಿ ಸೂಚನೆಯ ಪ್ರತಿಯನ್ನು ಸ್ವೀಕರಿಸಿದ ಮೂವತ್ತು ದಿನಗಳೊಳಗಾಗಿ ಆಯುಕ್ತನಿಗೆ ಅಥವಾ ಅಧಿಕೃತ ಅಧಿಕಾರಿಗೆ ಆಕ್ಷೇಪಣೆಯನ್ನು ಕಳುಹಿಸಬಹುದು;

(ಇ) ಆಯುಕ್ತ ಅಥವಾ ಅಧಿಕೃತ ಅಧಿಕಾರಿಯು ಆಕ್ಷೇಪಣೆಗಳನ್ನು ಪರಿಗಣಿಸತಕ್ಕದ್ದು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಿದ ದಿನಾಂಕದಿಂದ ಅರವತ್ತು ದಿನಗಳ ಅವಧಿಯೊಳಗೆ ಅಂಥ ಕರ ನಿರ್ಧರಣೆಯನ್ನು ದೃಢೀಕರಿಸುವ ಅಥವಾ ಪರಿಷ್ಕರಿಸುವ ಆದೇಶವನ್ನು ಹೊರಡಿಸತಕ್ಕದ್ದು ಮತ್ತು ಆದೇಶದ ಒಂದು ಪ್ರತಿಯನ್ನು ಸಂಬಂಧಪಟ್ಟ ಮಾಲೀಕ ಅಥವಾ ಅಧಿಭೋಗದಾರನಿಗೆ ಕಳುಹಿಸತಕ್ಕದ್ದು.

(14) ಈ ಪ್ರಕರಣದ ಅಡಿಯಲ್ಲಿ ಕರ ನಿರ್ಧರಣೆ ಅಥವಾ ಮರು ನಿರ್ಧರಣೆಯನ್ನು ಈ ಮುಂದಿನ ಕಾಲಮಿತಿಗಳ ನಂತರ ಮಾಡತಕ್ಕದ್ದಲ್ಲ, ಎಂದರೆ :-

(1) ಈ ಪ್ರಕರಣದ ಅಡಿಯಲ್ಲಿ ತೆರಿಗೆ ವಿವರ ಪತ್ರವನ್ನು ಸಲ್ಲಿಸಿದ ನಂತರ ಮೂರು ವರ್ಷಗಳು ಕಳೆದಮೇಲೆ;

(2) ಆಯುಕ್ತನು ಅಥವಾ ಅಧಿಕೃತ ಅಧಿಕಾರಿಯ ಅಭಿಪ್ರಾಯದ ಪ್ರಕಾರ ಮರು ನಿರ್ಧರಣೆ ಮಾಡುವುದನ್ನು ಸಮರ್ಥಿಸಲು ವಾಸ್ತವಾಶಗಳು ಸಾಕಷ್ಟು ಇವೆ ಎಂಬುದು ಅವರ ಗಮನಕ್ಕೆ ಬಂದ ತರುವಾಯ ಮೂರು ವರ್ಷಗಳು ಕಳೆದ ಮೇಲೆ ಇದರಲ್ಲಿ ಯಾವುದು ನಂತರವೋ ಆ ಅವಧಿ.

(15) ಈ ಅಧಿನಿಯಮದ ಅಡಿಯಲ್ಲಿ ಸಂದರ್ಭಾನುಸಾರ ಕರ ನಿರ್ಧರಣೆಗೆ ಅಥವಾ ಮರು ನಿರ್ಧರಣೆಗೆ ನಿರ್ದಿಷ್ಟಪಡಿಸಿದ ಕಾಲಮಿತಿಯನ್ನು ಲೆಕ್ಕ ಹಾಕುವಾಗ ಕರ ನಿರ್ಧರಣೆ ಅಥವಾ ಇತರ ವ್ಯವಹರಣೆಗಳ ವಿರುದ್ಧ ಸಲ್ಲಿಸಿದ ಯಾವುದೇ ಅಪೀಲಿನ ವಿಲೆಗಾಗಿ ಅಪೀಲು ಪ್ರಾಧಿಕಾರ, ನ್ಯಾಯಾಧಿಕರಣ ಅಥವಾ ಸಕ್ಷಮ ನ್ಯಾಯಾಲಯವು ತೆಗೆದುಕೊಂಡ ಅವಧಿಯನ್ನು ಲೆಕ್ಕಕ್ಕೆ ತೆಗೆದುಕೊಳ್ಳತಕ್ಕದ್ದಲ್ಲ.

(16) (2) ನೇ ಉಪಪ್ರಕರಣಕ್ಕೆ ಒಳಪಟ್ಟು ಈ ಪ್ರಕರಣದ ಅಡಿಯಲ್ಲಿ ನಿರ್ಧರಿಸಿ ವಿಧಿಸಲಾದ ಸ್ವತ್ತು ತೆರಿಗೆಯು 2008-09 ನೇ ಹಣಕಾಸಿನ ವರ್ಷದಿಂದ ಪ್ರಾರಂಭಿಸಿ ಮೂರು ವರ್ಷಗಳಿಗೆ ಒಂದು ಬಾರಿ ಶೇಕಡಾ 15 ರಷ್ಟು ಹೆಚ್ಚಿಸುವ ಮೂಲಕ ಪರಿಷ್ಕರಣೆ ಗೆ ಗುರಿಯಾಗತಕ್ಕದ್ದು;

ಪರಂತು, ಪೌರನಿಗಮವು ಅಂಥ ಸ್ವತ್ತು ತೆರಿಗೆಯನ್ನು ಮೂರು ವರ್ಷಗಳಿಗೊಮ್ಮೆ ಶೇಕಡಾ 30 ರ ವರೆಗೆ ಹೆಚ್ಚಿಸಬಹುದು. ಮತ್ತು ಬೇರೆ ಬೇರೆ

ಪದೇಶಗಳಿಗೆ ಹಾಗೂ ಬೇರೆ ಬೇರೆ ವರ್ಗದ ಕಟ್ಟಡಗಳು ಮತ್ತು ಭೂಮಿಗಳಿಗೆ ಬೇರೆ ಬೇರೆ ದರಗಳಲ್ಲಿ ತೆರಿಗೆ ಹೆಚ್ಚಿಸಬಹುದು;

ಪರಂತು, ಮೂರು ವರ್ಷಗಳ ಬ್ಲಾಕ್ ಅವಧಿಯಲ್ಲಿ ಈ ಪ್ರಕರಣದ ಅಡಿಯಲ್ಲಿ ಸ್ವತ್ತು ತೆರಿಗೆಯ ನಿರ್ಧರಣೆ ಮಾಡದಿರುವುದು ಯಾವುದೇ ಹೊಸ ಸೇರ್ಪಡೆ, ಬಳಕೆಯ ಬದಲಾವಣೆ, ಆಯ್ಕೆ ಮಾರ್ಪಾಡು ಅಥವಾ ಪರಿವರ್ತನೆ ಮಾಡಿರುವ ಯಾವುದೇ ಕಟ್ಟಡಕ್ಕೆ ಸಂಬಂಧಿಸಿದಂತೆ ಅನ್ವಯವಾಗತಕ್ಕದ್ದಲ್ಲ. ಮಾಲೀಕ ಅಥವಾ ಅಧಿಭೋಗದಾರನು ಅಂಥ ಬದಲಾವಣೆ ಪೂರ್ಣಗೊಂಡ ದಿನಾಂಕ ಅಥವಾ ಅದರ ಅಧಿಭೋಗಕ್ಕೆ ಬಂದ ದಿನಾಂಕ ಇವುಗಳಲ್ಲಿ ಯಾವುದು ಮೊದಲೋ ಆ ದಿನಾಂಕದಿಂದ ಆರು ತಿಂಗಳೊಳಗಾಗಿ ಹಾಗೆ ಬದಲಾವಣೆ ಮಾಡಿರುವುದನ್ನು ಪರಿಷ್ಕೃತ ತೆರಿಗೆ ವಿವರ ಪತ್ರ ಮತ್ತು ತೆರಿಗೆಯೊಡನೆ ವರದಿಯನ್ನು ಮಾಡತಕ್ಕದ್ದು;

ಮತ್ತು ಪರಂತು, ಈ ಪ್ರಕರಣದಲ್ಲಿರುವುದಾವುದೂ ಸ್ವತ್ತು ತೆರಿಗೆಯನ್ನು ಇನ್ನೂ ಮುಂಚಿತವಾಗಿಯೇ ಪರಿಷ್ಕರಿಸುವಂತೆ ನಿರ್ದೇಶನ ನೀಡುವ ರಾಜ್ಯ ಸರ್ಕಾರದ ಅಧಿಕಾರಕ್ಕೆ ಬಾಧಕವಾಗುತ್ತದೆ ಎಂದು ಭಾವಿಸತಕ್ಕದ್ದಲ್ಲ.

(17) ಆಯುಕ್ತರು, ವಲಯಗಳ ವರ್ಗೀಕರಣ, ಘಟಕ ಪ್ರದೇಶ ಮೌಲ್ಯ ಮತ್ತು ಸ್ವತ್ತಿನ ವರ್ಗ ಮುಂತಾದವುಗಳ ಬಗ್ಗೆ ಬರುವ ಯಾವುವೇ ಸಂಶಯಗಳನ್ನು ಪರಿಹರಿಸುವ ಅಧಿಕಾರವನ್ನು ಹೊಂದಿರತಕ್ಕದ್ದು. ಈ ಸಂಬಂಧದಲ್ಲಿ ಆಯುಕ್ತರ ತೀರ್ಮಾನವು ಅಂತಿಮವಾಗಿರತಕ್ಕದ್ದು."

4. <u>ನಿರಸನ ಮತ್ತು ಉಳಿಸುವಿಕೆಗಳು :-</u> (1) ಕರ್ನಾಟಕ ಪೌರ ನಿಗಮಗಳ (ತಿದ್ದುಪಡಿ) ಅಧ್ಯಾದೇಶ, 2008 ಅನ್ನು (2008ರ ಕರ್ನಾಟಕ ಅಧ್ಯಾದೇಶ ಸಂಖ್ಯೆ (1) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸನಗೊಳಿಸಿದ್ದಾಗ್ಯೂ, ಸದರಿ ಅಧ್ಯಾದೇಶದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಮೂಲಕ ತಿದ್ದುಪಡಿ ಮಾಡಲಾದ ಮೂಲ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ :

ದಿನಾಂಕ 16-01-2007 ರಂದು ರಾಜ್ಯ ಸರ್ಕಾರವು ಏಳು ನಗರ ಸಭೆಗಳನ್ನು ಮತ್ತು ಒಂದು ಪುರಸಭೆಯನ್ನು ಹಾಗೂ ಕೆಲವು ಹಳ್ಳಿಗಳನ್ನು ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿಲೀನಗೊಳಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ರಚಿಸಿದೆ. ವಿಲೀನದ ಸಮಯದಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯು ಸ್ವಯಂ ಸ್ವತ್ತು ತೆರಿಗೆ ನಿರ್ಧರಣೆಯ ಅಡಿಯಲ್ಲಿ ವಾರ್ಷಿಕ ಬಾಡಿಗೆ ಮೌಲ್ಯದ ಆಧಾರದ ಮೇಲೆ ಸ್ವತ್ತು ತೆರಿಗೆಯನ್ನು ಸಂಗ್ರಹಿಸುತ್ತಿತ್ತು. ಏಳು ನಗರ ಸಭೆಗಳು ಮತ್ತು ಒಂದು ಪುರಸಭೆಯು ಸ್ವತ್ತು ತೆರಿಗೆಯನ್ನು ಕರ್ನಾಟಕ ಪುರ ಸಭೆಗಳ ಅಧಿನಿಯಮ, 1964 ರ ಅಡಿಯಲ್ಲಿ ಬಂಡವಾಳ ಮೌಲ್ಯ ಪದ್ಧತಿಯ ಸ್ವತ್ತು ತೆರಿಗೆಯನ್ನು ಹಾಗೂ ಕೆಲವು ಹಳ್ಳಿಗಳಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಅಡಿಯಲ್ಲಿ ಸ್ವತ್ತು ತೆರಿಗೆಯನ್ನು ಸಂಗ್ರಹಿಸಲಾಗುತ್ತಿತ್ತು. ಈಗ ಸದರಿ ವಿಲೀನ ಆಗಿರುವ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಇದೇ ಪ್ರದೇಶದಲ್ಲಿ ಒಂದೇ ತೆರನಾದ ಸ್ವತ್ತು ತೆರಿಗೆ ನೀತಿಯನ್ನು ತರುವುದು ಅವಶ್ಯವೆಂದು ಅಭಿಪ್ರಾಯಪಡಲಾಗಿದೆ.

ಆದ್ದರಿಂದ ಕರ್ನಾಟಕ ಪುರಸಭೆಗಳ ಅಧಿನಿಯಮ, 1976 ರಲ್ಲಿ 108 ಎ ಹೊಸ ಪ್ರಕರಣವನ್ನು ಸೇರಿಸಿ ಸ್ವತ್ತು ತೆರಿಗೆಯನ್ನು ಘಟಕ ಪ್ರದೇಶ ಮೌಲ್ಯದ ಆಧಾರದ ಮೇಲೆ ಸಂಗ್ರಹಿಸುವುದಕ್ಕಾಗಿ ಉಪಬಂಧ ಕಲ್ಪಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿದ್ದುದರಿಂದ ಕರ್ನಾಟಕ ರಾಜ್ಯಪಾಲರು ಕರ್ನಾಟಕ ಪುರಸಭೆಗಳ (ತಿದ್ದುಪಡಿ) ಅಧ್ಯಾದೇಶ, 2008 ನ್ನು (2008 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 1) ಪ್ರಖ್ಯಾಪಿಸಿರುತ್ತಾರೆ.

ಈ ವಿಧೇಯಕವನ್ನು ಸದರಿ ಅಧ್ಯಾದೇಶದ ಬದಲಿಗೆ ತರಲಾಗಿದೆ.

ಆದ್ದರಿಂದ ಈ ವಿಧೇಯಕ.

ಕರ್ನಾಟಕ ವಿಧಾನಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಗಳ ನಿಯಮಗಳ 80 ನೇ ನಿಯಮದ (1) ನೇ ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ.

ದಿನಾಂಕ 16-01-2007 ರಂದು ರಾಜ್ಯ ಸರ್ಕಾರವು ಏಳು ನಗರ ಸಭೆಗಳನ್ನು ಮತ್ತು ಒಂದು ಪುರಸಭೆಯನ್ನು ಹಾಗೂ ಕೆಲವು ಹಳ್ಳಿಗಳನ್ನು ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ವಿಲೀನಗೊಳಿಸಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯನ್ನು ರಚಿಸಿದೆ. ವಿಲೀನದ ಸಮಯದಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯು ಸ್ವಯಂ ಸ್ವತ್ತು ತೆರಿಗೆ ನಿರ್ಧರಣೆಯ ಅಡಿಯಲ್ಲಿ ವಾರ್ಷಿಕ ಬಾಡಿಗೆ ಮೌಲ್ಯದ ಆಧಾರದ ಮೇಲೆ ಸ್ವತ್ತು ತೆರಿಗೆಯನ್ನು ಸಂಗ್ರಹಿಸುತ್ತಿತ್ತು. ಏಳು ನಗರ ಸಭೆಗಳು ಮತ್ತು ಒಂದು ಪುರಸಭೆಯು ಸ್ವತ್ತು ತೆರಿಗೆಯನ್ನು ಕರ್ನಾಟಕ ಪುರ ಸಭೆಗಳ ಅಧಿನಿಯಮ, 1964 ರ ಅಡಿಯಲ್ಲಿ ಬಂಡವಾಳ ಮೌಲ್ಯ ಪದ್ಧತಿಯ ಸ್ವತ್ತು ತೆರಿಗೆಯನ್ನು ಹಾಗೂ ಕೆಲವು ಹಳ್ಳಿಗಳಲ್ಲಿ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಅಡಿಯಲ್ಲಿ ಸ್ವತ್ತು ತೆರಿಗೆಯನ್ನು ಸಂಗ್ರಹಿಸಲಾಗುತ್ತಿತ್ತು. ಈಗ ಸದರಿ ವಿಲೀನ ಆಗಿರುವ ಹಿನ್ನೆಲೆಯಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಇದೇ ಪ್ರದೇಶದಲ್ಲಿ ಒಂದೇ ತೆರನಾದ ಸ್ವತ್ತು ತೆರಿಗೆ ನೀತಿಯನ್ನು ತರುವುದು ಅವಶ್ಯವೆಂದು ಅಭಿಪ್ರಾಯಪಡಲಾಗಿದೆ.

ಆದ್ದರಿಂದ ಕರ್ನಾಟಕ ಪುರಸಭೆಗಳ ಅಧಿನಿಯಮ, 1976 ರಲ್ಲಿ 108 ಎ ಹೊಸ ಪ್ರಕರಣವನ್ನು ಸೇರಿಸಿ ಸ್ವತ್ತು ತೆರಿಗೆಯನ್ನು ಘಟಕ ಪ್ರದೇಶ ಮೌಲ್ಯದ ಆಧಾರದ ಮೇಲೆ ಸಂಗ್ರಹಿಸುವುದಕ್ಕಾಗಿ ಉಪಬಂಧ ಕಲ್ಪಿಸುವುದು ಅವಶ್ಯವೆಂದು ಪರಿಗಣಿಸಲಾಗಿದೆ.

ವಿಷಯವು ತುರ್ತು ಸ್ವರೂಪದ್ದಾಗಿದ್ದರಿಂದ ಮತ್ತು ಕರ್ನಾಟಕ ವಿಧಾನಮಂಡಲದ ಉಭಯ ಸದನಗಳು ಅಧಿವೇಶನದಲ್ಲಿಲ್ಲದಿದ್ದುದರಿಂದ ಕರ್ನಾಟಕ ರಾಜ್ಯಪಾಲರು ಕರ್ನಾಟಕ ಪುರಸಭೆಗಳ (ತಿದ್ದುಪಡಿ) ಅಧ್ಯಾದೇಶ, 2008 ನ್ನು (2008 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 1) ಪ್ರಖ್ಯಾಪಿಸಿರುತ್ತಾರೆ.

ಈ ವಿಧೇಯಕವನ್ನು ಸದರಿ ಅಧ್ಯಾದೇಶದ ಬದಲಿಗೆ ತರಲಾಗಿದೆ.

ಆರ್ಥಿಕ ಜ್ಞಾಪನ ಪತ್ರ :

ಪ್ರಸ್ತಾವಿತ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

ಖಂಡ 3 : 3ನೇ ಖಂಡದ ಮೂಲಕ ಸೇರಿಸಲು ಉದ್ದೇಶಿಸಿದ 108ಎ ಪ್ರಕರಣವು ಬೃಹತ್ ಬೆಂಗಳೂರು ನಗರ ಪಾಲಿಕೆಯ ಸಂಬಂಧದಲ್ಲಿ ಈ ಮುಂದಿನ ವಿಷಯಗಳಿಗೆ ಸಂಬಂಧಪಟ್ಟಂತೆ ನಿಯಮಗಳನ್ನು ರಚಿಸಲು ರಾಜ್ಯ ಸರ್ಕಾರಕ್ಕೆ ಅಧಿಕಾರವನ್ನು ನೀಡುತ್ತದೆ.

(1) ಬೆಂಗಳೂರು ನಗರ ಪಾಲಿಕೆಯು ಸ್ವತ್ತು ತೆರಿಗೆಯ ನಿರ್ಧರಣೆಯ ಸಂಬಂಧದಲ್ಲಿ ನಮೂನೆ ಅಥವಾ ರಿಜಿಸ್ಟರ್ ಇವುಗಳ ಬಗ್ಗೆ ಪ್ರತ್ಯೇಕ ವಿಧಾನ.

(2) ಮಾಲೀಕರು ಸಲ್ಲಿಸಬೇಕಾದ ವಿವರಣಾ ಪಟ್ಟಿಕೆಯ ನಮೂನೆ ಮತ್ತು ವಿಧಾನ ಹಾಗೂ ಸಂದಾಯ ಮಾಡಬೇಕಾದ ಪ್ರಸ್ತಾವಿತ ಶಾಸನ ರಚನಾಧಿಕಾರದ ಪ್ರತ್ಯಾಯೋಜನೆಯ ವಾಡಿಕೆಯ ಸ್ವರೂಪದ್ದಾಗಿದೆ.

ಬಿ.ಎಸ್. ಯಡಿಯೂರಪ್ಪ
ಮುಖ್ಯಮಂತ್ರಿಗಳು

ಎಸ್.ಬಿ. ಪಾಟೀಲ್
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ

ಅನುಬಂಧ – 2

ಕರ್ನಾಟಕ ವಿಧಾನ ಸಭೆ

ಹದಿಮೂರನೇ ವಿಧಾನಸಭೆ

ಎರಡನೇ ಅಧಿವೇಶನ

ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ವಿಧೇಯಕ, 2009

(2009 ರ ವಿಧಾನಸಭೆಯ ವಿಧೇಯಕ ಸಂಖ್ಯೆ 3)

ವೈದ್ಯೋಪಚಾರ ಸಿಬ್ಬಂದಿಯ ಮೇಲಿನ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ಮತ್ತು ಅದಕ್ಕೆ ಸಂಬಂಧಿಸಿದ ಮತ್ತು ಅದಕ್ಕೆ ಪ್ರಾಸಂಗೀಕರವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವ ಒಂದು ವಿಧೇಯಕ.

ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗೆ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವುದು ಮತ್ತು ಅದಕ್ಕೆ ಸಂಬಂಧಿಸಿದ ಮತ್ತು ಅದಕ್ಕೆ ಪ್ರಾಸಂಗಿಕವಾದ ವಿಷಯಗಳಿಗೆ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ :-

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ** :- (1) ಈ ಅಧಿನಿಯಮವನ್ನು ಕರ್ನಾಟಕ ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಹಿಂಸಾಚಾರವನ್ನು ಮತ್ತು ವೈದ್ಯೋಪಚಾರ ಸಂಸ್ಥೆಗಳ ಆಸ್ತಿಗೆ ಹಾನಿ ಮಾಡುವುದನ್ನು ನಿಷೇಧಿಸುವ ಅಧಿನಿಯಮ, 2009 ಎಂದು ಕರೆಯತಕ್ಕದ್ದು.

2. **ಪರಿಭಾಷೆಗಳು** :- ಈ ಅಧಿನಿಯಮದಲ್ಲಿ, ಸಂದರ್ಭಕ್ಕೆ ಬೇರೆ ಅರ್ಥದ ಅಗತ್ಯವಿದ್ದ ಹೊರತು,

(ಎ) " ವೈದ್ಯೋಪಚಾರ ಸಂಸ್ಥೆಗಳು ಎಂದರೆ ರಾಜ್ಯ ಸರ್ಕಾರ ಅಥವಾ ಸ್ಥಳೀಯ ಸಂಸ್ಥೆಗಳು ಮುಂತಾದವುಗಳ ನಿಯಂತ್ರಣದಲ್ಲಿರುವ ಜನರಿಗೆ ವೈದ್ಯೋಪಚಾರ ಸೇವೆ ಒದಗಿಸುತ್ತಿರುವ ಎಲ್ಲಾ ಸಂಸ್ಥೆಗಳು ಮತ್ತು ಇದರಲ್ಲಿ ರೋಗಿಗಳ ಚಿಕಿತ್ಸೆಗೆ ಸೌಲಭ್ಯವುಳ್ಳ ಮತ್ತು ಅವರನ್ನು ಬರಮಾಡಿಕೊಳ್ಳುವುದಕ್ಕೆ ಅಥವಾ ಅವರ ವಾಸ್ತವ್ಯಕ್ಕೆ ಸೌಲಭ್ಯಗಳನ್ನುಳ್ಳ ಯಾವುದೇ ಖಾಸಗಿ ಆಸ್ಪತ್ರೆ, ಹೆರಿಗೆಗಾಗಿ ಮತ್ತು ಹೆರಿಗೆ ಸಂಬಂಧದಲ್ಲಿ ಗರ್ಭಿಣಿ ಹಾಗೂ ಬಾಣಂತನದ ಆರೈಕೆಗಾಗಿ ಅಥವಾ ಇದಕ್ಕೆ ಸಂಬಂಧಿಸಿದ ಇತರ ಯಾವುದೇ ಕಾರಣಕ್ಕಾಗಿ ಮಹಿಳೆಯರನ್ನು ವಾಡಿಕೆಯಾಗಿ ಬರಮಾಡಿಕೊಳ್ಳುವ ಮತ್ತು ದಾಖಲಿಸಿಕೊಳ್ಳುವ ಯಾವುದೇ ಖಾಸಗಿ ಪ್ರಸೂತಿ ಗೃಹ; ಮತ್ತು ದೇಹದ ಅಥವಾ ಮನಸ್ಸಿನ ಯಾವುದೇ ಖಾಯಿಲೆ, ಗಾಯ ಅಥವಾ ದುರ್ಬಲತೆಯಿಂದ ಬಳಸುತ್ತಿರುವ ವ್ಯಕ್ತಿಗಳ ಉಪಚಾರ ಮತ್ತು ವಾಸ್ತವ್ಯಕ್ಕೆ ಬಳಸುವ ಅಥವಾ ಹಾಗೆ ಬಳಸುವ ಉದ್ದೇಶವುಳ್ಳ ಮತ್ತು ಚಿಕಿತ್ಸೆ ಅಥವಾ ಶುಶ್ರೂಷೆ ಒದಗಿಸುವ ಅಥವಾ ಅವೆರಡನ್ನೂ ಒದಗಿಸುವ ಯಾವುದೇ ಖಾಸಗಿ ನರ್ಸಿಂಗ್ ಹೋಮ್ ಒಳಗೊಳ್ಳುತ್ತವೆ ಮತ್ತು ಇದು ಪ್ರಸೂತಿಗೃಹ ಅಥವಾ ಆರೋಗ್ಯಧಾಮ ಮುಂತಾದವುಗಳನ್ನೂ ಒಳಗೊಳ್ಳುತ್ತವೆ.

(ಬಿ) ವೈದ್ಯೋಪಚಾರ ಸಂಸ್ಥೆಗೆ ಸಂಬಂಧಿಸಿದಂತೆ ವೈದ್ಯೋಪಚಾರ ಸಿಬ್ಬಂದಿ ಎಂಬುದರಲ್ಲಿ :-

(1) ವೈದ್ಯೋಪಚಾರ ಸಂಸ್ಥೆಗಳಲ್ಲಿ (ತಾತ್ಕಾಲಿಕ ನೋಂದಣಿಯನ್ನು ಹೊಂದಿರುವವರೂ ಸೇರಿದಂತೆ) ಕಾರ್ಯನಿರ್ವಹಿಸುತ್ತಿರುವ ನೋಂದಾಯಿತ ವೈದ್ಯರು ;

(2) ನೋಂದಾಯಿತ ಶುಶ್ರೂಷಕಿಯರು;

(3) ವೈದ್ಯ ವಿದ್ಯಾರ್ಥಿಗಳು;

(4) ನರ್ಸಿಂಗ್ ವಿದ್ಯಾರ್ಥಿಗಳು;

(5) ವೈದ್ಯೋಪಚಾರ ಸಂಸ್ಥೆಗಳಲ್ಲಿ ನೇಮಿಸಲ್ಪಟ್ಟ ಮತ್ತು ಕಾರ್ಯ ನಿರ್ವಹಿಸುತ್ತಿರುವ ಅರೆ ವೈದ್ಯಕೀಯ ಕಾರ್ಯಕರ್ತರು;

(ಸಿ) ಅಪರಾಧಿ ಎಂದರೆ ಯಾವುದೇ ವ್ಯಕ್ತಿಯು ತಾನೊಬ್ಬನೇ ಅಥವಾ ವ್ಯಕ್ತಿಗಳ ಗುಂಪಿನ ಅಥವಾ ಸಂಘದ ಒಬ್ಬ ಸದಸ್ಯನಾಗಿ ಅಥವಾ ನಾಯಕನಾಗಿ ಈ ಅಧಿನಿಯಮದಡಿಯಲ್ಲಿ ಹಿಂಸಾಚಾರವನ್ನು ಮಾಡುವ ಅಥವಾ ಮಾಡುವುದಕ್ಕೆ

ಪ್ರಯತ್ನಿಸುವ ಅಥವಾ ಮಾಡುವುದಕ್ಕೆ ದುಷ್ಪ್ರೇರಿಸುವ ಅಥವಾ ಪ್ರಚೋದಿಸುವ ಯಾವೊಬ್ಬ ವ್ಯಕ್ತಿ ;

(ಡಿ) ಹಿಂಸೆ ಎಂದರೆ ವೈದ್ಯೋಪಚಾರ ಸಂಸ್ಥೆಯಲ್ಲಿ ಕಾರ್ಯವನ್ನು ನಿರ್ವಹಿಸುತ್ತಿರುವಾಗ ಯಾವೊಬ್ಬ ವೈದ್ಯೋಪಚಾರ ಸಿಬ್ಬಂದಿಗೆ ಕೆಡಕು ಅಥವಾ ಗಾಯವುಂಟು ಮಾಡುವ, ಪ್ರಾಣಾಪಾಯ ಉಂಟುಮಾಡುವ ಅಥವಾ ಬೆದರಿಕೆ ಒಡ್ಡುವ, ಅಡ್ಡಿ ಉಂಟುಮಾಡುವ ಅಥವಾ ಆತಂಕವುಂಟು ಮಾಡುವ ಅಥವಾ ವೈದ್ಯೋಪಚಾರ ಸಂಸ್ಥೆಯಲ್ಲಿನ ಆಸ್ತಿಗೆ ಹಾನಿವುಂಟುಮಾಡುವ ಯಾವುವೇ ಚಟುವಟಿಕೆಗಳು;

3. ಹಿಂಸೆಯ ನಿಷೇಧ :- ವೈದ್ಯೋಪಚಾರ ಸಿಬ್ಬಂದಿಯ ಮೇಲೆ ಯಾವುದೇ ಹಿಂಸಾಚಾರ ಮಾಡುವುದನ್ನು ಅಥವಾ ವೈದ್ಯೋಪಚಾರ ಸಂಸ್ಥೆಯಲ್ಲಿನ ಆಸ್ತಿಗೆ ಹಾನಿ ಉಂಟುಮಾಡುವುದನ್ನು ನಿಷೇಧಿಸಲಾಗಿದೆ.

4. ದಂಡ :- 3 ನೇ ಪ್ರಕರಣವನ್ನು ಉಲ್ಲಂಘಿಸುವ ಯಾವುದೇ ಕೃತ್ಯವನ್ನು ಮಾಡುವ ಯಾವೊಬ್ಬ ವ್ಯಕ್ತಿಯು ಮೂರು ವರ್ಷಗಳ ಅವಧಿಯ ಕಾರಾವಾಸದಿಂದ ಮತ್ತು ಐವತ್ತು ಸಾವಿರ ರೂಪಾಯಿಗಳವರೆಗೆ ವಿಸ್ತರಿಸಬಹುದಾದ ಜುಲ್ಮಾನೆಯಿಂದ ದಂಡಿತನಾಗತಕ್ಕದ್ದು.

5. ಅಪರಾಧದ ಸಂಜ್ಞಾನ :- 3 ನೇ ಪ್ರಕರಣವನ್ನು ಉಲ್ಲಂಘಿಸಿ ಮಾಡಲಾದ ಯಾವುದೇ ಅಪರಾಧವು ಸಂಜ್ಞೇಯ ಮತ್ತು ಜಾಮೀನಿಯವಲ್ಲದ್ದಾಗಿರತಕ್ಕದ್ದು.

6. ಆಸ್ತಿಗೆ ಉಂಟಾದ ಹಾನಿಯ ನಷ್ಟದ ವಸೂಲಿ :- (1) ಅಪರಾಧಿಯು 4 ನೇ ಪ್ರಕರಣದಲ್ಲಿ ನಿರ್ದಿಷ್ಟಪಡಿಸಿದ ದಂಡನೆಗೆ ಗುರಿಯಾಗುವುದರ ಜೊತೆಗೆ, ಅಪರಾಧದ ಅಧಿವಿಚಾರಣೆ ಮಾಡುತ್ತಿರುವ ನ್ಯಾಯಾಲಯವು ನಿರ್ಧರಿಸಿದಂತೆ ಆಸ್ತಿಗೆ ಉಂಟಾದ ನಷ್ಟದ ಮತ್ತು ಹಾನಿಗೊಳಗಾದ ವೈದ್ಯಕೀಯ ಸಲಕರಣೆಯ ಖರೀದಿ ಬೆಲೆಯ ಎರಡರಷ್ಟು ಮೊತ್ತದ ದಂಡವನ್ನು ಸಂದಾಯ ಮಾಡಲು ಹೊಣೆಗಾರನಾಗತಕ್ಕದ್ದು.

(2) ಅಪರಾಧಿಯು (1) ನೇ ಉಪ ಪ್ರಕರಣದ ಅಡಿಯಲ್ಲಿ ದಂಡದ ಮೊತ್ತವನ್ನು ಸಂದಾಯ ಮಾಡದಿದ್ದಲ್ಲಿ, ಸದರಿ ಮೊತ್ತವನ್ನು ಕರ್ನಾಟಕ ಭೂ ಕಂದಾಯ ಅಧಿನಿಯಮ, 1964 ರ (1964 ಕರ್ನಾಟಕ ಅಧಿನಿಯಮ 12) ಉಪಬಂಧಗಳ ಅಡಿಯಲ್ಲಿ ಭೂ ಕಂದಾಯದ ಬಾಕಿಯಂತೆ ವಸೂಲಿ ಮಾಡತಕ್ಕದ್ದು.

7. ಈ ಅಧಿನಿಯಮದ ಉಪಬಂಧಗಳು ಇತರ ಕಾನೂನುಗಳಿಗೆ ಹೆಚ್ಚುವರಿಯಾಗಿರತಕ್ಕದ್ದು :- ಈ ಅಧಿನಿಯಮದ ಉಪಬಂಧಗಳು, ಪ್ರಸ್ತುತ ಜಾರಿಯಲ್ಲಿರುವ, ಯಾವುದೇ ಇತರ ಕಾನೂನಿನ ಉಪಬಂಧಗಳಿಗೆ ಹೆಚ್ಚುವರಿಯಾಗಿರತಕ್ಕದ್ದೇ ಹೊರತು ಅವನ್ನು ನ್ಯೂನಗೊಳಿಸತಕ್ಕದ್ದಲ್ಲ.

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ವೈದ್ಯೋಪಚಾರ ಸಿಬ್ಬಂದಿ ಮೇಲಿನ ಹಿಂಸೆ ಮತ್ತು ವೈದ್ಯೋಪಚಾರ ಸಂಸ್ಥೆಗಳಲ್ಲಿನ ಆಸ್ತಿಗೆ ಹಾನಿಯುಂಟು ಮಾಡುವುದನ್ನು ತಪ್ಪಿಸಲು ಕಾನೂನನ್ನು ಅಧಿನಿಯಮಿಸುವುದು ಅವಶ್ಯಕವಾಗಿದೆ ಎಂದು ಪರಿಗಣಿಸಲಾಗಿದೆ.

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಕ್ರಮದಿಂದ ಯಾವುದೇ ಹೆಚ್ಚಿನ ವೆಚ್ಚವು ಉಂಟಾಗುವುದಿಲ್ಲ.

ರಾಮಚಂದ್ರ ಗೌಡ
ವೈದ್ಯಕೀಯ ಶಿಕ್ಷಣ ಸಚಿವರು

ಎಸ್.ಬಿ. ಪಾಟೀಲ್
ಕಾರ್ಯದರ್ಶಿ
ಕರ್ನಾಟಕ ವಿಧಾನ ಸಭೆ

ಅನುಬಂಧ - 3

ಕರ್ನಾಟಕ ವಿಧಾನ ಸಭೆ

ಹದಿಮೂರನೇ ವಿಧಾನಸಭೆ

ಎರಡನೇ ಅಧಿವೇಶನ

ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ವಿಧೇಯಕ, 2009

(2009 ರ ವಿಧಾನಸಭೆಯ ವಿಧೇಯಕ ಸಂಖ್ಯೆ 5)

ಹಾವೇರಿ ಜಿಲ್ಲೆಯ ಕಾಗಿನೆಲೆ ಮತ್ತು ಬಾಡ ಗ್ರಾಮಗಳಲ್ಲಿನ ಮತ್ತು ಅವುಗಳ ಸುತ್ತಮುತ್ತಲಿನ ಪರಂಪರೆಯ ತಾಣಗಳ ಅಭಿವೃದ್ಧಿ ಮತ್ತು ನಿರ್ವಹಣೆಗೆ ಒಂದು ಪ್ರಾಧಿಕಾರವನ್ನು ಸ್ಥಾಪಿಸುವುದಕ್ಕಾಗಿ ಉಪಬಂಧ ಕಲ್ಪಿಸಲು ಒಂದು ವಿಧೇಯಕ.

ಹಾವೇರಿ ಜಿಲ್ಲೆಯ ಕಾಗಿನೆಲೆ ಮತ್ತು ಬಾಡ ಗ್ರಾಮಗಳಲ್ಲಿನ ಮತ್ತು ಅವುಗಳ ಸುತ್ತಮುತ್ತಲಿನ ಪರಂಪರೆಯ ತಾಣಗಳನ್ನು ಅಂತರರಾಷ್ಟ್ರೀಯ ಯಾತ್ರಾ ಸ್ಥಳವಾಗಿ, ಸಾಂಸ್ಕೃತಿಕ ಮತ್ತು ಪ್ರವಾಸ ಕೇಂದ್ರವಾಗಿ ಅಭಿವೃದ್ಧಿಗೊಳಿಸಲು ಮತ್ತು ಅವುಗಳನ್ನು ನಿರ್ವಹಿಸಿಕೊಂಡು ಬರಲು ಒಂದು ಪ್ರಾಧಿಕಾರದ ಸ್ಥಾಪನೆಗಾಗಿ ಉಪಬಂಧ ಕಲ್ಪಿಸುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೊಂಬತ್ತನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನಮಂಡಲದಿಂದ ಈ ಮುಂದಿನಂತೆ ಅಧಿನಯಮಿತವಾಗಲಿ, ಎಂದರೆ :-

ಅಧ್ಯಾಯ - I

ಪ್ರಾರಂಭಿಕ

1. ಸಂಕ್ಷಿಪ್ತ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ :-(1) ಈ ಅಧಿನಿಯಮವನ್ನು ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 2009 ಎಂದು ಕರೆಯತಕ್ಕದ್ದು.

2. ಇದು 2 ನೇ ಪ್ರಕರಣದ (ಸಿ) ಖಂಡದಲ್ಲಿ ಪರಿಭಾಷಿಸಿರುವಂಥ ಕಾಗಿನೆಲೆ ಮತ್ತು ಬಾಡ ಗ್ರಾಮಗಳ ಪ್ರದೇಶಕ್ಕೆ ವ್ಯಾಪ್ತವಾಗತಕ್ಕದ್ದು.

3. ಇದು 2005 ನೇ ಜೂನ್ ಮೂವತ್ತನೇ ದಿನಾಂಕದಿಂದ ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

(ಎ) "ಸೌಕರ್ಯ" ಎಂಬುದರಲ್ಲಿ ರಸ್ತೆಗಳು, ಬೀದಿಗಳು, ಸುರಂಗ ಮಾರ್ಗಗಳು, ದೀಪವ್ಯವಸ್ಥೆ, ಚರಂಡಿ ವ್ಯವಸ್ಥೆ, ನೈರ್ಮಲ್ಯ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಸರಬರಾಜು ಅಥವಾ ಇತರ ಅನುಕೂಲಗಳು, ಸಾರ್ವಜನಿಕ ಕಾಮಗಾರಿಗಳು, ಮಾರುಕಟ್ಟೆ ಸ್ಥಳಗಳು, ಅಂಚೆ ಕಛೇರಿಗಳು, ಬ್ಯಾಂಕುಗಳು, ಆಸ್ಪತ್ರೆಗಳು, ಚಿಕಿತ್ಸಾಲಯಗಳು, ಪೊಲೀಸ್ ಠಾಣೆಗಳು, ನ್ಯಾಯಬೆಲೆ ಅಂಗಡಿಗಳು, ಹಾಲಿನ ಕೇಂದ್ರಗಳು, ಗ್ರಂಥಾಲಯಗಳು, ಮನೋರಂಜನಾ ಕೇಂದ್ರಗಳು, ಪ್ರಾಧಿಕಾರವು ಪ್ರಾಧಿಕೃತಗೊಳಿಸಿದ ಜನೋಪಯೋಗಿ ಸೇವೆಯ ಯಾವುವೇ ಕೇಂದ್ರಗಳು ಅಥವಾ ಇತರ ಸೌಲಭ್ಯಗಳು; ಮತ್ತು ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಇತರ ಸೌಕರ್ಯಗಳು ಒಳಗೊಳ್ಳುತ್ತವೆ;

(ಬಿ) 'ಪ್ರಾಧಿಕಾರ' ಎಂದರೆ, 3 ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ;

(ಸಿ) 'ಕಾಗಿನೆಲೆ' ಎಂದರೆ, ಕಾಗಿನೆಲೆ ಮತ್ತು ಬಾಡ ಗ್ರಾಮಗಳ ಸರಹದ್ದುಗಳು ಮತ್ತು ಕಾಗಿನೆಲೆ ಮತ್ತು ಬಾಡದಲ್ಲಿರುವ ಪರಂಪರೆಯ ತಾಣಗಳ ಅಭಿವೃದ್ಧಿಗಾಗಿ ಸರ್ಕಾರವು ಕಾಲಕಾಲಕ್ಕೆ ಅರ್ಜಿಸಬಹುದಾದ ಭೂಮಿಗಳು ಹಾಗೂ ಅಧಿಸೂಚನೆಯ ಮೂಲಕ ರಾಜ್ಯಸರ್ಕಾರವು ಘೋಷಿಸಬಹುದಾದಂಥ ಇತರೆ ಪ್ರದೇಶಗಳು ಹಾಗೂ ಅದು ಅವುಗಳನ್ನು ಒಳಗೊಳ್ಳುತ್ತದೆ.

(ಡಿ) **ಅಧ್ಯಕ್ಷರು** ಎಂದರೆ ಪ್ರಾಧಿಕಾರದ ಅಧ್ಯಕ್ಷರು;

(ಇ) **ಆಯುಕ್ತ** ಎಂದರೆ 10ನೇ ಪ್ರಕರಣದ ಅಡಿಯಲ್ಲಿ ನೇಮಕ ಮಾಡಲಾದ ಪ್ರಾಧಿಕಾರದ ಆಯುಕ್ತ;

(ಎಫ್) **ನಿಧಿ** ಎಂದರೆ ಪ್ರಾಧಿಕಾರದ ನಿಧಿ;

(ಜಿ) **ಪರಂಪರೆಯ ತಾಣ** ಎಂದರೆ ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಹಾಗೂ ಅವಶೇಷಗಳ ಅಧಿನಿಯಮ, 1959 ರ (1959 ರ ಕೇಂದ್ರ ಅಧಿನಿಯಮ 24) ರ ಅಡಿಯಲ್ಲಿ ಸಂರಕ್ಷಿತ ಪ್ರದೇಶವೆಂದು ಉಲ್ಲೇಖಿಸಲಾದ ಪ್ರದೇಶವನ್ನು ಹೊರತುಪಡಿಸಿ, ಅನುಸೂಚಿಯಲ್ಲಿ ನಿರ್ದಿಷ್ಟಪಡಿಸಿದ ತಾಣಗಳನ್ನು ಒಳಗೊಳ್ಳುವ ಸಂಪೂರ್ಣ ಪ್ರದೇಶ.

(ಹೆಚ್) ಸದಸ್ಯ ಎಂದರೆ, ಪ್ರಾಧಿಕಾರದ ಸದಸ್ಯ.

(ಐ) ವಿನಿಯಮಗಳು ಎಂದರೆ, 46 ನೇ ಪ್ರಕರಣದ ಅಡಿಯಲ್ಲಿ ರಚಿಸಿದ ಪ್ರಾಧಿಕಾರದ ವಿನಿಯಮಗಳು;

(ಜೆ) ಅನುಸೂಚಿ ಎಂದರೆ, ಈ ಅಧ್ಯಾದೇಶಕ್ಕೆ ಲಗತ್ತಿಸಲಾದ ಅನುಸೂಚಿ.

ಅಧ್ಯಾಯ - II

ಪ್ರಾಧಿಕಾರ ಮತ್ತು ಅದರ ಉದ್ಯೋಗಿಗಳು

1. **ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ** :-(1) ಈ ಅಧಿನಿಯಮದ ಪ್ರಾರಂಭದ ತರುವಾಯ ಆದಷ್ಟು ಬೇಗನೇ, ಈ ಅಧಿನಿಯಮದ ಉದ್ದೇಶಗಳಿಗಾಗಿ, ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಎಂದು ಕರೆಯಲಾಗುವ ಒಂದು ಪ್ರಾಧಿಕಾರವನ್ನು ಸ್ಥಾಪಿಸತಕ್ಕದ್ದು.

(2) ಪ್ರಾಧಿಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ಸ್ಥಳದಲ್ಲಿ ತನ್ನ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರತಕ್ಕದ್ದು.

(3) ಪ್ರಾಧಿಕಾರವು, ಶಾಶ್ವತ ಉತ್ತರಾಧಿಕಾರಿ ಮತ್ತು ಸಾಮಾನ್ಯ ಮೊಹರನ್ನು ಹೊಂದಿರುವ, ಚಿರ ಮತ್ತು ಸ್ಥಿರ ಸ್ವತ್ತುಗಳೆರಡನ್ನು ಅರ್ಜಿಸುವ, ಧಾರಣ ಮಾಡುವ ಹಾಗೂ ವಿಲೆ ಮಾಡುವ ಮತ್ತು ಕರಾರು ಮಾಡಿಕೊಳ್ಳುವ ಅಧಿಕಾರವನ್ನು ಹೊಂದಿರುವ, ಮೇಲೆ ಹೇಳಿದ ಹೆಸರಿನ ಒಂದು ನಿಗಮಿತ ನಿಕಾಯವಾಗಿರತಕ್ಕದ್ದು ಮತ್ತು ಸದರಿ ಹೆಸರಿನಿಂದ ದಾವೆ ಹೂಡತಕ್ಕದ್ದು ಮತ್ತು ದಾವೆಗೆ ಗುರಿಯಾಗತಕ್ಕದ್ದು.

(4) ಪ್ರಾಧಿಕಾರವು, ಈ ಮುಂದಿನ ಸದಸ್ಯರನ್ನು ಒಳಗೊಂಡಿರತಕ್ಕದ್ದು, ಎಂದರೆ:-

(ಎ) ಮುಖ್ಯಮಂತ್ರಿಗಳು, ಇವರು ಪ್ರಾಧಿಕಾರದ ಸಲಹಾ ಸಮಿತಿಯ ಪದನಿಮಿತ್ತ ಅಧ್ಯಕ್ಷರಾಗಿರತಕ್ಕದ್ದು;

(ಬಿ) ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರು;

(ಸಿ) ಕಂದಾಯ ಇಲಾಖೆಯ ಸಚಿವರು;

(ಡಿ) ಆರ್ಥಿಕ ಇಲಾಖೆಯ ಸಚಿವರು;

(ಇ) ಹಾವೇರಿ ಜಿಲ್ಲೆಯ ಉಸ್ತುವಾರಿ ಸಚಿವರು;

(ಎಫ್) ಕಾಗಿನೆಲೆ ಹಾಗೂ ಬಾಡ ಗ್ರಾಮಗಳ ಕ್ಷೇತ್ರವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಹಾಗೂ ಅದರ ಎಲ್ಲೆಗಳೊಳಗೆ ತಮ್ಮ ಚುನಾವಣೆ ಕ್ಷೇತ್ರವನ್ನು ಹೊಂದಿರುವ ಸಂಸತ್ ಸದಸ್ಯರು ಮತ್ತು ರಾಜ್ಯ ವಿಧಾನಮಂಡಲದ ಸದಸ್ಯರು;

(ಜಿ) ಅಧ್ಯಕ್ಷರು, ಜಿಲ್ಲಾ ಪಂಚಾಯಿತಿ, ಹಾವೇರಿ;

(ಹೆಚ್) ಸಂತ ಕವಿ ಕನಕದಾಸರು ಅಂಗೀಕರಿಸಿ ಸಾರಿದ ತತ್ವಗಳ ಅನುಷ್ಠಾನಕ್ಕಾಗಿ ದುಡಿದಂಥ, ರಾಜ್ಯಸರ್ಕಾರವು ನಾಮನಿರ್ದೇಶಿಸಿದ ಐವರಿಗೆ ಮೀರದ ಸದಸ್ಯರು, ಅವರುಗಳಲ್ಲಿ ಒಬ್ಬರು ದೇವಾಲಯ ವಾಸ್ತುಶಿಲ್ಪದ ಜ್ಞಾನ ಮತ್ತು ಹತ್ತು ವರ್ಷಗಳಿಗಿಂತ ಕಡಿಮೆಯಿಲ್ಲದ ಕೆಲಸದ ಅನುಭವ ಹೊಂದಿರುವ ಸಿವಿಲ್ ಇಂಜಿನಿಯರ್ ಅಥವಾ ವಾಸ್ತುಶಿಲ್ಪಿಯಾಗಿರತಕ್ಕದ್ದು;

(ಐ) ಸರ್ಕಾರದ ಕಾರ್ಯದರ್ಶಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ;

(ಜೆ) ಸರ್ಕಾರದ ಕಾರ್ಯದರ್ಶಿಗಳು, ಕಂದಾಯ ಇಲಾಖೆ;

(ಕೆ) ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ;

(ಎಲ್) ಸರ್ಕಾರದ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ;

(ಎಂ) ಜಿಲ್ಲಾಧಿಕಾರಿಗಳು, ಹಾವೇರಿ ಜಿಲ್ಲೆ; ಸದಸ್ಯರು

(ಎನ್) ನಿರ್ದೇಶಕರು, ಪ್ರಾಚ್ಯವಸ್ತು ಮತ್ತು ವಸ್ತು ಸಂಗ್ರಹಾಲಯ ಇಲಾಖೆ; ಸದಸ್ಯರು

(ಓ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಕೆರೆ ಅಭಿವೃದ್ಧಿ ಪ್ರಾಧಿಕಾರ; ಸದಸ್ಯರು

(ಪಿ) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾಪಂಚಾಯತ್, ಹಾವೇರಿ ಸದಸ್ಯರು

(ಕ್ಯೂ) ಪರಂಪರೆ ಆಯುಕ್ತರು; ಸದಸ್ಯರು

(ಆರ್) ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ; ಸದಸ್ಯರು

(ಎಸ್) ಆಯುಕ್ತರು, ಪ್ರವಾಸೋದ್ಯಮ ಇಲಾಖೆ; ಸದಸ್ಯರು

(ಟಿ) ನಿರ್ದೇಶಕರು, ಪಟ್ಟಣ ಮತ್ತು ಗ್ರಾಮಾಂತರ ಯೋಜನೆ; ಸದಸ್ಯರು

(ಯು) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಬ್ಯಾಡಗಿ; ಸದಸ್ಯರು

(ವಿ) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಶಿಗ್ಗಾಂವ್; ಸದಸ್ಯರು

(ಡಬ್ಲ್ಯೂ) ಅಧ್ಯಕ್ಷರು, ಗ್ರಾಮ ಪಂಚಾಯತಿ, ಕಾಗಿನೆಲೆ; ಸದಸ್ಯರು

(ಎಕ್ಸ್) ಅಧ್ಯಕ್ಷರು, ಗ್ರಾಮ ಪಂಚಾಯಿತಿ, ಬಾಡ; ಸದಸ್ಯರು

(ವೈ) ಪ್ರಾಧಿಕಾರದ ಆಯುಕ್ತರು; ಸದಸ್ಯ-ಕಾರ್ಯದರ್ಶಿ

4. ಪದಾವಧಿ ಮತ್ತು ಸೇವಾ ಷರತ್ತುಗಳು :- (1) ರಾಜ್ಯ ಸರ್ಕಾರದ ಇಚ್ಛೆಗೊಳಪಟ್ಟು, ರಾಜ್ಯ ಸರ್ಕಾರವು ನಾಮನಿರ್ದೇಶಿಸಿದ ಅಧಿಕಾರೇತರ ಸದಸ್ಯರು ಮೂರರಿಂದ ಐದು ವರ್ಷಗಳ ಅವಧಿಗೆ ಪದಧಾರಣ ಮಾಡತಕ್ಕದ್ದು;

(2) ಯಾವೊಬ್ಬ ಅಧಿಕಾರೇತರ ಸದಸ್ಯನು ರಾಜ್ಯ ಸರ್ಕಾರಕ್ಕೆ ಪತ್ರ ಬರೆದು ಅದಕ್ಕೆ ತನ್ನ ಸಹಿ ಹಾಕಿ ತನ್ನ ಪದಕ್ಕೆ ರಾಜೀನಾಮೆ ನೀಡಬಹುದು, ಆದರೆ ತನ್ನ ರಾಜೀನಾಮೆಯನ್ನು ಅಂಗೀಕಾರವಾಗುವವರೆಗೂ ತನ್ನ ಪದದಲ್ಲಿ ಮುಂದುವರಿಯತಕ್ಕದ್ದು.

(3) ಅಧಿಕಾರೇತರ ಸದಸ್ಯರು ನಿಯಮಿಸಬಹುದಾದಂಥ ಭತ್ಯಗಳನ್ನು ಪಡೆಯತಕ್ಕದ್ದು;

5. ಸದಸ್ಯತ್ವಕ್ಕೆ ಅನರ್ಹತೆಗಳು :- ಒಬ್ಬ ವ್ಯಕ್ತಿಯು, -

(ಎ) ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಳ್ಳುವ ಒಂದು ಅಪರಾಧಿ ಎಂದು ನಿರ್ಣೀತನಾಗಿದ್ದು ಕಾರಾವಾಸದ ಶಿಕ್ಷೆಗೆ ಗುರಿಯಾಗಿದ್ದರೆ; ಅಥವಾ

(ಬಿ) ಅಸ್ವಸ್ಥ ಚಿತ್ತದವನಾಗಿದ್ದರೆ ಮತ್ತು ಹಾಗೆಂದು ಸಕ್ಷಮ ನ್ಯಾಯಾಲಯದಿಂದ ಘೋಷಿತನಾಗಿದ್ದರೆ; ಅಥವಾ

(ಸಿ) ಅವಿಮುಕ್ತ ದಿವಾಳಿಯಾಗಿದ್ದರೆ; ಅಥವಾ

(ಡಿ) ಕೇಂದ್ರ ಸರ್ಕಾರದ ಅಥವಾ ಒಂದು ರಾಜ್ಯ ಸರ್ಕಾರದ ಅಥವಾ ಕೇಂದ್ರ ಸರ್ಕಾರದ ಅಥವಾ ಒಂದು ರಾಜ್ಯ ಸರ್ಕಾರವು ಒಡೆತನ ಹೊಂದಿರುವ ಅಥವಾ ನಿಯಂತ್ರಣ ಹೊಂದಿರುವ ಒಂದು ನಿಕಾಯದ ಅಥವಾ ನಿಗಮದ ಸೇವೆಯಿಂದ ತೆಗದುಹಾಕಲಾದ ವ್ಯಕ್ತಿಯಾಗಿದ್ದರೆ ಅಥವಾ ವಜಾ ಮಾಡಲಾದ ವ್ಯಕ್ತಿಯಾಗಿದ್ದರೆ; ಅಥವಾ

(ಇ) ಪ್ರಾಧಿಕಾರದ ಆದೇಶದಿಂದ ಮಾಡಲಾದ ಯಾವುದೇ ಕಾಮಗಾರಿಯಲ್ಲಿ ಅಥವಾ ಪ್ರಾಧಿಕಾರದೊಡನೆ ಅಥವಾ ಅದರ ಅಡಿಯಲ್ಲಿ ಅಥವಾ ಅದರ ಮೂಲಕ ಅಥವಾ ಅದರ ಪರವಾಗಿ ಮಾಡಿಕೊಂಡ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಸ್ವಯಂ ತಾನೇ ಅಥವಾ ಒಬ್ಬ ಪಾಲುದಾರನ ಅಥವಾ ಏಜೆಂಟನ ಮೂಲಕ ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಷೇರನ್ನು ಅಥವಾ ಹಿತಾಸಕ್ತಿಯನ್ನು ಹೊಂದಿದ್ದರೆ ಅಥವಾ

(ಎಫ್) ಪ್ರಾಧಿಕಾರದ ಪರವಾಗಿ ವೇತನ ಪಡೆಯುವ ನ್ಯಾಯವಾದಿಯಾಗಿ ನಿಯೋಜಿತನಾಗಿದ್ದರೆ ಅಥವಾ ಪ್ರಾಧಿಕಾರದ ವಿರುದ್ಧವಾಗಿ ನ್ಯಾಯವಾದಿಯಾಗಿ ನಿಯೋಜನೆಯನ್ನು ಒಪ್ಪಿಕೊಂಡಿದ್ದರೆ, - ಅವನು ಸದಸ್ಯನಾಗಿ ನೇಮಕ ಹೊಂದಲು ಅಥವಾ ಸದಸ್ಯನಾಗಿರಲು ಅನರ್ಹನಾಗತಕ್ಕದ್ದು;

ಪರಂತು, ಒಬ್ಬ ವ್ಯಕ್ತಿಯು, ಪ್ರಾಧಿಕಾರದ ವ್ಯವಹಾರಗಳಿಗೆ ಸಂಬಂಧಪಟ್ಟ ಯಾವುದೇ ಜಾಹೀರಾತನ್ನು ಪ್ರಕಟಿಸಿರುವ ಯಾವುದೇ ವೃತ್ತ ಪತ್ರಿಕೆಯಲ್ಲಿ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂಬ ಮಾತ್ರದಿಂದಲೇ (1) ನೇ ಉಪ-ಪ್ರಕರಣದ (ಇ) ಖಂಡದ ಅಡಿಯಲ್ಲಿ ಅನರ್ಹನಾಗತಕ್ಕದ್ದಲ್ಲ ಅಥವಾ ಸದರಿ ಖಂಡದ ಅರ್ಥ ವ್ಯಾಪ್ತಿಯಲ್ಲಿ ಯಾವುದೇ ಕರಾರು ಅಥವಾ ನಿಯೋಜನೆಯಲ್ಲಿ ಯಾವುದೇ ಷೇರು ಅಥವಾ ಹಿತಾಸಕ್ತಿಯನ್ನು ಹೊಂದಿದ್ದಾನೆಂದು ಭಾವಿಸತಕ್ಕದ್ದಲ್ಲ.

6. **ಸದಸ್ಯರನ್ನು ತೆಗೆದು ಹಾಕುವುದು** :- (1) ರಾಜ್ಯ ಸರ್ಕಾರವು ಸದಸ್ಯೆರೊಬ್ಬರನ್ನು ಸದಸ್ಯಸ್ಥಾನದಿಂದ ಆತ :-

(ಎ) 5ನೇ ಪ್ರಕರಣದಲ್ಲಿ ಹೇಳಲಾದ ಅನರ್ಹತೆಗಳಲ್ಲಿ ಯಾವುದೇ ಅನರ್ಹತೆಗೆ ಒಳಪಟ್ಟರೆ ತೆಗೆದುಹಾಕತಕ್ಕದ್ದು;

ಪರಂತು, ಯಾವ ಸದಸ್ಯರನ್ನೂ, ಅವರು ಈ ಪ್ರಕರಣದ (1) ನೇ ಉಪ ಪ್ರಕರಣದ (ಇ) ಖಂಡದಲ್ಲಿ ಹೇಳಲಾದ ಅನರ್ಹತೆಗೆ ಒಳಗಾಗಿದ್ದಾರೆಂಬ ಕಾರಣದ ಮೇಲೆ, ತೆಗೆದುಹಾಕುವ ಪ್ರಸ್ತಾವದ ಸಂದರ್ಭದಲ್ಲಿ ಅದರ ವಿರುದ್ಧ ತನ್ನ ಮನವಿಯನ್ನು ಸಲ್ಲಿಸಲು ಅವರಿಗೆ ಒಂದು ಅವಕಾಶವನ್ನು ಕೊಟ್ಟ ಹೊರತು, ತೆಗೆದು ಹಾಕತಕ್ಕದ್ದಲ್ಲ; ಅಥವಾ

(ಬಿ) ಅವರು ಕಾರ್ಯ ನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯವನ್ನು ನಿರ್ವಹಿಸಲು ಅಸಮರ್ಥರಾದರೆ ತೆಗೆದುಹಾಕತಕ್ಕದ್ದು; ಅಥವಾ

(ಸಿ) ಗೈರು ಹಾಜರಾಗಲು ಪ್ರಾಧಿಕಾರದಿಂದ ಅನುಮತಿ ಪಡೆಯದೆ ಪ್ರಾಧಿಕಾರದ ಮೂರು ನಿರಂತರ ಸಭೆಗಳಿಗೆ ಗೈರುಹಾಜರಾದರೆ ತೆಗೆದುಹಾಕತಕ್ಕದ್ದು

ಪರಂತು, ಈ ಖಂಡವು ಪದನಿಮಿತ್ತ ಸದಸ್ಯರಿಗೆ ಅನ್ವಯವಾಗತಕ್ಕದ್ದಲ್ಲ; ಅಥವಾ

(ಡಿ) ಆತನನ್ನು ಆ ಪದದಲ್ಲಿ ಮುಂದುವರೆಸಿದರೆ, ಸಾರ್ವಜನಿಕ ಹಿತಾಸಕ್ತಿಗೆ ಬಾಧಕ ಉಂಟಾಗುವಂತೆ ತನ್ನ ಸ್ಥಾನವನ್ನು ಆತ ದುರುಪಯೋಗ ಪಡಿಸಿಕೊಳ್ಳುವನೆಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ ತೆಗೆದುಹಾಕತಕ್ಕದ್ದು;

ಪರಂತು, ಯಾವ ಸದಸ್ಯರನ್ನೂ ಅವರಿಗೆ ಸದರಿ ಪ್ರಸ್ತಾವದ ವಿರುದ್ಧ ಮನವಿಯನ್ನು ಹೇಳಿಕೊಳ್ಳಲು ಒಂದು ಅವಕಾಶವನ್ನು ಕೊಟ್ಟ ಹೊರತು ಈ ಖಂಡದ ಅಡಿಯಲ್ಲಿ ತೆಗೆದು ಹಾಕತಕ್ಕದ್ದಲ್ಲ.

7. **ಮರು ನೇಮಕಾತಿಗೆ ಅರ್ಹತೆ** :- ಸದಸ್ಯತ್ವ ಕೊನೆಗೊಂಡ ಯಾವೊಬ್ಬ ವ್ಯಕ್ತಿಯು, 6ನೇ ಪ್ರಕರಣದಲ್ಲಿ ಹೇಳಿದಂತೆ ಅನರ್ಹತೆಗೊಳಗಾಗಿದ್ದಾಗ ಹೊರತು, ಸದಸ್ಯರಾಗಿ ಮರುನೇಮಕ ಹೊಂದಲು ಅರ್ಹರಾಗಿರತಕ್ಕದ್ದು.

8. **ಪ್ರಾಧಿಕಾರದ ಅಧಿಕಾರಿಗಳು** :- (1) ಪ್ರಾಧಿಕಾರವು, ಈ ಅಧಿನಿಯಮದ ಆಶಯಗಳು ಮತ್ತು ಉಪಬಂಧಗಳನ್ನು ಜಾರಿಗೆ ತರಲು ತಾನು ಅವಶ್ಯವೆಂದು ಅಭಿಪ್ರಾಯ ಪಡುವಂಥ ಯಾವುವೇ ಕಾರ್ಯಗಳನ್ನು ಮಾಡಲು ಸಾಮಾನ್ಯವಾಗಿ ಅಧಿಕಾರ ಹೊಂದಿರತಕ್ಕದ್ದು;

ಪರಂತು, ಈ ಪ್ರಕರಣದಲ್ಲಿ ಇರುವುದು ಯಾವುದೂ ಇತರ ಯಾವುದೇ ಪ್ರಾಧಿಕಾರದ ಮೂಲಕ ನೆರವೇರಿಸಬೇಕೆಂದು ಅಧಿನಿಯಮದಲ್ಲಿ ನಿರ್ದಿಷ್ಟವಾಗಿ ತಿಳಿಸಿದಂಥ ಯಾವುದೇ ಕಾರ್ಯವನ್ನು ನೆರವೇರಿಸುವುದಕ್ಕೆ ಪ್ರಾಧಿಕಾರಕ್ಕೆ ಅಧಿಕಾರ ನೀಡುತ್ತದೆಂದು ಭಾವಿಸತಕ್ಕದ್ದಲ್ಲ.

(2) (1) ನೇ ಉಪ-ಪ್ರಕರಣದ ಸಾಮಾನ್ಯಾನ್ವಯಕ್ಕೆ ಬಾಧಕವಾಗದಂತೆ ಪ್ರಾಧಿಕಾರವು,-

(ಎ) ನಿಯಮಿಸಬಹುದಾದಂಥ ನಿಯಮಗಳಿಗೆ ಒಳಪಟ್ಟು, ಈ ಅಧಿನಿಯಮದ ಯಾವುದೇ ಉದ್ದೇಶವನ್ನು ನೆರವೇರಿಸಲು ಅವಶ್ಯಕ ಅಥವಾ ಯುಕ್ತವೆಂದು ತಾನು ಪರಿಗಣಿಸುವಂಥ ಎಲ್ಲಾ ಕರಾರುಗಳನ್ನು ಮಾಡಿಕೊಳ್ಳಲು ಮತ್ತು ನೆರವೇರಿಸಲು ಅಧಿಕಾರ ಹೊಂದಿರತಕ್ಕದ್ದು ಮತ್ತು ಪ್ರತಿಯೊಂದು ಕರಾರನ್ನು ಪ್ರಾಧಿಕಾರದ ಪರವಾಗಿ ಆಯುಕ್ತರು ಮಾಡಿಕೊಳ್ಳತಕ್ಕದ್ದು;

ಪರಂತು, ಐದು ಲಕ್ಷ ರೂಪಾಯಿ ಅಥವಾ ಅದಕ್ಕೂ ಹೆಚ್ಚು ವೆಚ್ಚವನ್ನೊಳಗೊಳ್ಳುವ ಯಾವ ಕರಾರನ್ನೂ ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿ ಇಲ್ಲದೆ ಮಾಡಿಕೊಳ್ಳತಕ್ಕದ್ದಲ್ಲ;

(ಬಿ) ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಮತ್ತು ಈ ಸಂಬಂಧವಾಗಿ ನಿಯಮಿಸಬಹುದಾದಂಥ ಷರತ್ತುಗಳಿಗೊಳಪಟ್ಟು ಈ ಅಧಿನಿಯಮದ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಅಗತ್ಯವಾಗುವ ಯಾವುದೇ ಮೊಬಲಗನ್ನು ಸಾಲವಾಗಿ ಪಡೆಯಲು ;

(ಸಿ) 42 ನೇ ಪ್ರಕರಣಕ್ಕೆ ಒಳಪಟ್ಟು ಮತ್ತು ನಿಯಮಿಸಬಹುದಾದಂಥ ನಿರ್ಬಂಧಗಳು, ಷರತ್ತುಗಳು ಮತ್ತು ಪರಿಮಿತಿಗಳಿಗೆ ಒಳಪಟ್ಟು ತನಗೆ ಸೇರಿದ ಚರ ಅಥವಾ ಸ್ಥಿರ ಸ್ವತ್ತನ್ನು ಗುತ್ತಿಗೆ, ಮಾರಾಟ ಅಥವಾ ಇತರ ರೀತಿಯಲ್ಲಿ ವರ್ಗಾವಣೆ ಮಾಡಲು ಮತ್ತು ರಾಜ್ಯ ಸರ್ಕಾರದ ಪೂರ್ವಾನುಮೋದನೆಯೊಂದಿಗೆ ಯಾವುದೇ ಅಭಿವೃದ್ಧಿ ಯೋಜನೆಯ ಉದ್ದೇಶಕ್ಕಾಗಿ ತನ್ನಲ್ಲಿ ನಿಹಿತವಾಗಿರುವ ಅಥವಾ ತಾನು ಅರ್ಜಿಸಿದ್ದ ಯಾವುದೇ ಭೂಮಿಯನ್ನು, ಮೈದಾನಗಳನ್ನು ರೂಪಿಸುವ ಅಥವಾ ಕಟ್ಟಡ ನಿರ್ಮಿಸುವ ಉದ್ದೇಶಗಳಿಗಾಗಿ ಅಥವಾ ಯಾವುದೇ ಇತರ ರೀತಿಯಲ್ಲಿ ವಿನಿಯೋಗಿಸಲು ಅಥವಾ ಬಳಸಲು.

-ಅಧಿಕಾರ ಹೊಂದಿರತಕ್ಕದ್ದು.

9. **ಪ್ರಾಧಿಕಾರದ ಉಪ-ಸಮಿತಿಗಳು :-** (1) ಪ್ರಾಧಿಕಾರವು, ಯಾವುದೇ ನಿರ್ದಿಷ್ಟ ಉದ್ದೇಶಕ್ಕಾಗಿ, ಆಯುಕ್ತರು ಅಧ್ಯಕ್ಷರಾಗಿರುವ ಮತ್ತು ಪ್ರತಿಯೊಂದು ಸಮಿತಿಯಲ್ಲಿ ಅವರಿಗೆ ಮೀರದಂತೆ ಇತರ ಸದಸ್ಯರಿರುವ ಒಂದು ಅಥವಾ ಹೆಚ್ಚಿನ ಉಪ-ಸಮಿತಿಗಳನ್ನು ರಚಿಸಬಹುದು.

(2) ಉಪ-ಸಮಿತಿಗಳು, ಪ್ರಾಧಿಕಾರವು ಪ್ರತ್ಯಾಯೋಜಿಸಿದಂಥ ಪ್ರಾಧಿಕಾರದ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಅಂಥ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

(3) ಪ್ರತಿಯೊಂದು ಉಪ-ಸಮಿತಿಯು ತಿಂಗಳಿಗೆ ಕನಿಷ್ಟಪಕ್ಷ ಒಂದು ಸಲವಾದರೂ ಸಭೆ ಸೇರತಕ್ಕದ್ದು ಮತ್ತು ವಿನಿಯಮಗಳಿಂದ ಉಪಬಂಧಿಸಬಹುದಾದಂತೆ ಅದರ ಸಭೆಯ ಕಾರ್ಯಕಲಾಪಗಳಿಗೆ ಸಂಬಂಧಿಸಿದ ಅಂಥ ಪ್ರಕ್ರಿಯಾ ನಿಯಮಗಳನ್ನು ಪಾಲಿಸತಕ್ಕದ್ದು.

10. **ಆಯುಕ್ತರ ನೇಮಕಾತಿ** :- (1) ರಾಜ್ಯ ಸರ್ಕಾರವು, ಸರ್ಕಾರದ ಉಪ ಕಾರ್ಯದರ್ಶಿಯ ದರ್ಜೆಗೆ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರಾಧಿಕಾರದ ಆಯುಕ್ತರಾಗಿ ನೇಮಿಸತಕ್ಕದ್ದು.

(2) ಆಯುಕ್ತರು, ರಾಜ್ಯ ಸರ್ಕಾರವು ಕಾಲಕಾಲಕ್ಕೆ ನಿರ್ಧರಿಸಬಹುದಾದಂಥ ವೇತನ ಮತ್ತು ಇತರ ಭತ್ಯೆಗಳನ್ನು ಪಡೆಯತಕ್ಕದ್ದು.

(3) ರಾಜ್ಯ ಸರ್ಕಾರವು, ಕಾಲಕಾಲಕ್ಕೆ ತಾವು ಯುಕ್ತವೆಂದು ಭಾವಿಸುವಂಥ ಅವಧಿಗೆ ಆಯುಕ್ತರಿಗೆ ರಜೆಯನ್ನು ಮಂಜೂರು ಮಾಡಬಹುದು.

11. **ಆಯುಕ್ತರ ಅಧಿಕಾರಗಳು ಮತ್ತು ಕರ್ತವ್ಯಗಳು** :- (1) ಆಯುಕ್ತರು, ಪ್ರಾಧಿಕಾರದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಆಡಳಿತಕಾರಿಯಾಗಿರತಕ್ಕದ್ದು.

(2) ಆಯುಕ್ತರು, ಈ ಅಧಿನಿಯಮದ ಮೂಲಕ ಅಥವಾ ಅದರ ಅಡಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ತನಗೆ ಪ್ರದತ್ತವಾಗಿರುವಂಥ ಪ್ರಕಾರ್ಯಗಳನ್ನು ನೆರವೇರಿಸುವುದರ ಜೊತೆಗೆ, :-

(ಎ) ಪ್ರಾಧಿಕಾರದ ನಿರ್ಣಯಗಳನ್ನು ಕಾರ್ಯಗತಗೊಳಿಸತಕ್ಕದ್ದು;

(ಬಿ) ಪ್ರಾಧಿಕಾರದ ವ್ಯವಹಾರಗಳನ್ನು ನಿರ್ವಹಿಸಿಕೊಂಡು ಬರತಕ್ಕದ್ದು ಮತ್ತು ಪತ್ರ ವ್ಯವಹಾರಗಳನ್ನು ನಡೆಸಿಕೊಂಡು ಬರತಕ್ಕದ್ದು;

(ಸಿ) ಸರ್ಕಾರವು ನಿರ್ದೇಶಿಸಬಹುದಾದಂಥ ಯೋಜನೆಗಳನ್ನು ಮತ್ತು ಕಾಮಗಾರಿಗಳನ್ನು ನೆರವೇರಿಸಿ ಕಾರ್ಯಗತಗೊಳಿಸತಕ್ಕದ್ದು ಮತ್ತು ಆ ಬಗ್ಗೆ ಅವಶ್ಯವಾಗುವ ವೆಚ್ಚಗಳನ್ನು ಮಾಡತಕ್ಕದ್ದು;

(ಡಿ) ಪ್ರಾಧಿಕಾರದ ಯೋಜನೆಗಳ ಅನುಷ್ಠಾನಕ್ಕೆ ಜವಾಬ್ದಾರರಾಗಿರತಕ್ಕದ್ದು;

(ಇ) ಪ್ರಾಧಿಕಾರದ ಬ್ಯಾಂಕ್ ಖಾತೆಗಳನ್ನು ನಿರ್ವಹಿಸತಕ್ಕದ್ದು ಮತ್ತು ಮಂಡಲಿಯ ಲೆಕ್ಕಪತ್ರಗಳನ್ನು ಇಟ್ಟುಕೊಂಡು ಬರಲು ಜವಾಬ್ದಾರರಾಗಿರತಕ್ಕದ್ದು;

(ಎಫ್) ಪ್ರಾಧಿಕಾರದ ಅಧಿಕಾರಿಗಳು ಮತ್ತು ನೌಕರರ ಮೇಲೆ ಕಾರ್ಯನಿರ್ವಹಣೆ, ಆಡಳಿತ ವಿಷಯಗಳು ಮತ್ತು ಅಂಥ ಅಧಿಕಾರಿಗಳು ಮತ್ತು ನೌಕರರ ಸೇವಾ ವಿಷಯಗಳು ಹಾಗೂ ಅವರ ವೇತನ ಮತ್ತು ಭತ್ಯೆಗಳನ್ನು ವಿನಿಮಯಗೊಳಿಸುವ ಬಗ್ಗೆ ಮೇಲ್ವಿಚಾರಣೆ ಹಾಗೂ ನಿಯಂತ್ರಣವನ್ನು ಹೊಂದಿರತಕ್ಕದ್ದು;

(ಜಿ) ಪ್ರಾಧಿಕಾರದ ನಡವಳಿಕೆಗಳ ಸಂಕ್ಷಿಪ್ತ ಟಿಪ್ಪಣಿಗಳ ಮತ್ತು ಯಾವುದೇ ವಿವರಪತ್ರದ ಪ್ರತಿಯನ್ನು ಅಥವಾ ರಾಜ್ಯ ಸರ್ಕಾರವು ಕಾಲಕಾಲಕ್ಕೆ ಕೋರಬಹುದಾದ ಇತರ ಮಾಹಿತಿಯನ್ನು ರಾಜ್ಯ ಸರ್ಕಾರಕ್ಕೆ ಒದಗಿಸತಕ್ಕದ್ದು.

(ಹೆಚ್) ಈ ಅಧಿನಿಯಮದ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಇತರ ಕಾನೂನಿನ ಮೂಲಕ ಅಥವಾ ಅದರಡಿಯಲ್ಲಿ ತನಗೆ ಪ್ರದತ್ತವಾಗುವಂಥ ಇತರ ಕರ್ತವ್ಯಗಳನ್ನು ನಿರ್ವಹಿಸತಕ್ಕದ್ದು.

12. **ಪ್ರಾಧಿಕಾರದ ನೌಕರರು :-** (1) ನಿಯಮಿಸಬಹುದಾದಂಥ ನಿಯಮಗಳಿಗೊಳಪಟ್ಟು, ಪ್ರಾಧಿಕಾರವು, ಅಧಿನಿಯಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಅದು ಅವಶ್ಯಕವೆಂದು ಭಾವಿಸುವಂಥ ಸಂಖ್ಯೆಯ ನೌಕರರನ್ನು ನೇಮಕ ಮಾಡಿಕೊಳ್ಳಬಹುದು.

ಪರಂತು, ರಾಜ್ಯ ಸರ್ಕಾರವು ಭಾರತೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಸೇವೆಯಿಂದ ಅಥವಾ ಕರ್ನಾಟಕ ರಾಜ್ಯ ಲೆಕ್ಕಪತ್ರ ಸೇವೆಯಿಂದ "ಎ" ಗುಂಪಿನ ಕಿರಿಯ ವೇತನ ಶ್ರೇಣೀಯ ದರ್ಜೆಗಿಂತ ಕಡಿಮೆಯಲ್ಲದ ದರ್ಜೆಯ ಅಧಿಕಾರಿಯನ್ನು ಪ್ರತಿನಿಯೋಜನೆಯ ಮೇಲೆ ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯಾಗಿ ನೇಮಕ ಮಾಡತಕ್ಕದ್ದು.

(2) ಹಣಕಾಸು ಮತ್ತು ಲೆಕ್ಕಪತ್ರ ನಿಯಂತ್ರಣಾಧಿಕಾರಿಯು ಆಯುಕ್ತರಿಗೆ ವರದಿ ಸಲ್ಲಿಸತಕ್ಕದ್ದು ಮತ್ತು ಅವರು ಹಣಕಾಸು ನಿಯಮಗಳನ್ನು ಪಾಲಿಸಿಕೊಂಡು ಬರುವಂತೆ ಹಾಗೂ ಪ್ರಾಧಿಕಾರದ ಹಣಕಾಸು ವ್ಯವಹಾರಗಳ ಬಗ್ಗೆ ವಾಸ್ತವಿಕವಾದ ಹಾಗೂ

ನ್ಯಾಯವಾದ ಚಿತ್ರಣವನ್ನು ನೀಡುವ ರೀತಿಯಲ್ಲಿ ಲೆಕ್ಕಪತ್ರಗಳನ್ನು ಅಂದಂದಿನವರೆಗೆ ನಿರ್ವಹಿಸಿಕೊಂಡು ಬರುವಂತೆ ನೋಡಿಕೊಳ್ಳತಕ್ಕದ್ದು.

(3) (1) ನೇ ಉಪ-ಪ್ರಕರಣದಲ್ಲಿ ಉಲ್ಲೇಖಿಸಲಾದ ನೌಕರರ ವೇತನಗಳು, ಭತ್ಯೆಗಳು ಮತ್ತು ಇತರ ಸೇವಾ ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

(4) ಆಯುಕ್ತರು, ಪ್ರಾಧಿಕಾರದ ನೌಕರರಿಗೆ ಸಂಬಂಧಿಸಿದಂತೆ ನೇಮಕಾತಿ ಅಧಿಕಾರಿಯಾಗಿರತಕ್ಕದ್ದು ಮತ್ತು ಪ್ರಾಧಿಕಾರದ ಸಿಬ್ಬಂದಿಯ ಮೇಲೆ ಸಾಮಾನ್ಯ ನಿಯಂತ್ರಣ ಮತ್ತು ಮೇಲ್ವಿಚಾರಣೆಯನ್ನು ಹೊಂದಿರತಕ್ಕದ್ದು.

13. **ಪ್ರಾಧಿಕಾರದ ಅಡಿಯಲ್ಲಿನ ಸೇವೆಗೆ ಸಾಮಾನ್ಯ ಅನರ್ಹತೆಗಳು :-** ಯಾವ ವ್ಯಕ್ತಿಯೂ, ಪ್ರಾಧಿಕಾರದ ಅಧಿಕಾರಿ ಅಥವಾ ನೌಕರನಾಗಿ ಅಲ್ಲದೆ, ಖುದ್ದಾಗಿ ಅಥವಾ ತನ್ನ ಪಾಲುದಾರನ ಮೂಲಕ ಅಥವಾ ತನ್ನ ಏಜಂಟನ ಮೂಲಕ ಪ್ರಾಧಿಕಾರದ ಯಾವುದೇ ಷೇರನ್ನು ಹೊಂದಿದ್ದರೆ ಅಥವಾ ಪ್ರಾಧಿಕಾರವು ಮಾಡಿಕೊಂಡ ಇಲ್ಲವೇ ಅದರ ಪರವಾಗಿ ಮಾಡಿಕೊಂಡು ಯಾವುದೇ ಕರಾರಿನಲ್ಲಿ ಅಥವಾ ಪ್ರಾಧಿಕಾರದ ಅಡಿಯಲ್ಲಿನ ಯಾವುದೇ ನಿಯೋಜನೆಯಲ್ಲಿ ಹಿತಾಸಕ್ತಿಯನ್ನು ಹೊಂದಿದ್ದರೆ ಆತನು ಪ್ರಾಧಿಕಾರದ ಅಧಿಕಾರಿ ಅಥವಾ ಉದ್ಯೋಗಿಯಾಗತಕ್ಕದ್ದಲ್ಲ ಅಥವಾ ಆಗಿರತಕ್ಕದ್ದಲ್ಲ.

14. **ಪ್ರಾಧಿಕಾರದ ಸಭೆಗಳು :-** (1) ಆಯುಕ್ತರು ಅಧ್ಯಕ್ಷರ ಪೂರ್ವಾನುಮತಿಯೊಂದಿಗೆ ಮತ್ತು ಅಧ್ಯಕ್ಷರು ಯುಕ್ತವೆಂದು ಭಾವಿಸಬಹುದಾದಂಥ ಅವಧಿಗಳ ಅಂತರದಲ್ಲಿ ಮತ್ತು ಅಧ್ಯಕ್ಷರು ನಿರ್ಧರಿಸಬಹುದಾದಂಥ ಸ್ಥಳದಲ್ಲಿ ಪ್ರಾಧಿಕಾರದ ಸಭೆಗಳನ್ನು ನಡೆಸತಕ್ಕದ್ದು;

ಪರಂತು, ಪ್ರಾಧಿಕಾರವು ಒಂದು ಕ್ಯಾಲೆಂಡರ್ ವರ್ಷದಲ್ಲಿ ಕನಿಷ್ಠ ಪಕ್ಷ ಎರಡು ಬಾರಿಯಾದರೂ ಸಭೆ ಸೇರತಕ್ಕದ್ದು.

(2) ಪ್ರತಿಯೊಂದು ಸಭೆಯಲ್ಲೂ ಅಧ್ಯಕ್ಷರು ಅಧ್ಯಕ್ಷತೆ ವಹಿಸತಕ್ಕದ್ದು ಮತ್ತು ಯಾವುದೇ ಕಾರಣದಿಂದಾಗಿ ಅಧ್ಯಕ್ಷರಿಗೆ ಯಾವುದೇ ಸಭೆಗೆ ಹಾಜರಾಗಲು ಸಾಧ್ಯವಾಗದಿದ್ದರೆ, ಸಭೆಯಲ್ಲಿ ಹಾಜರಿರುವ ಸದಸ್ಯರು ತಮ್ಮ ಪೈಕಿ ಆಯ್ಕೆ ಮಾಡುವಂಥ ಯಾವೊಬ್ಬ ಇತರ ಸದಸ್ಯರು ಸಭೆಯ ಅಧ್ಯಕ್ಷತೆ ವಹಿಸತಕ್ಕದ್ದು.

(3) ಪ್ರಾಧಿಕಾರದ ತೀರ್ಮಾನಗಳನ್ನು, ಹಾಜರಿದ್ದು ಮತ ಹಾಕುವ ಸದಸ್ಯರ ಅವಿರೋಧ ಸಮ್ಮತಿಸೂಚಕ ಮತದ ಮೂಲಕ ಕೈಗೊಳ್ಳತಕ್ಕದ್ದು, ಪ್ರಾಧಿಕಾರದ ಮುಂದೆ ತೀರ್ಮಾನಕ್ಕಾಗಿ ಬಂದ, ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುವೇ ಭಿನ್ನಾಭಿಪ್ರಾಯಗಳಿದ್ದಲ್ಲಿ, ಆಯುಕ್ತರು ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಅಂಥ ವಿಷಯಗಳ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(4) ಆಯುಕ್ತರು ಪ್ರಾಧಿಕಾರದ ತೀರ್ಮಾನಗಳನ್ನು ಕಾರ್ಯಗತಗೊಳಿಸತಕ್ಕದ್ದು;

ಪರಂತು, ಪ್ರಾಧಿಕಾರದ ಯಾವುದೇ ನಿರ್ಣಯವು, ಈ ಅಧಿನಿಯಮದ ಅಥವಾ ಯಾವುದೇ ಇತರ ಕಾನೂನಿನ ಉಪಬಂಧವನ್ನು ಅಥವಾ ಈ ಅಧಿನಿಯಮದ ಅಥವಾ ಇತರ ಯಾವುದೇ ಕಾನೂನಿನ ಅಡಿಯಲ್ಲಿ ರಚಿಸಲಾದ ಅಥವಾ ಹೊರಡಿಸಿದ ಯಾವುದೇ ನಿಯಮ ಅಥವಾ ಅಧಿಸೂಚನೆ ಅಥವಾ ವಿನಿಯಮಗಳ ಉಪಬಂಧಗಳನ್ನು ಅಥವಾ ರಾಜ್ಯ ಸರ್ಕಾರವು ಹೊರಡಿಸಿದ ಯಾವುದೇ ಆದೇಶವನ್ನು ಉಲ್ಲಂಘಿಸುತ್ತದೆಯೆಂದು ಅಥವಾ ಪ್ರಾಧಿಕಾರದ ಹಿತಾಸಕ್ತಿಗೆ ಅಥವಾ ಕಾಗಿನೆಲೆ ಕ್ಷೇತ್ರದ ಅಭಿವೃದ್ಧಿ ಮತ್ತು ನಿರ್ವಹಣೆಗೆ ಧಕ್ಕೆ ಉಂಟುಮಾಡುತ್ತದೆ ಅಥವಾ ಹಾನಿಕಾರವಾಗುತ್ತದೆಂದು ಆಯುಕ್ತರು ಅಭಿಪ್ರಾಯ ಪಟ್ಟರೆ ಅವರು ನಿರ್ಣಯವನ್ನು ಅನುಮೋದಿಸಿದ ಹದಿನೈದು ದಿನಗಳ ಒಳಗಾಗಿ, ವಿಷಯದ ಬಗ್ಗೆ ಆದೇಶಗಳನ್ನು ಕೋರಿ ಅದನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು ಮತ್ತು ಪ್ರಾಧಿಕಾರದ ಮುಂದಿನ ಸಭೆಯಲ್ಲಿ ತಾನು ಕೈಗೊಂಡ ಕ್ರಮದ ಬಗ್ಗೆ ಪ್ರಾಧಿಕಾರಕ್ಕೆ ತಿಳಿಸತಕ್ಕದ್ದು ಮತ್ತು ಆಯುಕ್ತರು ಕಳುಹಿಸಿಕೊಟ್ಟ ಅಂಥ ವಿಷಯದ ಬಗ್ಗೆ ರಾಜ್ಯ ಸರ್ಕಾರವು ಆದೇಶವನ್ನು ನೀಡುವವರೆಗೆ, ಆಯುಕ್ತರು ಆ ನಿರ್ಣಯವನ್ನು ಜಾರಿಗೆ ತರಲು ಬದ್ಧರಲ್ಲ.

(5) ಪ್ರಾಧಿಕಾರವು, ವಿನಿಯಮಗಳ ಮೂಲಕ ತನ್ನ ಸಭೆಗಳ ಕಾರ್ಯಕಲಾಪಗಳಿಗೆ ಸಂಬಂಧಪಟ್ಟಂತೆ ಈ ಅಧಿನಿಯಮದ ಉಪಬಂಧಗಳಿಗೆ ಮತ್ತು ನಿಯಮಗಳಿಗೆ ಅಸಂಗತವಾಗಂತಹ ಕಾರ್ಯವಿಧಾನಗಳನ್ನು ಗೊತ್ತುಪಡಿಸಬಹುದು.

15. **ವ್ಯವಹರಣೆಗಳು ಸರಿಯಾದುದುವೆಂದು ಮತ್ತು ಊರ್ಜಿತವಾದವೆಂದು ಪೂರ್ವಭಾವನೆ ಮಾಡುವುದು** :- ಪ್ರಾಧಿಕಾರದ ಯಾವುದೇ ಕೃತ್ಯ ಅಥವಾ ವ್ಯವಹರಣೆಯು ಅನ್ಯಥಾ ಈ ಅಧಿನಿಯಮದ ಉಪಬಂಧಗಳಿಗೆ ಅನುಸಾರವಾಗಿದ್ದರೆ, ಅಧ್ಯಕ್ಷರಾಗಿ ಅಥವಾ ಸದಸ್ಯರಾಗಿ ಕಾರ್ಯನಿರ್ವಹಿಸುವ

ಯಾವೊಬ್ಬ ವ್ಯಕ್ತಿಯು ಅನರ್ಹತೆ ಅಥವಾ ನೇಮಕಾತಿಯಲ್ಲಿನ ನ್ಯೂನತೆಯು, ಅಂಥ ಕೃತ್ಯ ಅಥವಾ ವ್ಯವಹರಣೆಯನ್ನು ದೋಷಿತಗೊಳಿಸುತ್ತದೆಯೆಂದು ಭಾವಿಸತಕ್ಕದ್ದಲ್ಲ.

16. ಸುತ್ತೋಲೆಯು ಮೂಲಕ ಪ್ರಾಧಿಕಾರದ ತೀರ್ಮಾನಗಳನ್ನು ಸೂಚಿಸುವುದು :- (1) ಅಧ್ಯಕ್ಷರು, ಯಾವುದೇ ಪ್ರಕರಣವನ್ನು ಪ್ರಾಧಿಕಾರದ ಒಂದು ಸಭೆಯಲ್ಲಿ ಚರ್ಚೆಗೆ ತರುವುದಕ್ಕೆ ಬದಲಾಗಿ, ನಿಯಮಿಸಲಾದ ನಮೂನೆಯಲ್ಲಿ ಒಂದು ಟಿಪ್ಪಣಿಯನ್ನು ಪ್ರಾಧಿಕಾರದ ಸದಸ್ಯರ ನಡುವೆ ಆ ಬಗ್ಗೆ ಅವರ ಅಭಿಪ್ರಾಯ ಕೋರಿ ಪರಿಚಲನೆ ಮಾಡಿಸಲು ನಿರ್ದೇಶಿಸಬಹುದು. ಹಾಗೆ ಪರಿಚಲನೆ ಮಾಡಲಾದ ಟಿಪ್ಪಣಿಯಲ್ಲಿರುವ ಪ್ರಸ್ತಾವವನ್ನು ಎಲ್ಲ ಸದಸ್ಯರು ಅವಿರೋಧವಾಗಿ ಅನುಮೋದಿಸಿದರೆ ಅದನ್ನು ಪ್ರಾಧಿಕಾರದ ಸಮ್ಮತಿಸೂಚಕ ನಿರ್ಣಯವೆಂಬುದಾಗಿ ಭಾವಿಸತಕ್ಕದ್ದು ಮತ್ತು ತದನುಸಾರವಾಗಿ ಮುಂದಿನ ಕ್ರಮ ಕೈಗೊಳ್ಳತಕ್ಕದ್ದು. ಪ್ರಾಧಿಕಾರದ ತೀರ್ಮಾನಕ್ಕಾಗಿ ಪರಿಚಲನೆ ಮಾಡಲಾದ ಯಾವುದೇ ನಿರ್ದಿಷ್ಟ ವಿಷಯದ ಬಗ್ಗೆ ಯಾವುದೇ ಭಿನ್ನಾಭಿಪ್ರಾಯ ವ್ಯಕ್ತವಾದರೆ ಆಯುಕ್ತರು, ಆ ವಿಷಯವನ್ನು ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು ಮತ್ತು ಆ ಬಗ್ಗೆ ರಾಜ್ಯ ಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು.

(2) (1) ನೇ ಉಪ-ಪ್ರಕರಣದ ಅಡಿಯಲ್ಲಿ ಅಭಿಪ್ರಾಯಕ್ಕಾಗಿ ಪರಿಚಲನೆ ಮಾಡಲಾದ ಪ್ರಕರಣಗಳ ಸಂದರ್ಭಗಳಲ್ಲಿ ಯಾವೊಬ್ಬ ಸದಸ್ಯರು ಟಿಪ್ಪಣಿಯಲ್ಲಿ ನಿರ್ದಿಷ್ಟಪಡಿಸಿರುವ ದಿನಾಂಕದೊಳಗೆ ತಮ್ಮ ಅಭಿಪ್ರಾಯವನ್ನು ತಿಳಿಸಲು ತಪ್ಪಿದರೆ, ಅಂಥ ಸದಸ್ಯರು ಸುತ್ತೋಲೆಯಾಗಿ ಕಳುಹಿಸಲಾದ ಆ ಟಿಪ್ಪಣಿಯಲ್ಲಿ ಒಳಗೊಂಡ ಪ್ರಸ್ತಾವವನ್ನು ಒಪ್ಪಿಕೊಂಡಿದ್ದಾರೆಂದು ಭಾವಿಸತಕ್ಕದ್ದು.

(3) 14 ನೇ ಪ್ರಕರಣದ ಉಪಬಂಧಗಳು ಯಥೋಚಿತ ವ್ಯತ್ಯಾಸಗಳೊಂದಿಗೆ ಈ ಪ್ರಕರಣದ ಅಡಿಯಲ್ಲಿ ಪರಿಚಲನೆ ಮೂಲಕ ಕೈಗೊಂಡ ಪ್ರಾಧಿಕಾರದ ತೀರ್ಮಾನಗಳಿಗೆ ಅನ್ವಯವಾಗತಕ್ಕದ್ದು.

17. ಕೆಲವೊಂದು ತೀರ್ಮಾನಗಳನ್ನು ಕೈಗೊಳ್ಳಲು ಅಧ್ಯಕ್ಷರ ಅಧಿಕಾರ :- (1) ಯಾವೊಂದು ವಿಷಯವು, 14 ನೇ ಪ್ರಕರಣದ ಅಡಿಯಲ್ಲಿ ಪ್ರಾಧಿಕಾರದ ಸಭೆ ಕರೆಯಲು ಅಗತ್ಯಪಡಿಸುವಷ್ಟು ಅಥವಾ 16 ನೇ ಪ್ರಕರಣದ ಅಡಿಯಲ್ಲಿ ಪರಿಚಲನೆಯ ಮೂಲಕ ಪ್ರಾಧಿಕಾರವು ತೀರ್ಮಾನಿಸುವವರೆಗೂ ಕಾಯಲು ಸಾಧ್ಯವಾಗದಷ್ಟು ತುರ್ತು ಸ್ವರೂಪದ್ದಾಗಿದೆಯೆಂದು ಅಥವಾ ವಿಷಯವು ಗಹನವಾದುದಲ್ಲವೆಂದು ಅಧ್ಯಕ್ಷರು

ಅಭಿಪ್ರಾಯಪಟ್ಟಲ್ಲಿ, ತಾವು ಯುಕ್ತವೆಂದು ಭಾವಿಸುವಂಥ ಆದೇಶಗಳನ್ನು ಅವರು ನೀಡಬಹುದು ಮತ್ತು ಅದನ್ನು ಪ್ರಾಧಿಕಾರದ ತೀರ್ಮಾನಗಳ ರೀತಿಯಲ್ಲಿಯೇ ಅನುಷ್ಠಾನಗೊಳಿಸತಕ್ಕದ್ದು;

ಪರಂತು ಈ ಪ್ರಕರಣದ ಅಡಿಯಲ್ಲಿ ಅಧ್ಯಕ್ಷರು ಕೈಗೊಂಡ ಪ್ರತಿಯೊಂದು ತೀರ್ಮಾನವನ್ನು ಪ್ರಾಧಿಕಾರದ ಮುಂದೆ ಅವರ ಮುಂದಿನ ಸಭೆಯಲ್ಲಿ ಮಂಡಿಸತಕ್ಕದ್ದು.

ಅಧ್ಯಾಯ - III

ಕಾಗಿನೆಲೆಯ ಅಭಿವೃದ್ಧಿ ಮತ್ತು ನಿರ್ವಹಣೆ

18. **ಕಾಗಿನೆಲೆಯಲ್ಲಿಯ ಪರಂಪರೆಯ ತಾಣಗಳು** :- (1) ಯಾವುದೇ ಪದ್ಧತಿ, ಸಂಪ್ರದಾಯ, ರೂಢಿಯಲ್ಲಿ ಅಥವಾ ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನ ಅಡಿಯಲ್ಲಿ ಸೃಜಿಸಲಾದ ಮತ್ತು ಅಸ್ತಿತ್ವದಲ್ಲಿರುವ ನ್ಯಾಸದ ನಿಬಂಧನೆಗಳಲ್ಲಿ ಏನೇ ಇದ್ದರೂ, ಅನುಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ಕಾಗಿನೆಲೆಯಲ್ಲಿರುವ ಎಲ್ಲಾ ಅಥವಾ ಯಾವುವೇ ಪರಂಪರೆಯ ತಾಣಗಳ ಸಂಪೂರ್ಣ ನಿಯಂತ್ರಣ, ಒಡೆತನ, ಆಡಳಿತ ವ್ಯವಸ್ಥೆ ಮತ್ತು ಮೇಲ್ವಿಚಾರಣೆಯನ್ನು ಈಗಾಗಲೇ ರಾಜ್ಯಸರ್ಕಾರದಲ್ಲಿ ಅದು ನಿಹಿತವಾಗಿರದಿದ್ದರೆ ರಾಜ್ಯಸರ್ಕಾರವು ಭೂಸ್ವಾಧೀನ ಅಧಿನಿಯಮ, 1894 ಕ್ಕೆ (1894 ಕೇಂದ್ರ ಅಧಿನಿಯಮ 1) ಅನುಸಾರವಾಗಿ ಸ್ವಾಧೀನಪಡಿಸಿಕೊಳ್ಳತಕ್ಕದ್ದು ಮತ್ತು ಆ ತರುವಾಯ ರಾಜ್ಯಸರ್ಕಾರವು ಅಧಿಸೂಚಿಸಿದ ದಿನಾಂಕದಿಂದ ಅದು ಪ್ರಾಧಿಕಾರಕ್ಕೆ ವರ್ಗಾವಣೆಯಾಗತಕ್ಕದ್ದು :

ಪರಂತು, ಈ ಅಧಿನಿಯಮದ ಅಡಿಯಲ್ಲಿ ಸ್ವಾಧೀನಪಡಿಸಿಕೊಂಡ ಭೂಮಿಯನ್ನು ಭೂಸ್ವಾಧೀನ ಅಧಿನಿಯಮ, 1894 ರ ಅಡಿಯಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಸ್ವಾಧೀನಪಡಿಸಿಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

(2) ರಾಜ್ಯ ಸರ್ಕಾರವು, ತಾತ್ಕಾಲಿಕ ಉಪಬಂಧಗಳನ್ನು ಕಲ್ಪಿಸುವುದು ಅವಶ್ಯವೆಂದು ಭಾವಿಸಿದರೆ, ಅದು ಸಾಮಾನ್ಯ ಅಥವಾ ವಿಶೇಷ ಆದೇಶದ ಮೂಲಕ ತಾತ್ಕಾಲಿಕ ಉಪಬಂಧಗಳನ್ನು ರಚಿಸಬಹುದು.

19. **ಅನುಸೂಚಿಯ ತಿದ್ದುಪಡಿಗೆ ಅಧಿಕಾರ** :- ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ, ನಿಯಮಿಸಬಹುದಾದಂಥ ಕಾರ್ಯವಿಧಾನವನ್ನು ಅನುಸರಿಸಿದ ತರುವಾಯ ಅನುಸೂಚಿಯಲ್ಲಿ ಯಾವುದೇ ನಮೂದನ್ನು ಸೇರಿಸಿ ಅಥವಾ ಮಾರ್ಪಡಿಸಿ ಅದನ್ನು ತಿದ್ದುಪಡಿಮಾಡಬಹುದು.

20. ಅಭಿವೃದ್ಧಿ ಯೋಜನೆಯನ್ನು ಸಿದ್ಧಪಡಿಸುವುದು, ಅದರ ಅನುಮೋದನೆ ಹಾಗೂ ಅದನ್ನು ಕಾರ್ಯಗತಗೊಳಿಸುವುದು :- (1) ಪ್ರಾಧಿಕಾರವು, ಅದರ ರಚನೆಯಾದ ಮೇಲೆ, ಆದಷ್ಟು ಬೇಗನೆ ಕಾಗಿನೆಲೆಯನ್ನು ಅಂತರ್‌ರಾಷ್ಟ್ರೀಯ ಯಾತ್ರಾ ಸ್ಥಳವನ್ನಾಗಿ ಮತ್ತು ಸಾಂಸ್ಕೃತಿಕ ಹಾಗೂ ಪ್ರವಾಸಿ ಕೇಂದ್ರವನ್ನಾಗಿ ಮತ್ತು ಸಂತಕವಿ ಕನಕದಾಸರು, ಅವರ ಸಮಕಾಲೀನ ಮತ್ತು ಶಿಷ್ಯರ ಸಿದ್ಧಾಂತ ಚಿಂತನೆಗಳ ವೈಚಾರಿಕ ಹಾಗೂ ಪ್ರಚಾರದ ಕೇಂದ್ರವನ್ನಾಗಿ ಮಾಡಿ ಅಭಿವೃದ್ಧಿಗೊಳಿಸಲು ಯೋಜನೆಯನ್ನು ಸಿದ್ಧಪಡಿಸತಕ್ಕದ್ದು. ಅಭಿವೃದ್ಧಿ ಯೋಜನೆಯು ಈ ಮುಂದಿನವುಗಳನ್ನು ಒಳಗೊಂಡಿರಬಹುದು, ಎಂದರೆ :-

(ಎ) ಯಾವುದೇ ಪರಂಪರೆ ತಾಣದ ಅಥವಾ ಕಟ್ಟಡಗಳ ಸಂರಕ್ಷಣೆ ಮತ್ತು ಅದರ ಜೀರ್ಣೋದ್ಧಾರಕ್ಕಾಗಿ ಕಾರ್ಯಕ್ರಮಗಳು;

(ಬಿ) ಪ್ರಾಧಿಕಾರದ ಅಭಿಪ್ರಾಯದಲ್ಲಿ ಅಭಿವೃದ್ಧಿ ಯೋಜನೆಯನ್ನು ಕಾರ್ಯಗತಗೊಳಿಸಲು ಅವಶ್ಯವಾದ ಭೂಮಿಯನ್ನು, ಭೂಸ್ವಾಧೀನ ಅಥವಾ ಖರೀದಿ ಅಥವಾ ವಿನಿಮಯದ ಮೂಲಕ ಅಥವಾ ಅನ್ಯಥಾ ಸ್ವಾಧೀನಪಡಿಸಿಕೊಳ್ಳುವುದಕ್ಕಾಗಿ ಪ್ರಸ್ತಾವಗಳು;

(ಸಿ) ಸಾರ್ವಜನಿಕ ಉದ್ಯಾನವನಗಳು, ಫಲಪುಷ್ಪ ತೋಟಗಳು ಅಥವಾ ವ್ಯೃಗಾಲಯಗಳು, ಕಾರಂಜಿಗಳು, ಕೃತಕ ಜಲಪಾತಗಳು, ವನ್ಯವ್ಯೃಗ ಉದ್ಯಾನವನಗಳು, ದೋಣಿ ವಿಹಾರ ಅಥವಾ ಇತರ ಜಲ ಕ್ರೀಡಾ ಸೌಲಭ್ಯವಿರುವ ಸರೋವರಗಳನ್ನು ಅಥವಾ ಇಂಥವೇ ಪ್ರವಾಸಿಗಳಿಗೆ ಆಕರ್ಷಣೆಯನ್ನುಂಟು ಮಾಡುವಂಥ ಇತರ ಕೇಂದ್ರಗಳನ್ನು ನಿರ್ಮಿಸುವುದು;

(ಡಿ) ವಿವಿಧ ವರ್ಗದ ಪ್ರವಾಸಿಗರ ಅವಶ್ಯಕತೆ ಪೂರೈಸಲು ಛತ್ರಗಳು, ವಸತಿ-ಗೃಹಗಳು, ಕುಟೀರಗಳು, ಹೋಟೆಲುಗಳು, ರೆಸ್ಟೋರಾಗಳು ಮತ್ತು ಭೋಜನಾಲಯಗಳನ್ನು ನಿರ್ಮಿಸುವುದು;

(ಇ) ಅವಶ್ಯಕ ಸಾಲು ಅಂಗಡಿಗಳನ್ನು ಅಥವಾ ವಾಣಿಜ್ಯ-ಸಂಕೀರ್ಣಗಳನ್ನು ನಿರ್ಮಿಸುವುದು;

(ಎಫ್) ಅನುಭವ ಮಂಟಪದ ಮಾದರಿಯಲ್ಲಿ ಒಂದು ಸಭಾಂಗಣವನ್ನು ನಿರ್ಮಿಸುವುದು;

(ಜಿ) ಆಯಕಟ್ಟಿನ ಸ್ಥಳಗಳಲ್ಲಿ ಪ್ರಾರ್ಥನಾ ಮಂದಿರಗಳನ್ನು ಮತ್ತು ಧ್ಯಾನ ಮಂದಿರಗಳನ್ನು ನಿರ್ಮಿಸುವುದು;

(ಹೆಚ್) 2 ನೇ ಪ್ರಕರಣದಲ್ಲಿ ಪರಿಭಾಷಿಸಲಾದಂತೆ ಸೌಕರ್ಯಗಳನ್ನು ಕಲ್ಪಿಸುವುದು;

(ಐ) ಕಟ್ಟಡಗಳ ನಿರ್ಮಾಣ ಹಾಗೂ ಪುನರ್-ನಿರ್ಮಾಣವೂ ಸೇರಿದಂತೆ ಎಲ್ಲಾ ಅಥವಾ ಯಾವುದೇ ಭೂಮಿಯ ವಿನ್ಯಾಸ ಮತ್ತು ಮರು ವಿನ್ಯಾಸ;

(ಜೆ) ಚರಂಡಿ ವ್ಯವಸ್ಥೆ, ವಿದ್ಯುಚ್ಛಕ್ತಿ ಮತ್ತು ನೀರು ಪೂರೈಕೆ ಮತ್ತು ನೈರ್ಮಲ್ಯ ವ್ಯವಸ್ಥೆಯನ್ನು ಒದಗಿಸುವುದು;

(ಕೆ) ಪ್ರಾಧಿಕಾರವು, ಸಾಧಾರಣವಾಗಿ ತನ್ನ ಯೋಜನಾ ಕಾರ್ಯಕ್ಕೆ ಅನುಕೂಲವಾಗುವಂತೆ ಮತ್ತು ಮುಖ್ಯವಾಗಿ ನೀರು ಉತ್ತಮವಾಗಿ ಹರಿಯುವ ವ್ಯವಸ್ಥೆಯನ್ನು ಒದಗಿಸಲು, ಯಾವುದೇ ಭೂಮಿಯನ್ನು ಎತ್ತರಿಸುವುದು ಸೂಕ್ತವೆಂದು ಭಾವಿಸಿದರೆ ಅಂಥ ಭೂಮಿಯನ್ನು ಎತ್ತರಿಸುವುದು;

(ಎಲ್) ಕಾಗಿನೆಲೆಯಲ್ಲಿ ಅಥವಾ ಅದಕ್ಕೆ ಹೊಂದಿಕೊಂಡಂತಿರುವ ಪ್ರದೇಶದಲ್ಲಿ ಉತ್ತಮ ಗಾಳಿ-ಬೆಳಕು ದೊರಕುವಂತೆ ಖಾಲಿ ಜಾಗಗಳನ್ನು ಬಿಡುವುದು;

(ಎಂ) ಜನರ ವಾಸಕ್ಕೆ ಯೋಗ್ಯವಲ್ಲದ ಹಾಗೂ ಅಭಿವೃದ್ಧಿ ಯೋಜನೆಗೆ ತಕ್ಕವಲ್ಲದ ಎಲ್ಲ ಕಟ್ಟಡಗಳನ್ನು ಕೆಡುವುವುದು;

(ಎನ್) ಅಡಚಣೆಯನ್ನುಂಟುಮಾಡುವ ಕಟ್ಟಡಗಳನ್ನು ಅಥವಾ ಕಟ್ಟಡಗಳ ಭಾಗಗಳನ್ನು ಕೆಡುವುದುದು;

(ಒ) ಕಟ್ಟಡಗಳ ನಿರ್ಮಾಣ ಮತ್ತು ಪುನರ್‌ನಿರ್ಮಾಣ, ಅವುಗಳನ್ನು ನಿರ್ವಹಿಸುವುದು ಮತ್ತು ಸಂರಕ್ಷಿಸುವುದು;

(ಪಿ) 26 ನೇ ಪ್ರಕರಣದಲ್ಲಿನ ಉಪಬಂಧಗಳಿಗೆ ಒಳಪಟ್ಟು, ಯೋಜನೆಯಲ್ಲಿ ಸೇರಿರುವ ಯಾವುದೇ ಸ್ವತ್ತನ್ನು ಮಾರಾಟ ಮಾಡುವುದು, ಬಾಡಿಗೆಗೆ ಕೊಡುವುದು ಅಥವಾ ವಿನಿಮಯ ಮಾಡಿಕೊಳ್ಳುವುದು;

(ಕ್ಯೂ) ಪ್ರಾಧಿಕಾರದ ನೌಕರರಿಗೆ ವಸತಿ ಸೌಲಭ್ಯವನ್ನು ಒದಗಿಸುವುದು;

(ಆರ್) ಸಂಪರ್ಕ ಮತ್ತು ಸಾರಿಗೆ ಸೌಲಭ್ಯವನ್ನು ಒದಗಿಸುವುದು;

(ಎಸ್) ಅಭಿವೃದ್ಧಿ ಯೋಜನೆಯ ಭೌಗೋಳಿಕ ಪ್ರದೇಶದಲ್ಲಿ ಈಗಿರುವ ಮತ್ತು ಮುಂದುವರಿಸಲು ಅನುಮತಿಸಬಹುದಾದಂಥ ಮತೀಯ ಸಂಸ್ಥೆಗಳೊಂದಿಗೆ, ಅವು ಅಭಿವೃದ್ಧಿ ಯೋಜನೆಯು ಪರಿಕಲ್ಪನೆಗೆ ಸರಿಹೊಂದುತ್ತಿರುವವರೆಗೆ ಹೊಂದಾಣಿಕೆಗಳು ಮತ್ತು ಒಪ್ಪಂದಗಳನ್ನು ಮಾಡಿಕೊಳ್ಳುವುದು;

(ಟಿ) ಕಾಗಿನೆಲೆಯನ್ನು ಸಾಂಸ್ಕೃತಿಕ ಕೇಂದ್ರವನ್ನಾಗಿ, ಯಾತ್ರಾಸ್ಥಳವನ್ನಾಗಿ ಮತ್ತು ಅಂತರ್‌ರಾಷ್ಟ್ರೀಯ ಪ್ರವಾಸಿ ಕೇಂದ್ರವನ್ನಾಗಿ ಮಾಡುವುದಕ್ಕಾಗಿ ಮತ್ತು ಸಂತ ಕವಿ ಕನಕದಾಸರ ಸಿದ್ಧಾಂತ ಚಿಂತನೆಗಳನ್ನು ಮಾತ್ರವಲ್ಲದೆ, ಅವರ ಸಮಕಾಲೀನ ಹಾಗೂ ಶಿಷ್ಯರ ಸಿದ್ಧಾಂತ ಚಿಂತನಗಳ ವಿಚಾರ ಮಂಥನ ಮಾಡುವುದಕ್ಕಾಗಿ ಮತ್ತು ಸಂತ ಕವಿ ಕನಕದಾಸರ, ಅವರ ಸಮಕಾಲೀನರ ಮತ್ತು ಶಿಷ್ಯರ ಜೀವನ ಮತ್ತು ಬೋಧನೆಗಳಿಗೆ ಸಂಬಂಧಪಟ್ಟ ಇತರ ಮಹತ್ವದ ಸ್ಥಳಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ ಹಾಗೂ ದಾಸ ಸಾಹಿತ್ಯದ ಅಧ್ಯಯನಕ್ಕಾಗಿ ಶೈಕ್ಷಣಿಕ ಮತ್ತು ಸಂಶೋಧನಾ ಕೇಂದ್ರದ ಮತ್ತು ಆ ವಿಷಯಕ್ಕೆ ಸಂಬಂಧಪಟ್ಟಂತೆ ವಿಶಿಷ್ಟ ಗ್ರಂಥಾಲಯದ ಸ್ಥಾಪನೆಗಾಗಿ, ಯುಕ್ತ ಹಾಗೂ ಅನುಷಂಗಿಕವೆಂದು ಪ್ರಾಧಿಕಾರವು ಅಭಿಪ್ರಾಯಪಡುವಂಥ ಇತರ ಯಾವುವೇ ವಿಷಯಗಳು;

(ಯು) ಪ್ರಾಧಿಕಾರದ ಪ್ರಾದೇಶಿಕ ಪರಿಮಿತಿಯೊಳಗಿನ ಐತಿಹಾಸಿಕ ಮತ್ತು ಪರಂಪರೆಯ ಯಾವುದೇ ಸ್ಥಳದಲ್ಲಿ ಮಣ್ಣಿನಲ್ಲಿ ಹೂತು ಹೋಗಿವೆ ಎಂದು ನಂಬಲಾದ ಪ್ರಾಚೀನ ಸ್ಮಾರಕಗಳೂ ಯಾವುದಾದರೂ ಇದ್ದರೆ ಅವನ್ನು ಭೂಮಿಯಿಂದ ಹೊರಗೆ ತೆಗೆಯುವುದಕ್ಕಾಗಿ ಉತ್ಖನನ ಮತ್ತು ಪುರಾತತ್ವ ಶಾಸ್ತ್ರ ಸ್ವರೂಪದ ಅನ್ವೇಷಣೆ:

ಪರಂತು, ಈ ಖಂಡದಲ್ಲಿ ಒಳಗೊಂಡಿರುವುದು ಯಾವುದೂ ಪ್ರಾಚೀನ ಸ್ಮಾರಕಗಳು ಮತ್ತು ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1958 ರ (1958ರ ಕೇಂದ್ರ ಅಧಿನಿಯಮ, 24) ಉಪಬಂಧಗಳನ್ನು ಅಧ್ಯಾರೋಹಿಸುತ್ತದೆಂದು ಭಾವಿಸತಕ್ಕದ್ದಲ್ಲ.

(2) (1) ನೇ ಉಪ ಪ್ರಕರಣದಡಿ ಸಿದ್ಧಪಡಿಸಲಾದ ಅಭಿವೃದ್ಧಿ ಯೋಜನೆಯನ್ನು ಆಯುಕ್ತರು ಅನುಮೋದನೆಗಾಗಿ ರಾಜ್ಯ ಸರ್ಕಾರಕ್ಕೆ ಕಳುಹಿಸಿಕೊಡತಕ್ಕದ್ದು. ರಾಜ್ಯ ಸರ್ಕಾರವು, ಮಾರ್ಪಾಟುಗಳ ಸಹಿತವಾಗಿ ಅಥವಾ ಯಾವುದೇ ಮಾರ್ಪಾಟುಗಳಿಲ್ಲದೆ ಯೋಜನೆಯನ್ನು ಅನುಮೋದಿಸಬಹುದು.

(3) (2) ನೇ ಉಪ-ಪ್ರಕರಣದಡಿ ಅಭಿವೃದ್ಧಿ ಯೋಜನೆಯನ್ನು ಅನುಮೋದಿಸಿದ ತರುವಾಯ, ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸ್ಸುಗಳ ಮೇಲೆ ಕಾಲ ಕಾಲಕ್ಕೆ ತಾನು ಅವಶ್ಯವೆಂದು ಭಾವಿಸುವಂಥ ಮಾರ್ಪಾಟುಗಳನ್ನು ಯೋಜನೆಯಲ್ಲಿ ಮಾಡಬಹುದು.

(4) ಈ ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ಅಭಿವೃದ್ಧಿ ಯೋಜನೆಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ಕಾಮಗಾರಿಗಳನ್ನು ಕೈಗೊಳ್ಳುವ ಮತ್ತು ವೆಚ್ಚವನ್ನು ಮಾಡುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

21. **ಕಾಗಿನೆಲೆಯ ನಿರ್ವಹಣೆ** :- ರಾಜ್ಯ ಸರ್ಕಾರವು ಪ್ರಾಧಿಕಾರದ ಶಿಫಾರಸ್ಸಿನ ಮೇಲೆ ಅಥವಾ ಅನ್ಯಥಾ, ಕಾಗಿನೆಲೆಯ ನಿರ್ವಹಣೆಗಾಗಿ ನಿಯಮಗಳ ಮೂಲಕ ಉಪಬಂಧಗಳನ್ನು ರಚಿಸತಕ್ಕದ್ದು, ಈ ಉಪಬಂಧಗಳಲ್ಲಿ ಅದರ ಪರಂಪರೆ ತಾಣಗಳೂ ಸೇರಿದಂತೆ ಪ್ರಾಧಿಕಾರದ ಸ್ವತ್ತನ್ನು ಬಳಸಿಕೊಳ್ಳಬಹುದಾದ ರೀತಿ, ಗ್ರಾಮಕ್ಕೆ ಬರುವ ಭಕ್ತರು, ಯಾತ್ರಿಕರು, ಪ್ರವಾಸಿಗರು ಮತ್ತು ಇತರ ಸಂದರ್ಶಕರು ಬಳಸಿಕೊಳ್ಳಬಹುದಾದ ವಿವಿಧ ಸೌಲಭ್ಯಗಳಿಗಾಗಿ ಅವರಿಂದ ವಸೂಲು ಮಾಡಬಹುದಾದ ದರಗಳು, ಶುಲ್ಕಗಳು ಅಥವಾ ಇತರ ವೆಚ್ಚಗಳು ಮತ್ತು ಪರಂಪರೆ ತಾಣಗಳ ಆವರಣಕ್ಕೆ ಸಂಬಂಧಿಸಿದ ಯುಕ್ತವಾದಂಥ ಇತರ ವಿಷಯಗಳು, ಭೂ ಕಂದಾಯದ ಬಾಕಿ ಎಂಬಂತೆ ಬಾಡಿಗೆ ಅಥವಾ ನಷ್ಟಪರಿಹಾರವನ್ನು ವಸೂಲು ಮಾಡುವ ಅಧಿಕಾರ ಮುಂತಾದ ಇತರ ವಿಷಯಗಳನ್ನು ಒಳಗೊಂಡಿರತಕ್ಕದ್ದು.

22. **ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರವು ಕಾಗಿನೆಲೆಗೆ ಒಂದು ಅಭಿವೃದ್ಧಿ ಪ್ರಾಧಿಕಾರ ಮತ್ತು ಗ್ರಾಮಪಂಚಾಯತಿ ಆಗಿರುವುದು** :- ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993 ರಲ್ಲಿ (1993 ರ ಕರ್ನಾಟಕ ಅಧಿನಿಯಮ ಸಂಖ್ಯೆ 14) ಏನೇ ಇದ್ದರೂ ಪ್ರಾಧಿಕಾರದ ರಚನೆಯಾದ ದಿನಾಂಕದಂದು ಮತ್ತು ದಿನಾಂಕದಿಂದ, ಅದು ಕಾಗಿನೆಲೆಯ ಅಭಿವೃದ್ಧಿ ಪ್ರಾಧಿಕಾರ ಮತ್ತು ಗ್ರಾಮ ಪಂಚಾಯತಿ ಆಗಿರತಕ್ಕದ್ದು ಮತ್ತು ಪ್ರಾಧಿಕಾರವು, ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993 ರ (1993 ರ ಕರ್ನಾಟಕ ಅಧಿನಿಯಮ 14) 4 ನೇ ಪ್ರಕರಣದ ಅಡಿಯಲ್ಲಿ ಸದರಿ ಪ್ರಾಧಿಕಾರವು ರಚಿತವಾಗಿದ್ದರೆ ಹೇಗೋ ಹಾಗೆ ಗ್ರಾಮ ಪಂಚಾಯತಿಯ ಎಲ್ಲ ಅಧಿಕಾರಗಳನ್ನು ಚಲಾಯಿಸತಕ್ಕದ್ದು ಮತ್ತು ಪ್ರಕಾರ್ಯಗಳನ್ನು ನೇರವೇರಿಸತಕ್ಕದ್ದು.

23. **ಪ್ರಾಧಿಕಾರದ ಅನುಮತಿ ಇಲ್ಲದೆ ಯಾವುದೇ ಇತರ ಪ್ರಾಧಿಕಾರ ಅಥವಾ ವ್ಯಕ್ತಿಯು ಅಭಿವೃದ್ಧಿಯನ್ನು ಕೈಗೊಳ್ಳಕೂಡದು** :- (1) ತತ್ಕಾಲದಲ್ಲಿ ಜಾರಿಯಲ್ಲಿರುವ ಯಾವುದೇ ಕಾನೂನಿನಲ್ಲಿ ಏನೇ ಇದ್ದರೂ, ಪ್ರಾಧಿಕಾರದ ಪೂರ್ವಾನುಮತಿಯೊಂದಿಗೆ ಹೊರತು, ಕಾಗಿನೆಲೆಯೊಳಗೆ, ಪ್ರಾಧಿಕಾರವು ಕಾಲಕಾಲಕ್ಕೆ ಅಧಿಸೂಚನೆಯ ಮೂಲಕ ಸರ್ಕಾರಿ ರಾಜ್ಯಪತ್ರದಲ್ಲಿ ಪ್ರಕಟಣೆಯ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ಮಾದರಿಗಳ ಯಾವುದೇ ಅಭಿವೃದ್ಧಿಯನ್ನು ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಕೈಗೊಳ್ಳತಕ್ಕದ್ದಲ್ಲ.

(2) ಕಾಗಿನೆಲೆಯೊಳಗೆ, (1) ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಲಾದ ಯಾವುದೇ ಅಭಿವೃದ್ಧಿ ಕೈಗೊಳ್ಳಲು, ಅಂಥ ಅಭಿವೃದ್ಧಿಗೆ ಪ್ರಾಧಿಕಾರವು ಅನುಮತಿಯನ್ನು ನೀಡಿದ್ದ ಹೊರತು, ಯಾವುದೇ ಸ್ಥಳೀಯ ಪ್ರಾಧಿಕಾರವು ಅನುಮತಿಯನ್ನು ನೀಡತಕ್ಕದ್ದಲ್ಲ.

(3) (1) ನೇ ಉಪಪ್ರಕರಣದಲ್ಲಿ ಉಲ್ಲೇಖಿಸಲಾದ ಅಭಿವೃದ್ಧಿಯನ್ನು ಕೈಗೊಳ್ಳಲು ಇಚ್ಛಿಸುವ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು ಅಂಥ ಅಭಿವೃದ್ಧಿಯನ್ನು ಕೈಗೊಳ್ಳಲು ಅನುಮತಿಯನ್ನು ಕೋರಿ ಲಿಖಿತ ಅರ್ಜಿಯನ್ನು ಪ್ರಾಧಿಕಾರಕ್ಕೆ ಸಲ್ಲಿಸತಕ್ಕದ್ದು.

(4) ಪ್ರಾಧಿಕಾರವು, ತಾನು ಅವಶ್ಯವೆಂದು ಭಾವಿಸುವಂಥ ವಿಚಾರಣೆಯನ್ನು ನಡೆಸಿದ ತರುವಾಯ, ತಾನು ವಿಧಿಸುವುದು ಸೂಕ್ತವೆಂದು ಭಾವಿಸಬಹುದಾದಂಥ ಷರತ್ತುಗಳೊಡನೆ ಅಥವಾ ಷರತ್ತುಗಳಿಲ್ಲದೆ ಅಂಥ ಅನುಮತಿಯನ್ನು ನೀಡಬಹುದು ಅಥವಾ ಅಂಥ ಅನುಮತಿಯನ್ನು ನೀಡಲು ನಿರಾಕರಿಸಬಹುದು.

(5) (4) ನೇ ಉಪ ಪ್ರಕರಣದ ಅಡಿಯಲ್ಲಿಯ ಪ್ರಾಧಿಕಾರದ ತೀರ್ಮಾನದಿಂದ ಬಾಧಿತವಾದ ಯಾವುದೇ ಪ್ರಾಧಿಕಾರ ಅಥವಾ ವ್ಯಕ್ತಿಯು, ತೀರ್ಮಾನದ ದಿನಾಂಕದಿಂದ ಮೂವತ್ತು ದಿನಗಳೊಳಗೆ ಅಂಥ ತೀರ್ಮಾನದ ವಿರುದ್ಧ ರಾಜ್ಯ ಸರ್ಕಾರಕ್ಕೆ ಅಪೀಲನ್ನು ಸಲ್ಲಿಸಬಹುದು ಮತ್ತು ಆ ಬಗ್ಗೆ ರಾಜ್ಯಸರ್ಕಾರದ ತೀರ್ಮಾನವು ಅಂತಿಮವಾಗಿರತಕ್ಕದ್ದು:

ಪರಂತು, ಅಂಥ ಅಪೀಲನ್ನು ಸಲ್ಲಿಸುವ ಬಾಧಿತ ಪ್ರಾಧಿಕಾರವು, ಕೇಂದ್ರ ಸರ್ಕಾರದ ಆಡಳಿತ ನಿಯಂತ್ರಣದಲ್ಲಿದ್ದರೆ, ರಾಜ್ಯ ಸರ್ಕಾರವು ಕೇಂದ್ರ ಸರ್ಕಾರದೊಡನೆ ಸಮಾಲೋಚನೆ ನಡೆಸಿದ ತರುವಾಯ ಅಪೀಲನ್ನು ತೀರ್ಮಾನಿಸತಕ್ಕದ್ದು.

(6) ಯಾವೊಬ್ಬ ವ್ಯಕ್ತಿ ಅಥವಾ ಪ್ರಾಧಿಕಾರವು (5) ನೇ ಉಪ ಪ್ರಕರಣದಲ್ಲಿ ಮಾರ್ಪಡಿಸಲಾದಂತೆ (4) ನೇ ಉಪ ಪ್ರಕರಣದ ಅಡಿಯಲ್ಲಿ ನೀಡಿದ ತೀರ್ಮಾನಕ್ಕೆ ವಿರುದ್ಧವಾಗಿ ಯಾವುದೇ ಕಾರ್ಯವನ್ನು ಕೈಗೊಂಡಿದ್ದರೆ, ಅಂಥ ತೀರ್ಮಾನಕ್ಕೆ ವಿರುದ್ಧವಾಗಿ ಕೈಗೊಂಡ ಯಾವುದೇ ಅಭಿವೃದ್ಧಿಯನ್ನು ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ಅಧಿಕಾರವನ್ನು ಮತ್ತು ಅಂಥ ಕೆಡಹುವ, ನಾಶಪಡಿಸುವ ಅಥವಾ ತೆಗೆದುಹಾಕುವ ವೆಚ್ಚವನ್ನು ಸಂಬಂಧಪಟ್ಟ ವ್ಯಕ್ತಿಯಿಂದ ಅಥವಾ ಪ್ರಾಧಿಕಾರದಿಂದ ವಸೂಲ ಮಾಡುವ ಅಧಿಕಾರವನ್ನು ಪ್ರಾಧಿಕಾರವು ಹೊಂದಿರತಕ್ಕದ್ದು.

24. **ಪ್ರವೇಶಕ್ಕೆ ಅಧಿಕಾರ** :- ಪ್ರಾಧಿಕಾರವು, ಯಾವುದೇ ಭೂಮಿ ಅಥವಾ ಕಟ್ಟಡವನ್ನು, ಕೆಲಸಗಾರರ ಸಹಾಯಪಡೆದು ಅಥವಾ ಸಹಾಯ ಪಡೆಯದೆ,

(ಎ) ಅಂಥ ಭೂಮಿ ಅಥವಾ ಕಟ್ಟಡಕ್ಕಾಗಿ ಯಾವುದೇ ವಿಚಾರಣೆ, ತಪಾಸಣೆ, ಅಳತೆ ಅಥವಾ ಸಮೀಕ್ಷೆ ಅಥವಾ ಮಟ್ಟ ತೆಗೆದುಕೊಳ್ಳುವ;

(ಬಿ) ನಿರ್ಮಾಣದಲ್ಲಿರುವ ಕಾಮಗಾರಿಗಳನ್ನು ಪರೀಕ್ಷಿಸುವ ಮತ್ತು ಒಳಚರಂಡಿ ಹಾಗೂ ಚರಂಡಿಗಳ ಮಾರ್ಗವನ್ನು ಖಚಿತಪಡಿಸಿಕೊಳ್ಳುವ;

(ಸಿ) ಕೆಳ ಮಣ್ಣಿನಲ್ಲಿ ತೋಡುವ ಅಥವಾ ಕೊರೆಯುವ;

(ಡಿ) ಕಾಮಗಾರಿಯ ಗಡಿಗಳನ್ನು ಮತ್ತು ಉದ್ದೇಶಿತ ರೇಖೆಗಳನ್ನು ಹಾಕುವ;

(ಇ) ಗುರುತುಗಳನ್ನು ಇರಿಸುವ ಹಾಗೂ ಕಂದಕಗಳನ್ನು ತೋಡುವ ಮೂಲಕ ಅಂಥ ಮಟ್ಟಗಳನ್ನು, ಗಡಿಗಳನ್ನು ಮತ್ತು ರೇಖೆಗಳನ್ನು ಹಾಕುವ;

(ಎಫ್) ಯಾವುದೇ ಯೋಜನೆಯನ್ನು ಉಲ್ಲಂಘಿಸಿ ಅಥವಾ ಯಾವ ಷರತ್ತುಗಳಿಗೆ ಒಳಪಟ್ಟು ಅಂಥ ಅನುಮತಿಯನ್ನು ನೀಡಲಾಗಿತ್ತೋ ಆ ಷರತ್ತುಗಳನ್ನು ಉಲ್ಲಂಘಿಸಿ ಯಾವುದೇ ಭೂಮಿಯನ್ನು ಅಭಿವೃದ್ಧಿಪಡಿಸಲಾಗುತ್ತಿದೆಯೇ ಅಥವಾ ಅಭಿವೃದ್ಧಿಪಡಿಸಲಾಗಿದೆಯೇ ಎಂಬುದನ್ನು ಖಚಿತಪಡಿಸಿಕೊಳ್ಳುವ; ಅಥವಾ

(ಜಿ) ಈ ಅಧಿನಿಯಮದ ದಕ್ಷ ಆಡಳಿತಕ್ಕಾಗಿ ಅವಶ್ಯಕವಾದ ಇತರ ಯಾವುದೇ ಕಾರ್ಯಗಳನ್ನು ಮಾಡುವ, ಉದ್ದೇಶಕ್ಕಾಗಿ ಪ್ರವೇಶಿಸಲು ಯಾವೊಬ್ಬ ವ್ಯಕ್ತಿಯನ್ನು ಪ್ರಾಧಿಕರಿಸಬಹುದು;

ಪರಂತು,

(i) ಸೂರ್ಯೋದಯ ಮತ್ತು ಸೂರ್ಯಾಸ್ತದೊಳಗಿನ ಅವಧಿಯ ಹೊರತಾಗಿ ಮತ್ತು ಅಧಿಭೋಗದಾರನಿಗೆ ಅಥವಾ ಅಲ್ಲಿ ಯಾವೊಬ್ಬ ಅಧಿಭೋಗದಾರನು ಇರದಿದ್ದರೆ ಭೂಮಿಯ ಅಥವಾ ಕಟ್ಟಡದ ಮಾಲೀಕನಿಗೆ ಸೂಕ್ತ ನೋಟೀಸ್‌ನ್ನು ಕೊಡದೆ ಹಾಗೆ ಪ್ರವೇಶಿಸತಕ್ಕದ್ದಲ್ಲ;

(ii) ಮಹಿಳೆಯರು ಅಥವಾ ಮಕ್ಕಳು, ಯಾರಾದರೂ ಇದ್ದರೆ ಅವರು, ಅಂಥ ಭೂಮಿ ಅಥವಾ ಕಟ್ಟಡದಿಂದ ಹೊರ ಹೋಗಲು ಸಾಕಷ್ಟು ಅವಕಾಶವನ್ನು ಪ್ರತಿ ಸಂದರ್ಭದಲ್ಲಿಯೂ ನೀಡತಕ್ಕದ್ದು;

(iii) ಪ್ರವೇಶ ಮಾಡಿದ ಉದ್ದೇಶದ ಜರೂರು ಅವಶ್ಯಕತೆಗೆ ಸರಿಹೊಂದುವಷ್ಟರ ಮಟ್ಟಿಗೆ ಪ್ರವೇಶಿಸಿದ ಭೂಮಿ ಅಥವಾ ಕಟ್ಟಡದ ಅಧಿಭೋಗದಾರನ ಸಾಮಾಜಿಕ ಮತ್ತು ಧಾರ್ಮಿಕ ಆಚರಣೆಗೆ ಯಾವಾಗಲೂ ಸೂಕ್ತ ಗೌರವ ನೀಡತಕ್ಕದ್ದು.

25. ಶುಲ್ಕ ವಿಧಿಸುವುದು. :- 23 ನೇ ಪ್ರಕರಣದ ಅಡಿಯಲ್ಲಿ ಅನುಮತಿಗಳ ನೀಡಿಕೆಗಾಗಿ ವಿನಿಯಮಗಳ ಮೂಲಕ ನಿರ್ದಿಷ್ಟಪಡಿಸಬಹುದಾದಂಥ ದರದಲ್ಲಿ ಶುಲ್ಕವನ್ನು ವಿಧಿಸುವುದು ಪ್ರಾಧಿಕಾರಕ್ಕೆ ಕಾನೂನುಬದ್ಧವಾಗಿರತಕ್ಕದ್ದು.

26. ಪ್ರಾಧಿಕಾರಕ್ಕೆ ರಾಜ್ಯ ಸರ್ಕಾರದ ಅಧಿಕಾರಿಗಳ ಪ್ರತ್ಯಾಯೋಜನೆ :- ಕರ್ನಾಟಕ ಪ್ರಾಚೀನ ಮತ್ತು ಐತಿಹಾಸಿಕ ಸ್ಮಾರಕಗಳು ಹಾಗೂ ಪುರಾತತ್ವ ಸ್ಥಳಗಳು ಮತ್ತು ಅವಶೇಷಗಳ ಅಧಿನಿಯಮ, 1961 ರಲ್ಲಿ (1962) ರ ಕರ್ನಾಟಕ ಅಧಿನಿಯಮ ಸಂಖ್ಯೆ 7) ಏನೇ ಇದ್ದರೂ, ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ತಾನು ಚಲಾಯಿಸಬಹುದಾದ ಯಾವುದೇ ಅಧಿಕಾರಗಳನ್ನು ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು ಮತ್ತು ಅಂಥ ಅಧಿಸೂಚನೆಯನ್ನನು ಹೊರಡಿಸಿದ ತರುವಾಯ ಪ್ರಾಧಿಕಾರವು ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ಅಂಥ ಪ್ರಕಾರ್ಯಗಳನ್ನು ನೆರವೇರಿಸತಕ್ಕದ್ದು.

27. ಬೀದಿ ಮುಂತಾದವುಗಳ ನಿರ್ವಹಣೆಯ ಕರ್ತವ್ಯ :- ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ, 1993ರಲ್ಲಿ (1993 ರ ಕರ್ನಾಟಕ ಅಧಿನಿಯಮ 14) ಏನೇ ಇದ್ದರೂ, ಈ ಮುಂದಿನ ವಿಷಯಗಳಿಗೆ ಸಂಬಂಧಿಸಿದಂತೆ ತಾನು ಕಾನೂನು ಬದ್ಧವಾಗಿ ಬಳಸಬಹುದಾದ ಯಾವುದೇ ಸಾಧನ ಅಥವಾ ತೆಗೆದುಕೊಳ್ಳಬಹುದಾದ ಯಾವುದೇ ಕ್ರಮದ ಮೂಲಕ ಸಮಂಜಸವಾದ ಮತ್ತು ಸಮರ್ಪಕವಾದ ಉಪ ಬಂಧಗಳನ್ನು ರಚಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು; ಎಂದರೆ -

(ಎ) ಕಾಗಿನೆಲೆಯಲ್ಲಿ ಬೀದಿಗಳ ನಿರ್ವಹಣೆ, ದುರಸ್ತಿ ಮಾಡಿಸುವುದು, ದೀಪ ವ್ಯವಸ್ಥೆ ಮತ್ತು ಸ್ವಚ್ಛಗೊಳಿಸುವುದು; ಮತ್ತು

(ಬಿ) ಕಾಗಿನೆಲೆಯ ಬೀದಿಗಳ ಸಂಬಂಧದಲ್ಲಿ ಚರಂಡಿ, ನೈರ್ಮಲ್ಯ ವ್ಯವಸ್ಥೆ ಮತ್ತು ನೀರು ಸರಬರಾಜು.

28. 1974 ರ ಕರ್ನಾಟಕ ಅಧಿನಿಯಮ 32 ನ್ನು ಪ್ರಾಧಿಕಾರದ ಆವರಣಗಳಿಗೆ ಅನ್ವಯಿಸುವುದು :- (1) ರಾಜ್ಯ ಸರ್ಕಾರವು (2) ನೇ ಉಪಪ್ರಕರಣದ ಉಪಬಂಧಗಳಿಗೆ ಒಳಪಟ್ಟು ಅಧಿಸೂಚನೆಯ ಮೂಲಕ, ಅಂಥ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ, ಕರ್ನಾಟಕ ಸಾರ್ವಜನಿಕ ಆವರಣಗಳ (ಅನಧಿಕೃತ ಅಧಿಭೋಗದಾರರನ್ನು ಹೊರಹಾಕುವ) ಅಧಿನಿಯಮ, 1974ರ ಅಧಿನಿಯಮವು ಸಾರ್ವಜನಿಕ ಆವರಣಗಳಿಗೆ ಸಂಬಂಧಿಸಿ ಅನ್ವಯಿಸುವಂತೆ ಪ್ರಾಧಿಕಾರಕ್ಕೆ ಸೇರಿದ, ಅದರಲ್ಲಿ ನಿಹಿತವಾದ ಅಥವಾ ಅದು ಗುತ್ತಿಗೆಗೆ ತೆಗೆದುಕೊಂಡ ಆವರಣಕ್ಕೆ, ಅನ್ವಯಿಸತಕ್ಕದ್ದೆಂದು ಉಪಬಂಧ ಕಲ್ಪಿಸಬಹುದು.

(2) (1) ನೇ ಉಪ ಪ್ರಕರಣದ ಅಡಿಯಲ್ಲಿ ಅಧಿಸೂಚನೆಯನ್ನು ಹೊರಡಿಸಿದ ತರುವಾಯ, ಮೇಲ್ಕಂಡ ಅಧಿನಿಯಮವು ಮತ್ತು ಅದರಡಿ ರಚಿಸಿದ ನಿಯಮಗಳು ಈ ಮುಂದಿನ ಮಾರ್ಪಾಡುಗಳೊಡನೆ ಪ್ರಾಧಿಕಾರಕ್ಕೆ, ಸೇರಿದ ಆವರಣಗಳಿಗೆ ಅನ್ವಯವಾಗತಕ್ಕದ್ದು, ಎಂದರೆ :-

(ಎ) ರಾಜ್ಯ ಸರ್ಕಾರವು, ತಾನು ಸೂಕ್ತವೆಂದು ಭಾವಿಸುವಂತೆ ರಾಜ್ಯ ಸರ್ಕಾರದ ಅಥವಾ ಪ್ರಾಧಿಕಾರದ ಒಬ್ಬ ಅಧಿಕಾರಿಯನ್ನು ಮೇಲ್ಕಂಡ ಅಧಿನಿಯಮದ ಉದ್ದೇಶಗಳಿಗಾಗಿ ಸಕ್ಷಮ ಅಧಿಕಾರಿ ಎಂದು ನೇಮಿಸಬಹುದು;

(ಬಿ) ಈ ಅಧಿನಿಯಮದಲ್ಲಿ ಮತ್ತು ಆ ನಿಯಮಗಳಲ್ಲಿ ಸಾರ್ವಜನಿಕ ಆವರಣಕ್ಕೆ ಮಾಡಿದ ಉಲ್ಲೇಖಗಳು ಪ್ರಾಧಿಕಾರದ ಆವರಣಗಳಿಗೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು ಮತ್ತು ಆ ಅಧಿನಿಯಮದ 6, 7, 8, 14, 15, 16 ಮತ್ತು 17 ನೇ ಪ್ರಕರಣಗಳಲ್ಲಿ ರಾಜ್ಯ ಸರ್ಕಾರ ಕ್ಕೆ ಮಾಡಿದ ಉಲ್ಲೇಖಗಳನ್ನು ಪ್ರಾಧಿಕಾರಕ್ಕೆ ಮಾಡಿದ ಉಲ್ಲೇಖಗಳೆಂದು ಭಾವಿಸತಕ್ಕದ್ದು.

29. ಪ್ರವಾಸೋದ್ಯಮಕ್ಕೆ ಮತ್ತು ಯಾತ್ರೆ ಕೈಗೊಳ್ಳುವುದಕ್ಕೆ ಪ್ರಾಧಿಕಾರವು ಉತ್ತೇಜಿಸುವುದು :- ಈ ಪಾರಂಪರಿಕ ತಾಣಗಳಿಗೆ ಸಾಕಷ್ಟು ಪ್ರಚಾರವನ್ನು ನೀಡಲು

ಸಾಂಸ್ಕೃತಿಕ, ಚಾರಿತ್ರಿಕ ಮತ್ತು ಯಾತ್ರಿಕ ಪ್ರವಾಸೋದ್ಯಮವನ್ನು ಉತ್ತೇಜಿಸುವುದಕ್ಕಾಗಿ ಪ್ರಾಧಿಕಾರವು ಕಾರ್ಯಕ್ರಮಗಳನ್ನು ಮತ್ತು ಕಾರ್ಯಚಟುವಟಿಕೆಗಳನ್ನು ವ್ಯವಸ್ಥೆ ಮಾಡಬಹುದು. ಅಂಥ ಕಾರ್ಯಕ್ರಮಗಳು ಈ ಮುಂದಿನವುಗಳನ್ನು ಒಳಗೊಂಡಿರತಕ್ಕದ್ದು :-

(ಎ) ಕನಕದಾಸರ ಜಯಂತಿ ಉತ್ಸವ

(ಬಿ) ದಾಸ ಸಾಹಿತ್ಯೋತ್ಸವ

(ಸಿ) ಕಲಾ ಪ್ರದರ್ಶನಗಳು ಮತ್ತು ಮಾರಾಟ

(ಡಿ) ಸಮ್ಮೇಳನಗಳೂ, ವಿಚಾರಗೋಷ್ಠಿಗಳು, ಕಾರ್ಯಾಗಾರಗಳು

(ಇ) ವಾರ್ಷಿಕ ಜಾತ್ರೆಗಳು ಮತ್ತು ವಿಶೇಷ ಸ್ವರೂಪದ ಹಬ್ಬಗಳು

30. ಅಧಿಕಾರಿಗಳ ಪ್ರತ್ಯಾಯೋಜನೆ :- (1) 45 ನೇ ಪ್ರಕರಣದಡಿ ನಿಯಮಗಳನ್ನು ರಚಿಸುವ ಅಧಿಕಾರವನ್ನು ಹೊರತುಪಡಿಸಿ ರಾಜ್ಯ ಸರ್ಕಾರವು ಅಧಿಸೂಚನೆಯ ಮೂಲಕ ಈ ಅಧ್ಯಾದೇಶದಡಿ ಅಥವಾ ಅಧ್ಯಾದೇಶದ ಮೂಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಯಾವುದೇ ಪ್ರಾಧಿಕಾರಕ್ಕೆ ಪ್ರತ್ಯಾಯೋಜಿಸಬಹುದು,

(2) 46 ನೇ ಪ್ರಕರಣದಡಿ ವಿನಿಯಮ ರಚನಾಧಿಕಾರವನ್ನು ಹೊರತುಪಡಿಸಿ, ಪ್ರಾಧಿಕಾರವು ವಿನಿಯಮಗಳ ಮೂಲಕ, ಈ ಅಧ್ಯಾದೇಶದಡಿ ಅಥವಾ ಅಧ್ಯಾದೇಶದ ಮೂಲಕ ಅದಕ್ಕೆ ಪ್ರದತ್ತವಾದ ಯಾವುವೇ ಅಧಿಕಾರಗಳನ್ನು ಆಯುಕ್ತರಿಗೆ ಅಥವಾ ಪ್ರಾಧಿಕಾರದ ಇತರ ಅಧಿಕಾರಿಗಳಿಗೆ ಪ್ರತ್ಯಾಯೋಜಿಸಬಹುದು.

ಅಧ್ಯಾಯ IV

ಹಣಕಾಸು ಮತ್ತು ಸ್ವತ್ತು

31. ಪ್ರಾಧಿಕಾರದ ನಿಧಿ - (1) ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ನಿಧಿಯೆಂದು ಕರೆಯಲಾಗವು ಒಂದು ನಿಧಿಯು ಇರತಕ್ಕದ್ದು.

(2) ಸದರಿ ನಿಧಿಗೆ :-

(i) ಕೇಂದ್ರ ಸರ್ಕಾರ, ರಾಜ್ಯ ಸರ್ಕಾರ, ಯಾವುದೇ ಸ್ಥಳೀಯ ಪ್ರಾಧಿಕಾರ ಅಥವಾ ನಿಗಮಿತವಾದ ಇಲ್ಲವೇ ನಿಗಮಿತವಲ್ಲದ ಯಾವುದೇ ನಿಕಾಯ ಅಥವಾ

ಯಾವೊಬ್ಬ ವ್ಯಕ್ತಿಯು ನೀಡಿದ ಎಲ್ಲ ಅನುದಾನಗಳು, ಧನ ಸಹಾಯ, ದೇಣಿಗೆಗಳು ಮತ್ತು ದಾನಗಳನ್ನು ;

(ii) ಪ್ರಾಧಿಕಾರವು ಸಾಲ ಪಡೆದ ಮೊಬಲಗನ್ನು; ಮತ್ತು

(iii) ಯಾವುದೇ ಮೂಲದಿಂದಾಗಲಿ, ಪ್ರಾಧಿಕಾರವು ಅಥವಾ ಪ್ರಾಧಿಕಾರದ ಪರವಾಗಿ ಪಡೆದುಕೊಂಡ ಇತರ ಎಲ್ಲ ಮೊತ್ತಗಳನ್ನು,

- ಜಮೆ ಮಾಡತಕ್ಕದ್ದು.

(3) ರಾಜ್ಯ ಸರ್ಕಾರವು ಅನ್ಯಥಾ ನಿರ್ದೇಶಿಸಿದ ಹೊರತು, ನಿಧಿಗೆ ಜಮೆ ಮಾಡಲಾದ ಎಲ್ಲ ಹಣವನ್ನು ಯಾವುದೇ ಅನುಸೂಚಿತ ಬ್ಯಾಂಕಿನಲ್ಲಿ ಅಥವಾ ರಾಜ್ಯ ಸರ್ಕಾರದ ಖಜಾನೆಯಲ್ಲಿ ಇರಿಸತಕ್ಕದ್ದು.

(4) ಪ್ರಾಧಿಕಾರದ ಆಯುಕ್ತರಿಗೆ ಮತ್ತು ಇತರ ಅಧಿಕಾರಿಗಳಿಗೆ ಮತ್ತು ನೌಕರರಿಗೆ ಸಂದಾಯ ಮಾಡಬೇಕಾದ ವೇತನಗಳು ಮತ್ತು ಭತ್ಯೆಗಳು ಮತ್ತು ನಿವೃತ್ತಿವೇತನವೇನಾದರೂ ಇದಲ್ಲಿ, ಅದನ್ನೂ ಒಳಗೊಂಡಂತೆ ಪ್ರಾಧಿಕಾರದ ಆಡಳಿತಾತ್ಮಕ ವೆಚ್ಚಗಳನ್ನು ಪ್ರಾಧಿಕಾರದ ನಿಧಿಯಿಂದ ಭರಿಸತಕ್ಕದ್ದು.

32. **ನಿಧಿಯ ಬಳಕೆ :-** ನಿಧಿಯನ್ನು ಮತ್ತು ಪ್ರಾಧಿಕಾರವು ಅಥವಾ ಹೊಂದಿರುವ ಅಥವಾ ಅದರಲ್ಲಿ ನಿಹಿತವಾಗಿರುವ ಎಲ್ಲ ಸ್ವತ್ತನ್ನು ಈ ಅಧ್ಯಾದೇಶದ ಉದ್ದೇಶಗಳನ್ನು ನೆರವೇರಿಸುವುದಕ್ಕಾಗಿ ಬಳಸಿಕೊಳ್ಳತಕ್ಕದ್ದು.

33. **ಸರ್ಕಾರದಿಂದ ಅನುದಾನ :-** ರಾಜ್ಯ ಸರ್ಕಾರವು ಪ್ರತಿ ವರ್ಷವೂ ಪ್ರಾಧಿಕಾರಕ್ಕೆ, ಪ್ರಾಧಿಕಾರವು ತನ್ನದೇ ಸಂಪನ್ಮೂಲಗಳಿಂದ ಸ್ವಯಂ ನಿರ್ವಹಣೆ ಮಾಡಿಕೊಳ್ಳುವ ಹಂತವನ್ನು ತಲುಪುವವರೆಗೆ, ಅದರ ಆಡಳಿತಾತ್ಮಕ ವೆಚ್ಚಗಳಿಗೆ ಸಮನಾದ ಮೊತ್ತವನ್ನು ಅನುದಾನದ ರೂಪದಲ್ಲಿ ನೀಡತಕ್ಕದ್ದು.

34. **ಪ್ರಾಧಿಕಾರದ ಆಯವ್ಯಯ :-** (1) ಪ್ರಾಧಿಕಾರವು, ಪ್ರತಿ ವರ್ಷವೂ ನಿಯಮಿಸಬಹುದಾದಂಥ ದಿನಾಂಕಕ್ಕೆ ಮೊದಲು ಮತ್ತು ಅಂಥ ನಮೂನೆಯಲ್ಲಿ, ಮುಂಬರುವ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗುವ ಹಣಕಾಸು ವರ್ಷಕ್ಕಾಗಿ ತನ್ನ ಆದಾಯ ಮತ್ತು ವೆಚ್ಚದ ಆಯವ್ಯಯ ಅಂದಾಜನ್ನು ಸಿದ್ಧಪಡಿಸತಕ್ಕದ್ದು ಮತ್ತು ರಾಜ್ಯ ಸರ್ಕಾರಕ್ಕೆ ಮಂಜೂರಾತಿಗಾಗಿ ಕಳುಹಿಸತಕ್ಕದ್ದು. ಪ್ರಾಧಿಕಾರವು ಅವಶ್ಯವಾದರೆ, ಯಾವುದೇ ಹಣಕಾಸು ವರ್ಷದ ಅವಧಿಯಲ್ಲಿ ಪೂರಕ ಆಯವ್ಯಯ ಅಂದಾಜುಗಳನ್ನು ಸಹ ಸಿದ್ಧಪಡಿಸಬಹುದು.

(2) ರಾಜ್ಯ ಸರ್ಕಾರವು, ಈ ಆಯವ್ಯಯ ಅಂದಾಜುಗಳನ್ನು ಮತ್ತು ಪೂರಕ ಬಜೆಟ್ ಅಂದಾಜುಗಳನ್ನು ಅವುಗಳಲ್ಲಿ ಮಾರ್ಪಾಟುಗಳನ್ನು ಮಾಡಿ ಅಥವಾ ಮಾಡದೇ ಅನುಮೋದಿಸತಕ್ಕದ್ದು.

(3) ಅತ್ಯಂತ ತುರ್ತು ಸಂದರ್ಭಗಳಲ್ಲಿ, ಆಯುಕ್ತರು ಒಂದು ಹಣಕಾಸು ವರ್ಷದಲ್ಲಿ ಐದು ಲಕ್ಷ ರೂಪಾಯಿಗಳಿಗೆ ಮೀರದಂತೆ ವೆಚ್ಚವನ್ನು, ಅಂಥ ವೆಚ್ಚವನ್ನು (2) ನೇ ಉಪ-ಪ್ರಕರಣದಡಿ ರಾಜ್ಯ ಸರ್ಕಾರವು ಅನುಮೋದಿಸಿದ ವಾರ್ಷಿಕ ಅಥವಾ ಪೂರಕ ಆಯವ್ಯಯ ಅಂದಾಜಿನಲ್ಲಿ ಸೇರಿಸಿಲ್ಲದಿದ್ದಾಗ್ಯೂ, ಮಾಡಲು ಸಕ್ಷಮ ರಾಗಿರತಕ್ಕದ್ದು.

(4) ಆಯುಕ್ತರು, ಒಂದು ಬಾರಿಗೆ, ಒಂದು ಲಕ್ಷ ರೂಪಾಯಿಗಳ ಗರಿಷ್ಠ ಮಿತಿಗೆ ಒಳಪಟ್ಟು, ವೆಚ್ಚದ ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ನಿಧಿಗಳ ಪುನರ್‌ವಿನಿಯೋಗ ಮಾಡುವ ಅಧಿಕಾರವನ್ನು ಹೊಂದಿರತಕ್ಕದ್ದು.

35. ಲೆಕ್ಕ ಪತ್ರಗಳು ಮತ್ತು ಲೆಕ್ಕಪರಿಶೋಧನೆ. :- (1) ಆಯುಕ್ತರು, ನಿಯಮಿಸಬಹುದಾದಂಥ ಲೆಕ್ಕಪತ್ರಗಳ ಪುಸ್ತಕಗಳನ್ನು ಮತ್ತು ಇತರ ರಿಜಿಸ್ಟರುಗಳನ್ನು ನಿರ್ವಹಿಸಿಕೊಂಡು ಬರುವಂತೆ ಮಾಡತಕ್ಕದ್ದು ಮತ್ತು ನಿಯಮಿಸಲಾದ ವಿಧಾನದಲ್ಲಿ ವಾರ್ಷಿಕ ಲೆಕ್ಕಪತ್ರಗಳ ತಃಖ್ತೆಯನ್ನು ತಯಾರಿಸತಕ್ಕದ್ದು.

(2) ಪ್ರಾಧಿಕಾರದ ಹಣಕಾಸು ವರ್ಷವು ಕ್ಯಾಲೆಂಡರ್ ವರ್ಷದ ಏಪ್ರಿಲ್ ಒಂದನೆಯ ದಿನಾಂಕದಂದು ಪ್ರಾರಂಭವಾಗತಕ್ಕದ್ದು ಮತ್ತು ಮುಂಬರುವ ಕ್ಯಾಲೆಂಡರ್ ವರ್ಷದ ಮಾರ್ಚ 31 ನೇ ದಿನದಂದು ಕೊನೆಗೊಳ್ಳತಕ್ಕದ್ದು.

(3) ಪ್ರಾಧಿಕಾರದ ಲೆಕ್ಕಪತ್ರಗಳನ್ನು ರಾಜ್ಯ ಲೆಕ್ಕಪತ್ರಗಳ ಇಲಾಖೆಯ ನಿಯಂತ್ರಣಾಧಿಕಾರಿಯು ವಾರ್ಷಿಕವಾಗಿ ಲೆಕ್ಕಪರಿಶೋಧನೆ ನಡೆಸತಕ್ಕದ್ದು. ಪ್ರಾಧಿಕಾರವು ಅಥವಾ ರಾಜ್ಯ ಸರ್ಕಾರವು ಸಮವರ್ತಿ ಮತ್ತು ವಿಶೇಷ ಪರಿಶೋಧನೆಗಾಗಿಯೂ ಆದೇಶಿಸಬಹುದು.

(4) ಲೆಕ್ಕಪರಿಶೋಧನಕನು, ಲೆಕ್ಕಪರಿಶೋಧನೆಯ ಉದ್ದೇಶಗಳಿಗಾಗಿ, ಪ್ರಾಧಿಕಾರದ ಎಲ್ಲ ಲೆಕ್ಕಪತ್ರಗಳನ್ನು ಮತ್ತು ಇತರ ದಾಖಲೆಗಳನ್ನು ನೋಡುವ ಅವಕಾಶವನ್ನು ಹೊಂದಿರತಕ್ಕದ್ದು.

(5) ಪ್ರಾಧಿಕಾರವು, ಲೆಕ್ಕಪತ್ರಗಳ ವಾರ್ಷಿಕ ತಃಖ್ತೆಯನ್ನು ಮತ್ತು ಲೆಕ್ಕಪರಿಶೋಧಕನ ವರದಿಯನ್ನು ಸ್ವೀಕರಿಸಿದ ತರುವಾಯ, ಸಾಧ್ಯವಾಗಬಹುದಾದಷ್ಟು ಬೇಗನೆ, ಅದನ್ನು ತನ್ನ ಸಭೆಯಲ್ಲಿ ಪರಿಶೀಲಿಸತಕ್ಕದ್ದು ಮತ್ತು ವಾರ್ಷಿಕ ಲೆಕ್ಕಪತ್ರಗಳ ತಃಖ್ತೆ ಹಾಗೂ ಲೆಕ್ಕಪರಿಶೋಧಕನ ವರದಿಯ ಪ್ರತಿಯನ್ನು, ಲೆಕ್ಕಪರಿಶೋಧಕನು ಮಾಡಿದ ಟೀಕೆಗಳೇನಾದರೂ ಇದ್ದಲ್ಲಿ, ಅದಕ್ಕೆ ನೀಡಿದ ತನ್ನ ವಿವರಣೆ ಮತ್ತು ಲೆಕ್ಕಪರಿಶೋಧಕನು ಸೂಚಿಸಿದ ಅಕ್ರಮತೆಗಳು ಅಥವಾ ಲೋಪದೋಷಗಳೇನಾದರೂ ಇದ್ದಲ್ಲಿ, ಅವುಗಳ ಪರಿಹಾರೋಪಾಯಕ್ಕಾಗಿ ಪ್ರಾಧಿಕಾರವು ಕೈಗೊಂಡ ಕ್ರಮದ ವಿವರಣೆಗಳ ಜೊತೆಗೆ ರಾಜ್ಯ ಸರ್ಕಾರಕ್ಕೆ ಕಳುಹಿಸತಕ್ಕದ್ದು.

(6) ರಾಜ್ಯ ಸರ್ಕಾರವು, ಲೆಕ್ಕ ಪರಿಶೋಧಕನ ವರದಿಯನ್ನು ಮತ್ತು (5) ನೇ ಉಪ-ಪ್ರಕರಣದ ಅಡಿಯಲ್ಲಿ ತನಗೆ ಸಲ್ಲಿಸಲಾದ ಇತರ ದಸ್ತಾವೇಜುಗಳನ್ನು ಪರಿಶೀಲಿಸಿದ ನಂತರ, ಪ್ರಾಧಿಕಾರಕ್ಕೆ ಅದು ಸೂಕ್ತವೆಂದು ಭಾವಿಸುವಂಥ ನಿರ್ದೇಶನಗಳನ್ನು ನೀಡಬಹುದು ಮತ್ತು ಪ್ರಾಧಿಕಾರವು ಅಂಥ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

36. **ವರದಿಗಳು** :- (1) ಪ್ರಾಧಿಕಾರವು, ಪ್ರತಿಯೊಂದು ಹಣಕಾಸು ವರ್ಷಕ್ಕಾಗಿ, ತನ್ನ ಕಾರ್ಯನಿರ್ವಹಣೆ ಬಗ್ಗೆ ವಾರ್ಷಿಕ ವರದಿಯೊಂದನ್ನು ತಯಾರಿಸತಕ್ಕದ್ದು ಮತ್ತು 35 ನೇ ಪ್ರಕರಣದ ಅಡಿಯ ಇತರ ವರದಿಗಳೊಂದಿಗೆ ಅದನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

(2) ಪ್ರಾಧಿಕಾರವು, ನಿಯಮಿಸಬಹುದಾದಂಥ ದಿನಾಂಕಕ್ಕಿಂತ ಮೊದಲು, ಅಂಥ ನಮೂನೆಯಲ್ಲಿ ಮತ್ತು ಅಂಥ ಅವಧಿಯ ಅಂತರದಲ್ಲಿ, ನಿಯಮಿಸಲಾದ ವರದಿಗಳನ್ನು ರಾಜ್ಯ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಅಧ್ಯಾಯ V

ಸಂಕೀರ್ಣ ವಿಷಯಗಳು

37. **ಪ್ರಾಧಿಕಾರವು ತನ್ನ ಅಧಿಕಾರ ವ್ಯಾಪ್ತಿಯೊಳಗಿನ ಯಾವುದೇ ಜಮೀನನ್ನು ಮಾರಾಟ ಮಾಡಕೂಡದು** :- ಪ್ರಾಧಿಕಾರವು, ಸರ್ಕಾರದ ಪೂರ್ವಾನುಮೋದನೆ ಪಡೆಯದೆ, ಯಾವುದೇ ಉದ್ದೇಶಕ್ಕಾಗಿ ಮತ್ತು ಯಾವೊಬ್ಬ ವ್ಯಕ್ತಿಗೆ ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಬರುವ ಯಾವುದೇ ಜಮೀನನ್ನು ಮಾರಾಟ ಮಾಡತಕ್ಕದ್ದಲ್ಲ.

38. ಕೆಲವು ವ್ಯಕ್ತಿಗಳು ಸಾರ್ವಜನಿಕ ನೌಕರರಾಗಿರತಕ್ಕದ್ದು :- ಪ್ರಾಧಿಕಾರದ ಎಲ್ಲ ಸದಸ್ಯರು, ಅಧಿಕಾರಿಗಳು ಮತ್ತು ನೌಕರರನ್ನು, ಅವರು ಈ ಅಧಿನಿಯಮದ ಯಾವುವೇ ಉಪಬಂಧಗಳ ಅನುಸರಣೆಯಲ್ಲಿ ಕಾರ್ಯನಿರ್ವಹಿಸುತ್ತಿರುವಾಗ ಅಥವಾ ಕಾರ್ಯ ನಿರ್ವಹಿಸುತ್ತಿರುವರೆಂದು ತಾತ್ಪರ್ಯವಾದಾಗ ಅವರನ್ನು ಭಾರತ ದಂಡ ಸಂಹಿತೆಯ 21 ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಸಾರ್ವಜನಿಕ ನೌಕರರು ಎಂಬುದಾಗಿ ಭಾವಿಸತಕ್ಕದ್ದು.

39. ಈ ಅಧಿನಿಯಮದ ಅಡಿ ಸದ್ಭಾವನೆಯಿಂದ ಕೈಗೊಂಡ ಕ್ರಮಕ್ಕೆ ರಕ್ಷಣೆ :- ಈ ಅಧಿನಿಯಮದ ಅಡಿಯಲ್ಲಿ ಸದ್ಭಾವನೆಯಿಂದ ಕೈಗೊಂಡ ಅಥವಾ ಕೈಗೊಳ್ಳಲು ಉದ್ದೇಶಿಸಿದ ಯಾವುದೇ ಕೃತ್ಯಕ್ಕಾಗಿ, ಯಾವೊಬ್ಬ ವ್ಯಕ್ತಿಯ ವಿರುದ್ಧ ಯಾವುದೇ ದಾವೆ, ಪ್ರಾಸಿಕ್ಯೂಷನ್ ಅಥವಾ ಇತರೆ ಕಾನೂನು ವ್ಯವಹರಣೆಗಳನ್ನು ಹೂಡಲು ಅವಕಾಶವಿರತಕ್ಕದ್ದಲ್ಲ.

40. ಕರ್ತವ್ಯ ನಿರ್ವಹಣೆಯಲ್ಲಿ ಲೋಪ :- (1) ಈ ಅಧಿನಿಯಮದಿಂದ ಅಥವಾ ಅದರ ಅಡಿಯಲ್ಲಿ ವಿಧಿಸಲಾದ ಯಾವುದೇ ಕರ್ತವ್ಯದ ನಿರ್ವಹಣೆಯನ್ನು ಪ್ರಾಧಿಕಾರವು ಮಾಡಿಲ್ಲ ಎಂದು ರಾಜ್ಯ ಸರ್ಕಾರಕ್ಕೆ ಮನವರಿಕೆಯಾದರೆ, ಆ ಕರ್ತವ್ಯದ ನಿರ್ವಹಣೆಗಾಗಿ ಅದು ಒಂದು ಅವಧಿಯನ್ನು ನಿಗದಿಪಡಿಸತಕ್ಕದ್ದು.

(2) ಕರ್ತವ್ಯ ನಿರ್ವಹಣೆಗಾಗಿ ಹಾಗೆ ನಿಗದಿಪಡಿಸಿದ ಅವಧಿಯೊಳಗೆ ಅಂಥ ಕರ್ತವ್ಯ ನಿರ್ವಹಣೆ ಮಾಡುವಲ್ಲಿ ಪ್ರಾಧಿಕಾರವು ವಿಫಲವಾಗಿದೆ ಅಥವಾ ನಿರ್ಲಕ್ಷ್ಯ ತೋರಿದೆ ಎಂದು ರಾಜ್ಯ ಸರ್ಕಾರವು ಅಭಿಪ್ರಾಯಪಟ್ಟರೆ, 4 ನೇ ಪ್ರಕರಣದಲ್ಲಿ ಏನೇ ಇದ್ದರೂ, ಪ್ರಾಧಿಕಾರವನ್ನು ರದ್ದುಗೊಳಿಸುವುದು ಮತ್ತು ಅದನ್ನು ನಿಗದಿತ ರೀತಿಯಲ್ಲಿ ಪುನಃ ರಚಿಸುವುದು ರಾಜ್ಯ ಸರ್ಕಾರಕ್ಕೆ ಕಾನೂನುಸಮ್ಮತವಾಗಿರತಕ್ಕದ್ದು.

(3) ಪ್ರಾಧಿಕಾರವನ್ನು ರದ್ದುಪಡಿಸಿದ ತರುವಾಯ ಮತ್ತು ಅದನ್ನು ಪುನಾರಚಿಸುವವರೆಗೆ ಈ ಅಧಿನಿಯಮದ ಅಡಿಯಲ್ಲಿನ ಪ್ರಾಧಿಕಾರದ ಅಧಿಕಾರಗಳು, ಕರ್ತವ್ಯಗಳು ಮತ್ತು ಪ್ರಕಾರ್ಯಗಳನ್ನು ರಾಜ್ಯ ಸರ್ಕಾರ ಅಥವಾ ಈ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು ನೇಮಕ ಮಾಡಬಹುದಾದಂಥ ಅಧಿಕಾರಿ ಅಥವಾ ಅಧಿಕಾರಿಗಳು ನಿರ್ವಹಿಸತಕ್ಕದ್ದು.

41. ಪ್ರಾಧಿಕಾರದ ವಿಘಟನೆ :- (1) ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ಈ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಬಹುದಾದ ದಿನಾಂಕದಿಂದ ಜಾರಿಗೆ ಬರುವಂತೆ, ಪ್ರಾಧಿಕಾರವು ವಿಘಟಿತವಾಗತಕ್ಕದ್ದೆಂದು ಘೋಷಿಸಬಹುದು;

ಪರಂತು, ಅಂಥ ಯಾವುದೇ ಘೋಷಣೆಯನ್ನು, ಆ ಅಭಿಪ್ರಾಯದ ಒಂದು ನಿರ್ಣಯವನ್ನು ರಾಜ್ಯ ವಿಧಾನಮಂಡಲದ ಉಭಯ ಸದನಗಳ ಮುಂದೆ ಮಂಡಿಸಿ ಅವುಗಳು ಅದನ್ನು ಅನುಮೋದಿಸಿದ ಹೊರತು, ರಾಜ್ಯ ಸರ್ಕಾರವು ಮಾಡತಕ್ಕದ್ದಲ್ಲ.

(2) (1) ನೇ ಉಪ-ಪ್ರಕರಣದ ಅಡಿಯಲ್ಲಿನ ಅಧಿಸೂಚನೆಯಲ್ಲಿ ನಿರ್ದಿಷ್ಟಪಡಿಸಿದ ದಿನಾಂಕದಿಂದ ಪರಿಣಾಮಕಾರಿಯಾಗುವಂತೆ,-

(ಎ) ಪ್ರಾಧಿಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಾಗತಕ್ಕ ಎಲ್ಲ ಸ್ವತ್ತುಗಳು, ನಿಧಿಗಳು ಮತ್ತು ಬಾಕಿಗಳು ರಾಜ್ಯ ಸರ್ಕಾರದಲ್ಲಿ ನಿಹಿತವಾಗತಕ್ಕದ್ದು ಮತ್ತು ಅದು ವಸೂಲಿ ಮಾಡಬಹುದಾಗಿರತಕ್ಕದ್ದು.

(ಬಿ) ಪ್ರಾಧಿಕಾರದ ವಿರುದ್ಧ ಜಾರಿಮಾಡಬಹುದಾದ ಎಲ್ಲ ಹೊಣೆಗಳು, ರಾಜ್ಯ ಸರ್ಕಾರದಲ್ಲಿ ನಿಹಿತವಾದ ಮತ್ತು ಅದರಿಂದ ವಸೂಲಿಯಾದ ಸ್ವತ್ತು, ನಿಧಿ ಮತ್ತು ಬಾಕಿಗಳಷ್ಟರ ಮಟ್ಟಿಗೆ ರಾಜ್ಯ ಸರ್ಕಾರದ ವಿರುದ್ಧ ಜಾರಿಯಾಗಬಹುದಾಗಿರತಕ್ಕದ್ದು.

42 **ರಾಜ್ಯ ಸರ್ಕಾರದ ನಿಯಂತ್ರಣ** :- (1) ಪ್ರಾಧಿಕಾರದ ಎಲ್ಲ ಕಾರ್ಯಚಟುವಟಿಕೆಗಳು ಮತ್ತು ವ್ಯವಹಾರಗಳ ಮೇಲೆ ರಾಜ್ಯ ಸರ್ಕಾರವು ಸಾಮಾನ್ಯ ಆಡಳಿತಾತ್ಮಕ ನಿಯಂತ್ರಣ ಮತ್ತು ಅಧೀಕ್ಷಣೆ ಹೊಂದಿರತಕ್ಕದ್ದು.

(2) ರಾಜ್ಯ ಸರ್ಕಾರವು, ಪ್ರಾಧಿಕಾರದ ಅಯುಕ್ತರ ಅಥವಾ ಪ್ರಾಧಿಕಾರದ ಅಧೀನದ ಯಾವೊಬ್ಬ ಅಧಿಕಾರಿಯ ಯಾವುದೇ ವ್ಯವಹರಣೆಗಳ ದಾಖಲೆಗಳನ್ನು, ಅಂಥ ವ್ಯವಹರಣೆಗಳ ಸರಿಯಾಗಿರುವಿಕೆ, ಕಾನೂನು ಬದ್ಧತೆ ಅಥವಾ ಔಚಿತ್ಯಗಳ ಬಗ್ಗೆ ತಾನು ಮನದಟ್ಟು ಮಾಡಿಕೊಳ್ಳುವ ಉದ್ದೇಶಕ್ಕಾಗಿ ತರಿಸಿಕೊಳ್ಳಬಹುದು ಮತ್ತು ಅವುಗಳ ಬಗ್ಗೆ ತಾನು ಸೂಕ್ತವೆಂದು ಭಾವಿಸಿದಂಥ ಆದೇಶಗಳನ್ನು ಹೊರಡಿಸಬಹುದು.

43. **ನಿರ್ದೇಶನಗಳನ್ನು ನೀಡುವುದಕ್ಕೆ ರಾಜ್ಯ ಸರ್ಕಾರದ ಅಧಿಕಾರ** :- ರಾಜ್ಯ ಸರ್ಕಾರವು ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯ ಪಡುವಂಥ ನಿರ್ದೇಶನಗಳನ್ನು ಪ್ರಾಧಿಕಾರಕ್ಕೆ ಕೊಡಬಹುದು ಮತ್ತು ಅಂಥ ನಿರ್ದೇಶನಗಳನ್ನು ಪಾಲಿಸುವುದು ಪ್ರಾಧಿಕಾರದ ಕರ್ತವ್ಯವಾಗಿರತಕ್ಕದ್ದು.

44. **ತೊಂದರೆಗಳ ನಿವಾರಣೆ** :- ಈ ಅಧಿನಿಯಮದ ಉಪಬಂಧಗಳನ್ನು ಜಾರಿಗೆ ತರುವಲ್ಲಿ, ಯಾವುದೇ ತೊಂದರೆ ಉದ್ಭವಿಸಿದರೆ, ರಾಜ್ಯ ಸರ್ಕಾರವು ಆ

ತೊಂದರೆಯ ನಿವಾರಣೆಗಾಗಿ, ತಾನು ಅವಶ್ಯಕ ಮತ್ತು ಸಮಯೋಚಿತವೆಂದು ಅಭಿಪ್ರಾಯಪಡುವಂಥ ಉಪಬಂಧಗಳನ್ನು ಅಧಿಸೂಚನೆಯ ಮೂಲಕ ಮಾಡಬಹುದು.

45. ನಿಯಮಗಳ ರಚನಾಧಿಕಾರ :- (1) ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ರಾಜ್ಯ ಸರ್ಕಾರವು, ಅಧಿಸೂಚನೆಯ ಮೂಲಕ, ನಿಯಮಗಳನ್ನು ರಚಿಸಬಹುದು.

(2) ಈ ಅಧಿನಿಯಮದ ಅಡಿಯಲ್ಲಿ ರಚಿಸಲಾದ ಪ್ರತಿಯೊಂದು ನಿಯಮವನ್ನು ಅಥವಾ ಅಧಿಸೂಚನೆಯನ್ನು ಅದನ್ನು ರಚಿಸಿದ ತರುವಾಯ, ಆದಷ್ಟು ಬೇಗನೆ, ರಾಜ್ಯ ವಿಧಾನಮಂಡಲದ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಎರಡು ಅಥವಾ ಹೆಚ್ಚಿನ ನಿರಂತರ ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿನಗಳ ಅವಧಿಯವರೆಗೆ ಮಂಡಿಸತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನಗಳ ಅಥವಾ ನಿರಂತರ ಅಧಿವೇಶನಗಳ ನಿಕಟ ತರುವಾಯದ ಅಧಿವೇಶನದ ಮುಕ್ತಾಯಕಕ್ಕೆ ಮುಂಚೆ ಆ ನಿಯಮದಲ್ಲಿ ಅಥವಾ ಅಧಿಸೂಚನೆಯಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳೂ ಒಪ್ಪಿದರೆ ಅಥವಾ ಆ ನಿಯಮವನ್ನು ಅಥವಾ ಅಧಿಸೂಚನೆಯನ್ನು ಮಾಡಕೂಡದೆಂದು ಎರಡೂ ಸದನಗಳೂ ಒಪ್ಪಿದರೆ ಆ ನಿಯಮವು ಅಥವಾ ಅಧಿಸೂಚನೆಯು ಸಂದರ್ಭಾನುಸಾರ ಅಂಥ ಮಾರ್ಪಾಟಾದ ರೂಪದಲ್ಲಿ ಮಾತ್ರ ಆ ಮಾರ್ಪಾಟನ್ನು ಅಥವಾ ರದ್ದತಿಯನ್ನು ಅಧಿಸೂಚಿಸಿದ ದಿನಾಂಕದಿಂದ ಪರಿಣಾಮಕಾರಿಯಾಗತಕ್ಕದ್ದು ಅಥವಾ ಯಾವುದೇ ಪರಿಣಾಮ ಹೊಂದಿರತಕ್ಕದ್ದಲ್ಲ; ಅದಾಗ್ಯೂ ಅಂಥ ಯಾವುದೇ ಮಾರ್ಪಾಟು ಅಥವಾ ರದ್ದತಿಯು ಆ ನಿಯಮದ ಅಥವಾ ಅಧಿಸೂಚನೆಯ ಮೇರೆಗೆ ಹಿಂದೆ ಮಾಡಿದ ಯಾವುದೇ ಕಾರ್ಯದ ಮಾನ್ಯತೆಗೆ ಬಾಧಕವಾಗತಕ್ಕದ್ದಲ್ಲ.

46. ನಿಯಮಗಳ ರಚನಾಧಿಕಾರ :- ಪ್ರಾಧಿಕಾರವು, ಈ ಅಧಿನಿಯಮದ ಉಪಬಂಧಗಳಿಗೆ ಮತ್ತು 45 ನೇ ಪ್ರಕರಣದ ಮೇರೆಗೆ ರಚಿಸಲಾದ ನಿಯಮಗಳಿಗೆ ಒಳಪಟ್ಟು ಮತ್ತು ರಾಜ್ಯ ಸರ್ಕಾರದ ಪೂರ್ವ ಮಂಜೂರಾತಿಯೊಂದಿಗೆ ಈ ಅಧಿನಿಯಮದ ಉದ್ದೇಶಗಳನ್ನು ಕಾರ್ಯಗತಗೊಳಿಸುವುದಕ್ಕೆ ಅಧಿಸೂಚನೆಯ ಮೂಲಕ ವಿನಿಯಮಗಳನ್ನು ರಚಿಸಬಹುದು.

47. ನಿರಸನ ಮತ್ತು ಉಳಿಸುವಿಕೆಗಳು :- (1) ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರದ ಅಧ್ಯಾದೇಶ, 2005 ನ್ನು (2005 ರ ಕರ್ನಾಟಕ ಅಧ್ಯಾದೇಶ 2) ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸಿತಗೊಳಿಸಿದ್ದರೂ, ಸದರಿ ಅಧ್ಯಾದೇಶ ಅಡಿಯಲ್ಲಿ ಮಾಡಲಾದ ಯಾವುದೇ ಕಾರ್ಯ ಅಥವಾ ಕೈಗೊಳ್ಳಲಾದ ಯಾವುದೇ ಕ್ರಮವನ್ನು ಈ ಅಧಿನಿಯಮದ ಅಡಿಯಲ್ಲಿ ಮಾಡಲಾಗಿದೆ ಅಥವಾ ಕೈಗೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು.

ಅನುಸೂಚಿ

(2ನೇ ಪ್ರಕರಣದ (ಜಿ) ಖಂಡವನ್ನು ನೋಡಿ)

ಕಾಗಿನೆಲೆಯಲ್ಲಿರುವ ಪರಂಪರೆಯ ತಾಣಗಳು ಮತ್ತು ಸ್ಮಾರಕಗಳು

1) ಬಾಡ	1) ಕನಕದಾಸರ ಜನ್ಮಸ್ಥಳ 2) ಕೆಂಗೇರಿ ಕೆರೆ 3) ಕನಕದಾಸರ ಪಂಚಸಮಿತಿ 4) ಶ್ರೀ ರಂಗನಾಥ ದೇವರ ಸ್ಥಳ
2) ಕಾಗಿನೆಲೆ	1) ಆದಿಕೇಶವ ದೇವಾಲಯ 2) ಕಾಳಹಸ್ತೇಶ್ವರ 3) ಗುರುಪೀಠ 4) ಸಂಗಮೇಶ್ವರ ದೇವಾಲಯ 5) ಬಯಲು ಬಸವೇಶ್ವರ ದೇವಾಲಯ 6) ವೀರಭದ್ರೇಶ್ವರ ದೇವಾಲಯ 7) ಸೋಮೇಶ್ವರ ದೇವಾಲಯ 8) ಗಚ್ಚಿನ ಮಠ 9) ಕನಕದಾಸರ ಐಕ್ಯಸ್ಥಳ
3) ಇಂಗಳಗೊಂದಿ	1) ಚೆನ್ನಕೇಶವ ದೇವಾಲಯ

		2) ಕಲ್ಲೇಶ್ವರ ದೇವಾಲಯ ಶಾಸನ ಮತ್ತು ಸತಿಕಲ್ಲು
4)	ದಾಸನಕೊಪ್ಪ	1) ಮಾರುತಿ ದೇವಸ್ಥಾನ
5)	ಕುಮ್ಮೂರು	1) ತಿಮ್ಮಕೇಶವ ದೇವಾಲಯ
6)	ಕದರಮಂಡಲಗಿ	1) ಅಂಜನೇಯ (ಕಾಂತೇಶ) ದೇವಸ್ಥಾನ ಮತ್ತು ಶಾಸನ 2) ಕಲ್ಯಾಣಿ

ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

ಮಾನವ ಕಲ್ಯಾಣಕ್ಕಾಗಿ ಕನಕದಾಸರು ಮಾಡಿರುವ ಸಾಧನೆ ಮತ್ತು ನೀಡಿರುವ ಕೊಡುಗೆಯನ್ನು ಅವರ ಘನತೆಗೆ ತಕ್ಕ ವಿಧಾನದಲ್ಲಿ ಸಮಾಜಕ್ಕೆ ಸೂಕ್ತ ರೀತಿಯಲ್ಲಿ ತಿಳಿಸಿಕೊಡುವ ದರಷ್ಟಿಯಿಂದ 2002 ರಲ್ಲಿ ಕನಕದಾಸ ಟ್ರಸ್ಟ್ ಅನ್ನು ಕರ್ನಾಟಕ ಸರ್ಕಾರವು ರಚಿಸಿತು. ಆದರೆ ಈ ಟ್ರಸ್ಟ್‌ನ ಕಾರ್ಯಕ್ಷೇತ್ರವು ಬಹಳ ಸೀಮಿತವಾಗಿತ್ತು. ಕನಕದಾಸರ ಬಗ್ಗೆ ಅಧ್ಯಯನ, ಸಂಶೋಧನೆ, ಸಂಸ್ಕೃತಿ, ಶಿಕ್ಷಣ ಮತ್ತು ಪ್ರಸಾರ ಕಾರ್ಯ ಹಾಗೂ ಅವರ ಜನ್ಮಸ್ಥಳದ ಪರಿಸರದ ಅಭಿವೃದ್ಧಿ ಇವು ಬಹುಮುಖವಾದ ವಿಷಯಗಳಾದುದರಿಂದ ಮತ್ತು ಅವುಗಳ ಬಗ್ಗೆ ವ್ಯಾಪಕ ವ್ಯವಸ್ಥೆ ಮಾಡಬೇಕಾದ ಅಗತ್ಯವಿರುವುದರಿಂದ ಈ ಎಲ್ಲ ಉದ್ದೇಶಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಈಡೇರಿಸುವುದಕ್ಕಾಗಿ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಬೇಕೆಂದು ಸರ್ಕಾರವು ಪ್ರಸ್ತಾವಿಸಿದೆ.

ವಿಷಯವು ತುರ್ತು ಸ್ವರೂಪದ್ದಾಗಿದ್ದರಿಂದ ಹಾಗೂ ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿಲ್ಲದಿದ್ದುದರಿಂದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧ್ಯಾದೇಶ, 2005 ನ್ನು (2005 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 2) 2005 ರ ಜೂನ್ 10 ನೇ ದಿನಾಂಕದಂದು ಪ್ರಖ್ಯಾಪಿಸಲಾಯಿತು ಮತ್ತು ಈಗ ಅದರ ಸಮಯವ್ಯಾಪ್ತಿ ಮುಗಿದಿದೆ.

ಆದ್ದರಿಂದ ಈ ವಿಧೇಯಕ.

ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನ ರಚನಾ ಕ್ರಮದಿಂದ ರಾಜ್ಯ ಬೊಕ್ಕಸಕ್ಕೆ ಹತ್ತು ವರ್ಷಗಳ ಅವಧಿಗೆ ವರ್ಷಕ್ಕೆ ಐದು ಕೋಟಿ ರೂಪಾಯಿಗಳ ಅವರ್ತಕ ವೆಚ್ಚವುಂಟಾಗುವ ನಿರೀಕ್ಷೆ ಇದೆ.

ಕರ್ನಾಟಕ ವಿಧಾನ ಸಭೆಯ ಕಾರ್ಯವಿಧಾನ ಮತ್ತು ನಡವಳಿಕೆಗಳ 80 ನೇ ನಿಯಮದ (1) ಉಪನಿಯಮದ ಮೂಲಕ ಅಗತ್ಯಪಡಿಸಲಾದಂತೆ ವಿವರಣಾತ್ಮಕ ಹೇಳಿಕೆ

ಮಾನವ ಕಲ್ಯಾಣಕ್ಕಾಗಿ ಕನಕದಾಸರು ಮಾಡಿರುವ ಸಾಧನೆ ಮತ್ತು ನೀಡಿರುವ ಕೊಡುಗೆಯನ್ನು ಅವರ ಘನತೆಗೆ ತಕ್ಕ ವಿಧಾನದಲ್ಲಿ ಸಮಾಜಕ್ಕೆ ಸೂಕ್ತ ರೀತಿಯಲ್ಲಿ ತಿಳಿಸಿಕೊಡುವ ದೃಷ್ಟಿಯಿಂದ 2002 ರಲ್ಲಿ ಕನಕದಾಸ ಟ್ರಸ್ಟ್ ಅನ್ನು ಕರ್ನಾಟಕ ಸರ್ಕಾರವು ರಚಿಸಿತು. ಆದರೆ ಈ ಟ್ರಸ್ಟ್‌ನ ಕಾರ್ಯಕ್ಷೇತ್ರವು ಬಹಳ ಸೀಮಿತವಾಗಿತ್ತು. ಕನಕದಾಸರ ಬಗ್ಗೆ ಅಧ್ಯಯನ, ಸಂಶೋಧನೆ, ಸಂಸ್ಕೃತಿ, ಶಿಕ್ಷಣ ಮತ್ತು ಪ್ರಸಾರ ಕಾರ್ಯ ಹಾಗೂ ಅವರ ಜನ್ಮಸ್ಥಳದ ಪರಿಸರದ ಅಭಿವೃದ್ಧಿ ಇವು ಬಹುಮುಖ್ಯವಾದ ವಿಷಯಗಳಾದುದರಿಂದ ಮತ್ತು ಅವುಗಳ ಬಗ್ಗೆ ವ್ಯಾಪಕ ವ್ಯವಸ್ಥೆ ಮಾಡಬೇಕಾದ ಅಗತ್ಯವಿರುವುದರಿಂದ ಈ ಎಲ್ಲ ಉದ್ದೇಶಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಈಡೇರಿಸುವುದಕ್ಕಾಗಿ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರವನ್ನು ರಚಿಸಬೇಕೆಂದು ಸರ್ಕಾರವು ಪ್ರಸ್ತಾವಿಸಿದೆ.

ವಿಷಯವು ತುರ್ತು ಸ್ವರೂಪದ್ದಾಗಿದ್ದರಿಂದ ಹಾಗೂ ಕರ್ನಾಟಕ ವಿಧಾನ ಪರಿಷತ್ತು ಅಧಿವೇಶನದಲ್ಲಿಲ್ಲದಿದ್ದುದರಿಂದ ಕಾಗಿನೆಲೆ ಅಭಿವೃದ್ಧಿ ಪ್ರಾಧಿಕಾರ ಅಧ್ಯಾದೇಶ, 2005 ನ್ನು (2005 ರ ಕರ್ನಾಟಕ ಅಧ್ಯಾದೇಶ ಸಂಖ್ಯೆ 2) 2005 ರ ಜೂನ್ 10 ನೇ ದಿನಾಂಕದಂದು ಪ್ರಖ್ಯಾಪಿಸಲಾಯಿತು ಮತ್ತು ಈಗ ಅದರ ಸಮಯವ್ಯಾಪ್ತಿ ಮುಗಿದಿದೆ.

ಸದರಿ ಅಧ್ಯಾದೇಶಕ್ಕೆ ಬದಲಾಗಿ ಈ ವಿಧೇಯಕವನ್ನು ಮಂಡಿಸಲಾಗಿದೆ.

ಜಿ. ಕರುಣಾಕರ ರೆಡ್ಡಿ
ಕಂದಾಯ ಸಚಿವರು

ಎಸ್.ಜಿ. ಪಾಟೀಲ್
ಕಾರ್ಯದರ್ಶಿ
ಕರ್ನಾಟಕ ವಿಧಾನಸಭೆ